ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 143
17–11–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 143

# ಸಚಿವ ಸಂಪುಟ ಪುನಾರಚನೆ : ಮಂತ್ರಿಗಿರಿ ಗಿಟ್ಟಿಸಿಕೊಳ್ಳಲು ಶಾಸಕರ ದೆಹಲಿ ಯಾತ್ರೆ

**ಬೆಂಗಳೂರು, ನ.16–** ಸಚಿವ ಸಂಪುಟ ಪುನರ್‌ರಚನೆಗೆ ಕಾಂಗ್ರೆಸ್ ಹೈಕಮಾಂಡ್ ಹಸಿರು ನಿಶಾನೆ ತೋರಿಸಿರುವ ಹಿನ್ನೆಲೆಯಲ್ಲಿ ಅವಕಾಶ ಗಿಟ್ಟಿಸಲು ಶಾಸಕರು ದೆಹಲಿಯಾತ್ರೆ ಆರಂಭಿಸಿದರೆ, ಹಾಲಿ ಸಚಿವರಿಗೆ ಹುದ್ದೆ ಕಳೆದುಕೊಳ್ಳುವ ಆತಂಕ ಹೆಚ್ಚಾಗಿದೆ.

ಬಿಹಾರ ವಿಧಾನಸಭೆ ಚುನಾವಣೆ ಸೋಲಿನ ಹಿನ್ನೆಲೆಯಲ್ಲಿ ನಿನ್ನೆ ಸಿದ್ದರಾಮಯ್ಯ ಅವರ ದೆಹಲಿ ಭೇಟಿಯ ವೇಳೆ ಹೆಚ್ಚಿನ ಚರ್ಚೆಯಾಗಿಲ್ಲ. ಆದರೆ, ರಾಹುಲ್‌ಗಾಂಧಿ ಅವರನ್ನು ಭೇಟಿ ಮಾಡಿದ ವೇಳೆ ಸಂಪುಟ ಪುನರ್‌ರಚನೆಗೆ ಹಸಿರು ನಿಶಾನೆ ತೋರಿಸಿದ್ದಾರೆ ಎಂದು ಹೇಳಲಾಗಿದೆ. ಸರ್ಕಾರ ಎರಡೂವರೆ ವರ್ಷ ಪೂರೈಸಿ ರುವ ಹಿನ್ನೆಲೆಯಲ್ಲಿ ಸಂಪುಟ ಪುನರ್‌ರಚನೆ ಕೈಗೊಳ್ಳ ಬಹುದು ಎಂದು ರಾಹುಲ್‌ಗಾಂಧಿ ಹೇಳಿದ್ದು, ಇನ್ನು ಮುಂದೆ ಯಾರನ್ನು ಕೈಬಿಡಬೇಕು

ಯಾರನ್ನು ಸೇರಿಸಿಕೊಳ್ಳಬೇಕು ಎಂಬ ಚರ್ಚೆಗಳು ಇಂದಿನಿಂದ ಆರಂಭವಾಗಲಿವೆ.

ನಿನ್ನೆ ರಾತ್ರಿಯೇ ದೆಹಲಿಯಿಂದ ಬೆಂಗಳೂರಿಗೆ ವಾಪಸ್ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಸಂಜೆ ಪ್ರಧಾನಮಂತ್ರಿ ನರೇಂದ್ರಮೋದಿ ಅವರನ್ನು ಭೇಟಿ ಮಾಡಿದ ವೇಳೆ ಸಲ್ಲಿಸಬೇಕಾದ ಮನವಿ ಪತ್ರ ತಯಾರಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲೇ ಬೀಡು ಬಿಟ್ಟಿದ್ದು, ರಾಜಕೀಯ ಚರ್ಚೆ ನಡೆಸುತ್ತಿದ್ದಾರೆ.

ಇಂದು ಬೆಳಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ಭೇಟಿ ನೀಡುತ್ತಿದ್ದು, ಹೈಕಮಾಂಡ್ ನಾಯಕರ ಜೊತೆ ಮಹತ್ವದ ಮಾತುಕತೆ ನಡೆಸಲಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್‌ಸಿಂಗ್ ಸುರ್ಜೇವಾಲ ಅವರ ಜೊತೆ ಚರ್ಚೆ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.



ಶಾಸಕರಾದ ಪಿ.ಎಂ ಅಶೋಕ್. ಎ.ಎಸ್.ಪೊನ್ನಣ್ಣ, ಬಸವರಾಜ ರಾಯ–ರೆಡ್ಡಿ, ಅಪ್ಪಾಜಿನಾಡಗೌಡ ಮತ್ತಿತರರು ಮುಖ್ಯಮಂತ್ರಿ ಅವರ ಜೊತೆ ದೆಹಲಿಯಲ್ಲಿ ಬೀಡು ಬಿಟ್ಟಿದ್ದು, ಸಚಿವ ಸ್ಥಾನ ಗಿಟ್ಟಿಸಲು ಲಾಬಿ ನಡೆಸುತ್ತಿದ್ದಾರೆ. ಜೇವರ್ಗಿ ಶಾಸಕ ಅಜಯ್‌ಸಿಂಗ್, ದಿಢೀರ್ ದೆಹಲಿಗೆ ತೆರಳಿದ್ದು ವರಿಷ್ಠರನ್ನು ಮನವೊಲಿಸಿ ಅವಕಾಶ ಗಿಟ್ಟಿಸುವ ಪ್ರಯತ್ನ ನಡೆಸುತ್ತಿದ್ದಾರೆ.

ಸಚಿವ ಸಂಪುಟ ಪುನರ್‌ರಚನೆಯಲ್ಲಿ ಬಹಳಷ್ಟು ಮಂದಿ ಸಚಿವರನ್ನು ಕೈ ಬಿಡುವ ಸಾಧ್ಯತೆಯೂ ಇದೆ. ಮೂಲಗಳ ಪ್ರಕಾರ ಕೆ.ಎಚ್. ಮುನಿಯಪ್ಪ, ಎಚ್.ಸಿ. ಮಹದೇವಪ್ಪ, ಕೆ. ವೆಂಕಟೇಶ್, ಶರಣಬಸಪ್ಪ ದರ್ಶನಪುರ್, ಶಿವಾನಂದ ಪಾಟೀಲ್, ಆರ್.ಬಿ. ತಿಮಾಪುರ್, ಡಾ. ಶರಣಪ್ರಕಾಶ್ ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್, ರಹೀಂಖಾನ್, ಡಿ. ಸುಧಾಕರ್ ಅವರು ಅವಕಾಶ ಕಳೆದುಕೊಳ್ಳುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ಕೆಲವು ಸಚಿವರು ದೆಹಲಿಗೆ ಭೇಟಿ ನೀಡುತ್ತಿದ್ದು ಕುರ್ಚಿ ಭದ್ರಪಡಿಸಿಕೊಳ್ಳಲು ಹೈಕಮಾಂಡ್ ನಾಯಕರ ಮೇಲೆ ಒತ್ತಡ ಹೇರುತ್ತಿದ್ದಾರೆ. ಸಚಿವ ಸಂಪುಟ ಪುನರ್ ರಚನೆ ಹಸಿರು ನಿಶಾನೆ ಸಿಕ್ಕಿರುವ ಹಿನ್ನೆಲೆಯಲ್ಲಿ ನಾಯಕತ್ವದ ಚರ್ಚೆ ನೇಪಥ್ಯಕ್ಕೆ ಸರಿದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಥಾನ ಅಭಾದಿತ ಎನ್ನಲಾಗುತ್ತಿದೆ.

ಮೂಲಗಳ ಪ್ರಕಾರ ಹೈಕಮಾಂಡ್ ಒಪ್ಪಿದರೂ ಸ್ಥಳೀಯ ಪರಿಸ್ಥಿತಿಯಲ್ಲಿ ಸಂಪುಟ ಪುನರ್‌ರಚನೆ ಕಷ್ಟಸಾಧ್ಯ ಎನ್ನಲಾಗುತ್ತಿದೆ. ರಾಜ್ಯ ರಾಜಕಾರಣದಲ್ಲಿ ಮೂರ್ನಾಲ್ಕು ಶಕ್ತಿ ಕೇಂದ್ರಗಳು ಸೃಷ್ಟಿಯಾಗಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಪುಟ ಪುನರ್‌ರಚನೆಯ ಪರಮಾಧಿಕಾರ ಇದ್ದರೂ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪಟ್ಟಿಯನ್ನು ಸಮದೂಗಿಸಬೇಕಿದೆ.

ಕಳೆದ ಎರಡೂವರೆ ವರ್ಷಗಳಿಂದ ನಿಗಮ ಮಂಡಳಿಗಳಿಗೆ ಸದಸ್ಯರು ಹಾಗೂ ನಿರ್ದೇಶಕರನ್ನು ನೇಮಿಸಲು ಸಾಧ್ಯವಾಗಿಲ್ಲ. ಖರ್ಗೆ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರ ಪ್ರತ್ಯೇಕ ಪಟ್ಟಿಗಳು ಗೊಂದಲಕಾರಿಯಾಗಿದ್ದು, ಅದನ್ನು ದೆಹಲಿಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ರಣದೀಪ್‌ಸಿಂಗ್ ಸುರ್ಜೇವಾಲ, ಕೆ.ಸಿ ವೇಣುಗೋಪಾಲ ಅವರು ಒಂದಷ್ಟು ದಿನ ತಮ ಕಚೇರಿಯಲ್ಲಿ ಕೊಳೆ ಹಾಕುವುದರಿಂದಾಗಿ ಯಾವುದು ಇತ್ಯರ್ಥವಾಗಿಲ್ಲ, ನೇಮಕಾತಿಯೂ ಪೂರ್ಣಗೊಂಡಿಲ್ಲ. ಸಚಿವ ಸಂಪುಟ ಪುನರ್‌ರಚನೆ ಚರ್ಚೆಗಳು ಆರಂಭವಾದಾಗಲೂ ಇದೇ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಹೇಳಲಾಗುತ್ತಿದೆ.

## ನ.23ಕ್ಕೆ ಕದಂಬ ಉದ್ಯಾನವನದಲ್ಲಿ 70ನೇ ಕನ್ನಡ ರಾಜ್ಯೋತ್ಸವ

**ದಾವಣಗೆರೆ:** ಜಯನಗರ 'ಸಿ' ಬ್ಲಾಕ್ ನಾಗರಿಕ ಹಿತರಕ್ಷಣಾ ಸಮಿತಿ ವತಿಯಿಂದ ನವೆಂಬರ್ 23ರಂದು ಭಾನುವಾರ ಜಯನಗರ ಸಿ ಬ್ಲಾಕಿನ ಕದಂಬ ಉದ್ಯಾನವನದಲ್ಲಿ 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಆಯೋಜಿಸಲಾಗಿದೆ.

ನ.23ರಂದು ಭಾನುವಾರ ಬೆಳಿಗ್ಗೆ 7.45ಕ್ಕೆ ಧ್ವಜಾರೋಹಣ ನೆರವೇರಿಸಲಾಗುವುದು. ನಂತರ ಕನ್ನಡ ಭುವನೇಶ್ವರಿ ತಾಯಿಯ ಭಾವಚಿತ್ರ ಮೆರವಣಿಗೆಯನ್ನು ಸಕಲ ವಾದ್ಯಗಳೊಂದಿಗೆ ನಡೆಸಲಾಗುವುದು.

ನಂತರ ಸಂಜೆ 5ಕ್ಕೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಜಯನಗರ ಸಿ ಬ್ಲಾಕ್ ನಾಗರಿಕ ಹಿತರಕ್ಷಣಾ ಸಮಿತಿಯ ಅಧ್ಯಕ್ಷ ಬಿ.ಎನ್.ಬಿಕ್ಕೋಜಪ್ಪ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಹಾನಗರ ಪಾಲಿಕೆಯ ಮಾಜಿ ಸದಸ್ಯೆ ಉಮಾ ಪ್ರಕಾಶ್, ದೂಡಾ ಮಾಜಿ ಅಧ್ಯಕ್ಷ ಎ.ವೈ. ಪ್ರಕಾಶ್, ಮಹಾನಗರ ಪಾಲಿಕೆಯ ಮಾಜಿ ಸದಸ್ಯರಾದ ಸವಿತಾ ಹುಲ್ಲುಮನೆ ಗಣೇಶ್, ಅನ್ನಪೂರ್ಣ ಪೂಜಾರ್ ಬಸವರಾಜ್, ಪಿ.ಅಂಜಿನಪ್ಪ, ಬಿ.ಟಿ.ಪ್ರಕಾಶ್ , ಪ್ರಧಾನ ಭಾಷಣಕಾರರಾಗಿ ನಿವೃತ್ತ ಪ್ರಾಂಶುಪಾ ಡಾ.ದಾದಾಪೀರ್ ನವಿಲೇಹಾಳು ಆಗಮಿಸಲಿದ್ದಾರೆ.

ಅತಿಥಿಗಳಾಗಿ ಜಯನಗರ ಸಿ ಬ್ಲಾಕ್ ನಾಗರಿಕ ಹಿತರಕ್ಷಣಾ ಸಮಿತಿಯ ಪದಾಧಿಕಾರಿಗಳಾದ ಟಿ.ಈ.ರುದ್ರಪ್ಪ, ವೈ. ತಿಪ್ಪೇಸ್ವಾಮಿ, ಶೆಟ್ರು, ಡಿ.ರವಿಕುಮಾರ್, ಪಿ.ಎಸ್. ನಾಗರಾಜ್, ಎಸ್.ಸುರೇಶ್ ಹೆಡ್ಲಿಗೇರಿ, ನಿಂಗಪ್ಪ ಇಟಗಿ ಸೇರಿದಂತೆ ಇತರೆ ಗಣ್ಯರು ಆಗಮಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಗಣ್ಯರಿಗೆ, ದಾನಿಗಳಿಗೆ, ನಾಗರಿಕ ಹಿತರಕ್ಷಣಾ ಸಮಿತಿಯ ಪದಾಧಿಕಾರಿಗಳಿಗೆ ಸನ್ಮಾನ ಮಾಡಲಾಗುವುದು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಜಯನಗರ ಸಿ ಬ್ಲಾಕ್ ನಾಗರಿಕ ಹಿತರಕ್ಷಣಾ ಸಮಿತಿಯ ಪದಾಧಿಕಾರಿಗಳು ತಿಳಿಸಿದ್ದಾರೆ.

## ಹುಬ್ಬಳ್ಳಿಯಲ್ಲಿ ಘರ್ಜಿಸಿದ ಪೊಲೀಸರ ಪಿಸ್ತೂಲ್, ಕೊಲೆ ಆರೋಪಿಳಿಗೆ ಗುಂಡೇಟು



**ಹುಬ್ಬಳ್ಳಿ, ನ.16–** ಸ್ಥಳ ಮಹಜರು ವೇಳೆ ಪೊಲೀಸರ ಮೇಲೆಯೇ ಹಲ್ಲೆ ನಡೆಸಿ ಪರಾರಿಯಾಗುತ್ತಿದ್ದ ಕೊಲೆ ಪಾತಕಿಗಳಿಬ್ಬರಿಗೆ ಪೊಲೀಸರು ಗುಂಡಿನ ರುಚಿ ತೋರಿಸಿ ಬಂಧಿಸಿರುವ ಘಟನೆ ಇಂದು ಬೆಳಗ್ಗೆ ವಾಣಿಜ್ಯನಗರಿಯಲ್ಲಿ ನಡೆದಿದೆ.

ಹುಬ್ಬಳ್ಳಿಯ ಮಂಟೂರ ರಸ್ತೆಯಲ್ಲಿ ಪೊಲೀಸರು ಇಂದು ಮಹಜರಿಗೆ ಕರೆದೊಯ್ಯುತ್ತಿದ್ದಾಗ ಈವೇಳೆ ಈ ಘಟನೆ ನಡೆದಿದೆ.ಆರೋಪಿಗಳಾದ ಬಾಲರಾಜ ಅಲಿಯಾಸ್ ಬಂಗಾರ ಬಾಲ್ಯಾ ಮತ್ತು ಮೊಹಮದ್ ಶೇಖ್ ಕಾಲಿಗೆ ಗುಂಡು ತಾಗಿದ್ದು ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಎರಡು ದಿನಗಳ ಹಿಂದೆ ನಡೆದಿದ್ದ ಮಲ್ಲಿಕ ಅದಂಬಾಯಿ ಎಂಬುವವರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬೆಂಡಿಗೇರಿ ಪೊಲೀಸರು ಬಂಧಿಸಿದ್ದರು. ಇಂದು ಬೆಳಗ್ಗೆ ಆರೋಪಿಗಳನ್ನು ಸ್ಥಳ ಮಹಜರಿಗಾಗಿ ಮಂಟೂರು ರಸ್ತೆಯ ಬಳಿ ಕರೆದುಕೊಂಡು ಹೋಗುವಾಗ ಪೊಲೀಸರ ಮೇಲೆಯೇ ಕಲ್ಲು ತೂರಾಟ ನಡೆಸಿ, ಅಲ್ಲಿಂದ ಇಬ್ಬರು ಆರೋಪಿಗಳು ಪರಾರಿಯಾಗಲು ಪ್ರಯತ್ನಿಸಿದಾಗ ಇನ್?ಸಪೆಕ್ಟರ್ ಎ.ಆರ್. ನಾಯ್ಕ ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಸಿದ್ದಾರೆ.

ಈ ವೇಳೆ ಇದನ್ನು ಲೆಕ್ಕಿಸದೇ ಪರಾರಿಯಾಗುತ್ತಿದ್ದಾಗ ಎರಡು ಗುಂಡು ಆರೋಪಿಗಳ ಕಾಲುಗಳಿಗೆ ತಾಗಿದಾಗ ಇಬ್ಬರು ಕುಸಿದು ಬಿದ್ದಿದ್ದಾರೆ.ನಂತರ ಅವರನ್ನು ಚಿಕಿತ್ಸೆಗಾಗಿ ಕಿಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಗೊಂಡಿರುವ ಪೊಲೀಸ್ ಕಾನ್ಸ್‌ಟೆಬಲ್ ಕೂಡ ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಶಶಿಕುಮಾರ್ ಹಾಗೂ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ನಾಯಿ ಕಡಿತದಿಂದ 20 ಕುರಿಗಳು ಸಾವು



**ಬೀರೂರು:** ಕುರಿ ಮಂದೆಯ ಮೇಲೆ ನಾಯಿಗಳು ದಾಳಿ ಮಾಡಿದ ಪರಿಣಾಮ 20 ಕುರಿಗಳು ಮೃತಪಟ್ಟ ಘಟನೆ ಬೀರೂರು ಹೋಬಳಿಯ ಜೋಡಿತಿಮ್ಮಾಪುರದಲ್ಲಿ ನಡೆದಿದೆ.

ಹಿರಿಯೂರು ತಾಲ್ಲೂಕಿನ ಪಿಲಾಜನಹಳ್ಳಿಯ ಶಿವಪ್ಪ ಎಂಬುವವರು ಸುಮಾರು 400 ಕುರಿಗಳಿರುವ ಮಂದೆಯನ್ನು ಜೋಡಿತಿಮ್ಮಾಪುರದ ಬಳಿಯ ಜಮೀನೊಂದರಲ್ಲಿ ನಿಲ್ಲಿಸಿದ್ದರು. ಕುರಿಗಳನ್ನು ಮೇಯಿಸಲು ಹೋದ ಸಂದರ್ಭದಲ್ಲಿ ಏಕಾಏಕಿ ನಲವತ್ತಕ್ಕೂ ಹೆಚ್ಚು ಕುರಿಗಳ ಮೇಲೆ ನಾಯಿಗಳು ದಾಳಿ ನಡೆಸಿವೆ. ಈ ಪೈಕಿ 20 ಕುರಿಗಳು ನಾಯಿ ಕಡಿತದಿಂದ ಮೃತಪಟ್ಟಿವೆ.ಈ ಕುರಿತು ಬೀರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪಶುವೈದ್ಯಾಧಿಕಾರಿ ಡಾ. ಮೋಹನ್ ಮೃತಪಟ್ಟ ಕುರಿಗಳ ಮರಣೋತ್ತರ ಪರೀಕ್ಷೆ ನಡೆಸಿದರು. ಕುರಿಮಂದೆಯನ್ನು ಜಮೀನುಗಳಲ್ಲಿ ನಿಲ್ಲಿಸುವ ಕಾಯಕ ನಮ್ಮದಾಗಿದ್ದು, ಹಿರಿಯೂರಿನಿಂದ ವಲಸೆ ಬಂದಿರುತ್ತೇವೆ. ಜಮೀನುಗಳಲ್ಲಿ ದಿನಕ್ಕಿಷ್ಟು ಎಂದು ನಿಗಧಿಪಡಿಸಿದ ಹಣ ಪಡೆದು ಮಂದೆ ನಿಲ್ಲಿಸುತ್ತೇವೆ. ಹೀಗೆಯೇ ಊರಿಂದೂರಿಗೆ ಹೋಗುವ ಅಲೆಮಾರಿ ಜೀವನ ನಮ್ಮದು. ಇಂತಹ ಸಮಯದಲ್ಲಿ ನಾಯಿಗಳ ದಾಳಿಗೆ 20 ಕುರಿಗಳು ಸತ್ತಿರುವುದು ಲಕ್ಷಾಂತರ ರೂಪಾಯಿ ನಷ್ಟವಾಗಿದೆ ಎಂದು ಶಿವಪ್ಪ ಅಳಲು ತೋಡಿಕೊಂಡರು.

## ಸರ್ಕಾರ ಭೂಮಿ–ಮತ್ತು ವಸತಿ ವಿಚಾರಕ್ಕೆ ಗಟ್ಟಿಯಾದ ತೀರ್ಮಾಕ್ಕಾಗಿ ನ.26ರಂದು ಬೆಂಗಳೂರು ಚಲೋ

**ದಾವಣಗೆರೆ:** ಸಂಯುಕ್ತ ಹೋರಾಟ ಕರ್ನಾಟಕ ನೇತೃತ್ವದಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯು ನವೆಂಬರ್ 26ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸರ್ಕಾರ ಭೂಮಿ–ಮತ್ತು ವಸತಿ ವಿಚಾರಕ್ಕೆ ಗಟ್ಟಿಯಾದ ತೀರ್ಮಾನವನ್ನು ಮಾಡಲೇಬೇಕು ಹಾಗೂ ಓನ್ ಟೈಂ ಸೆಟ್ಲಮೆಂಟ್ ಜಾರಿಗೆ ಒತ್ತಾಯಿಸಿ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿದೆ.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಕಾರ್ಯದರ್ಶಿ ಕುಮಾರ್ ಸಮತಳ ಮಾತನಾಡಿ, ನಾವು ಬಡವರ ಪರ, ದಲಿತರ ಪರ ಎಂದು ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರಕ್ಕೆ ಸಾಕಷ್ಟು ಬಾರಿ ಮನವಿ ಮಾಡಿದ್ದರು ಯಾವುದೇ ಪ್ರಯೋಜನವಾಗಿಲ್ಲ. ಹೋರಾಟದ ಎಚ್ಚರಿಕೆ ನೀಡಿದ್ದರು ಕೂಡ ಭೂಮಿ–ಮತ್ತು ವಸತಿ ವಿಚಾರದ ದಶಕಗಳ ಸಮಸ್ಯೆಗೆ ಪರಿಹಾರ ನೀಡುತ್ತಿಲ್ಲ. ಆದ್ದರಿಂದ ಈ ಬಾರಿ ಎಲ್ಲಾ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಪರಿಹಾರ ಸಿಗುವವರೆಗೂ ಬೃಹತ್ ಪ್ರತಿಭಟನೆ ಮಾಡಲಿದ್ದೇವೆ ಎಂದರು.

ಕೇಂದ್ರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರ ಆದಿವಾಸಿಗಳನ್ನೂ ಬಿಡದೆ ಬೀದಿಗೆ ತಳ್ಳುತ್ತಾ ಲಕ್ಷಾಂತರ ಎಕರೆ ಭೂಮಿಗಳನ್ನು ದೇಶದ ಅತ್ಯಂತ ಲೂಟಿಕೋರ ಅಂಬಾನಿ–ಅದಾನಿಗಳಿಗೆ ಮತ್ತು ವಿದೇಶಿ ಕಂಪನಿಗಳಿಗೆ ಗಣಿಗಾರಿಕೆ ಮಾಡಲು ಅನುವು ಮಾಡಿಕೊಡುವ ಮೂಲಕ ಬಕಾಸುರನ ಪಾತ್ರ ವಹಿಸುತ್ತಿದೆ. ದೇಶಪ್ರೇಮದ ಹೆಸರಲ್ಲಿ ವಿದೇಶಿಗರ ಸೇವೆಯಲ್ಲಿ ನಿರತವಾಗಿದೆ ಎಂದು ಅವರು ಆರೋಪಿಸಿದರು.

ರಾಜ್ಯದ ದುಡಿಯುವ ಜನರಿಗೆ ಅದರಲ್ಲೂ ಬಗರ್ ಹುಕುಂ ಸಾಗುವಳಿದಾರರಿಗೆ ಭೂಮಿಯ ಹಕ್ಕುಪತ್ರ ನೀಡಲು ಭೂಮಿ ಮಂಜೂರಾತಿ ಸಮಿತಿಗಳನ್ನು ಸರ್ಕಾರ ರಚಿಸಿದ್ದರೂ ಕಾಲಕಾಲಕ್ಕೆ ಸರಿಯಾಗಿ ಸಭೆಗಳು ಆಗುತ್ತಿಲ್ಲ, ಮಂಜೂರಾತಿಯೂ ಆಗುತ್ತಿಲ್ಲ. ಮಂಜೂರಾತಿಗೆ ಹತ್ತಾರು ಕಾನೂನುಗಳ ವಿಘ್ನಗಳನ್ನು ಮುಂದೆ ಮಾಡಲಾಗುತ್ತಿದೆ.

## ವೃಕ್ಷ ಮಾತೆಗೆ ನಗರದಲ್ಲಿ ವಿವಿಧ ಸಂಘಟನೆಗಳಿಂದ ಶ್ರದ್ಧಾಂಜಲಿ



**ದಾವಣಗೆರೆ:** ಪದ್ಮಶ್ರೀ ಪುರಸ್ಕೃತೆ ಸಾಲುಮರದ ತಿಮ್ಮಕ್ಕನವರ ನಿಧನದ ಹಿನ್ನೆಲೆಯಲ್ಲಿ ಸರ್ವಧರ್ಮ ಯುವ ಸೇನೆ, ಅಖಿಲ ಭಾರತ ಹಿಂದೂ ಮಹಾ ಸಭಾ, ಸಮಗ್ರ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, 1114 ಸಸಿ ವಿತರಣೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಮೂರು ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಜಯದೇವ ವೃತ್ತದಲ್ಲಿ ಶ್ರದ್ಧಾಂಜಲಿ ಸಭೆ ನಡೆಸಿ, ಸಾಲುಮರದ ತಿಮ್ಮಕ್ಕನವರ ಪರಿಸರ ಕಾಳಜಿ ಸ್ಮರಿಸಲಾಯಿತು.

ಸಾಲುಮರದ ತಿಮ್ಮಕ್ಕನವರ ಕೊಡುಗೆ ದೇಶಕ್ಕೆ ಅಪಾರ, ಅವರಿಗೆ ಮಕ್ಕಳಾಗದಿದ್ದಕ್ಕೆ ನಿರಾಶರಾಗದೆ ತನ್ನ ಪತಿಯೊಂದಿಗೆ 385 ಆಲದ ಮರಗಳನ್ನು 4 ಕಿ. ಮೀ. ರಸ್ತೆ ಬದಿ ನೆಟ್ಟು ಮಕ್ಕಳಂತೆ ಆ ಮರಗಳನ್ನು ಪೋಷಿಸಿ ಸುಮಾರು 8000 ಗಿಡಗಳನ್ನು ನೆಟ್ಟು ಹಲವಾರು ಪ್ರಶಸ್ತಿಗಳನ್ನು ಪಡೆದು ಸಾಮಾನ್ಯ ವ್ಯಕ್ತಿ ಸಮಾಜದಲ್ಲಿ ಆದರ್ಶವಾಗಿ ಬದುಕುವುದನ್ನು ಕಲಿಸಿದ್ದಾರೆ ಎಂದು ಮುಕಂಡರು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಪಾಲಿಕೆ ಮಾಜಿ ಸದಸ್ಯ ಜೆ.ಎನ್. ಶ್ರೀನಿವಾಸ, ಆಶ್ರಯ ಸಮಿತಿ ಸದಸ್ಯ ಕಣ್ಣಾಳ ಅಂಜಿನಪ್ಪ, ಅಖಿಲ ಭಾರತ ಹಿಂದೂ ಮಹಾಸಭಾ ಜಿಲ್ಲಾಧ್ಯಕ್ಷ ಜೆ. ಅರುಣ್ ಕುಮಾರ್, ಸರ್ವ ಧರ್ಮ ಯುವ ಸೇನೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಹೆಚ್.ಎಸ್ ದೊಡ್ಡಶ್, ಸಮಗ್ರ ಕರ್ನಾಟಕ ರಕ್ಷಣಾ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಅವಿನಾಶ್ (ಅಭಿ), ವಕೀಲ ಚಕ್ರವರ್ತಿ, ಪ್ರಕಾಶ, ಪದಾಧಿಕಾರಿಗಳಾದ ರೆಹಮಾನ್ ಖಾನ್, ವೈ. ಪರುಶುರಾಮ, ಜೋಗಾರಾಮ್, ಎಸ್. ರಾಜು, ಎಲ್. ಕೆ. ಪ್ರಕಾಶ, ಅರುಣ್ ಕುಮಾರ ಉಪಸ್ಥಿತರಿದ್ದರು.

## ದೆಹಲಿ ಬಾಂಬ್ ಬ್ಲಾಸ್ಟ್ ಖಂಡಿಸಿ ಹಿಂದೂ ಜಾಗರಣಾ ವೇದಿಕೆ ಪ್ರತಿಭಟನೆ

**ದಾವಣಗೆರೆ :** ದೆಹಲಿಯ ಕೆಂಪುಕೋಟೆ ಬಳಿ ನಡೆದ ಬಾಂಬ್ ಸ್ಫೋಟ ಖಂಡಿಸಿ ಹಿಂದೂ ಜಾಗರಣ ವೇದಿಕೆಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಶನಿವಾರ ನಗರದ ಜಯದೇವ ವೃತ್ತದಲ್ಲಿ ಜಮಾಯಿಸಿದ್ದ ಸಂಘಟನೆಯ ಮುಖಂಡರು, ಕಾರ್ಯಕರ್ತರು ಭಯೋತ್ಪಾದಕರ ವಿರುದ್ಧ ಕೂಗಿದರು. ಭಯೋತ್ಪಾದಕರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಸಂಘಟನೆಯ ಪ್ರಾಂತ್ಯ ಸಂಚಾಲಕ ಸತೀಶ್ ಪೂಜಾರಿ ಮಾತನಾಡಿ, ದೆಹಲಿಯ ಕಾರ್ ಬಾಂಬ್ ಸ್ಫೋಟ ಕೃತ್ಯದಲ್ಲಿ ತೊಡಗಿದ್ದವರೆಲ್ಲರೂ ವೈದ್ಯಕೀಯ ಪದವಿ ಪಡೆದವರಾಗಿದ್ದಾರೆ. ಈ ದೇಶದ ಅನ್ನ ತಿಂದು ಇದೇ ದೇಶಕ್ಕೇ ದ್ರೋಹ ಬಗೆಯುವ ಕೃತ್ಯದಲ್ಲಿ ಭಾಗಿಯಾಗಿದ್ದಾರೆ. ಅವರಿಗೆಲ್ಲ ಮೌಲ್ವಿಯೊಬ್ಬರು ಬಾಂಬ್ ತಯಾರಿಕೆಯ ತರಬೇತಿ ನೀಡಿರುವ ಮಾಹಿತಿ ಬಹಿರಂಗಗೊಂಡಿದೆ. ಆದರೂ ಮುಸಿಮರ ತುಷ್ಟೀಕರಣದಲ್ಲಿ ತೊಡಗಿರುವ ರಾಜಕಾರಣಿಗಳು ಈ ಬಗ್ಗೆ ಧ್ವನಿ ಎತ್ತುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮುಸ್ಲಿಮರು ಅನಕ್ಷರಸ್ಥರಾದರೆ ಕಲ್ಲು ತೂರುತ್ತಾ–ರೆ. ವಿದ್ಯೆ ಕಲಿತವರು ದೇಶಕ್ಕೆ ಬಾಂಬ್ ಹಾಕುತ್ತಾರೆ. ಅನ್ನ ತಿಂದ ಮನೆಗೆ ಕನ್ನಾ ಹಾಕುವುದೇ ಇವರ ಮನಸ್ಥಿತಿಯಾಗಿದೆ. ಮುಸಲ್ಮಾನರು ಮಾಜಿ ರಾಷ್ಟ್ರಪತಿ ಎ.ಪಿ.ಜೆ.ಅಬ್ದುಲ್ ಕಲಾಂ, ಕ್ರಾಂತಿಕಾರಿ ಅಶ್ಫಾಕುಲ್ಲಾ ಖಾನ್ ರೀತಿಯ ದೇಶಭಕ್ತರನ್ನು ಅನುಸರಿಸಬೇಕೆ ಹೊರತು ಬಾಂಬ್ ಹಾಕುವ ಭಯೋತ್ಪಾದಕರನ್ನು ಅಲ್ಲ ಎಂದರು.

ರಾಜ್ಯದಲ್ಲಿ ನಡೆದ ಕೆ.ಜಿ.ಹಳ್ಳಿ, ಡಿ.ಜೆ.ಹಳ್ಳಿಯ ಗಲಭೆ, ಚನ್ನಗಿರಿಯಲ್ಲಿ ಪೊಲೀಸ್ ಠಾಣೆ ಮೇಲಿನ ಕಲ್ಲು ತೂರಾಟ ಸಂದರ್ಭದಲ್ಲಿ ಸಚಿವರೊಬ್ಬರು ತಪ್ಪಿತಸ್ಥರ ಬೆನ್ನಿಗೆ ನಿಂತಿದ್ದರು. ಅಮಾಯಕರು, ಅನಕ್ಷರಸ್ಥರು ಅಂತೆಲ್ಲಾ ವಾದ ಮಂಡಿಸಿದ್ದರು. ಆದರೆ ದೆಹಲಿ ಬಾಂಬ್ ಸ್ಫೋಟದಲ್ಲಿ ವೈದ್ಯಕೀಯ ಪದವಿ ಪಡೆದವರ ಕೈವಾಡ ಇರುವುದು ಬಹಿರಂಗವಾದರೂ ಆ ಸಚಿವರಿಗೆ ಮಾತನಾಡಲು ಧ್ವನಿ ಅಡಗಿಹೋಗಿದೆ ಎಂದು ಅವರು ಕಿಡಿಕಾರಿದರು.

ದೇಶಭಕ್ತರನ್ನು ಸಂಘಟಿಸುವ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥಸಂಚಲನಕ್ಕೆ ಕೆಲ ರಾಜಕಾರಣಿಗಳು ವಿರೋಧ ವ್ಯಕ್ತಪಡಿಸುತ್ತಾರೆ. ಆದರೆ ಭಯೋತ್ಪಾದಕರು 11 ಕಡೆ ಬಾಂಬ್ ಸ್ಫೋಟಿಸಲು ಸಂಚು ರೂಪಿಸಿದ್ದು, ಅದರಲ್ಲಿ ಒಂದನ್ನು ಹೊರತುಪಡಿಸಿ ಎಲ್ಲವನ್ನೂ ಭದ್ರತಾ ಪಡೆಗಳು ವಿಫಲಗೊಳಿಸಿದ್ದರ ಬಗ್ಗೆ ಮಾತನಾಡುತ್ತಿಲ್ಲ. ಬಾಂಬ್ ಸ್ಫೋಟಿಸಿದವರ ಬಗ್ಗೆಯೂ ಮಾತನಾಡುತ್ತಿಲ್ಲ. ಕೇವಲ ಗುಪ್ತಚರ ಇಲಾಖೆ, ಭದ್ರತಾ ವೈಫಲ್ಯ ಎಂದೆಲ್ಲಾ ಬೊಬ್ಬೆ ಹೊಡೆಯುತ್ತಿದ್ದಾರೆ ಎಂದು ಅವರು ಕಿಡಿಕಾರಿದರು.

ಸಂಘಟನೆ ಮುಖಂಡರಾದ ಪವನ್, ಚೇತನ್, ವೀರೇಶ್, ಮಂಜು, ರಾಕೇಶ್, ಅನಿಲ್, ಗಣೇಶ್, ನವೀನ್ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಕಲ್ಲು ಹೃದಯ ಕರಗಿಸುವ ಇಬ್ಬರು ಕನ್ನಡತಿಯರ ಪ್ರಭೆ

## ದಾವಣಗೆರೆಯಲ್ಲಿ ನೋಡುಗರ ಮನ ಗೆದ್ದ ಡಾ. ರಾಜಪ್ಪ ದಳವಾಯಿ ಅವರ ಪ್ರತಿಗಂಧರ್ವ ನಾಟಕ

ರಂಗಭೂಮಿ ಹಾಗೂ ಸಂಗೀತ ಮೇರು ಪ್ರತಿಭೆಗಳಾದ ಬೀಳಗಿಯ ಅಮೀರ್‌ಬಾಯಿ ಕರ್ನಾಟಕಿ ಹಾಗೂ ಗೋಹರ್ ಬಾಯಿ ಕರ್ನಾಟಕಿ ಸಹೋದರಿಯರು ಪುಣೆ, ಮಹಾರಾಷ್ಟ್ರದ ನೆಲದಲ್ಲಿ ತಮ್ಮದೇ ಛಾಪು ಮೂಡಿಸಿದವರು. ರಂಗಭೂಮಿ ಹಾಗೂ ಸಿನಿಮಾದಲ್ಲಿ ಗಟ್ಟಿತನದ ಹೆಜ್ಜೆ ಮೂಡಿಸಿವರು ಕೂಡ.

ಕಲಾ ಪ್ರೌಢರಾದ ಇಬ್ಬರು ಸಹೋದರಿಯರಿಗಿದ್ದ ಅಂತಃಕರಣೆ, ಮಾನವ ಪ್ರೀತಿ ಎಂಬುದು ಅವರನ್ನು ದುರಂತ ನಾಯಕಿರನಗ್ನಾಗಿಸುವ ಪರಿ ಕಲ್ಲು ಹೃದಯ ಕರಗಿಸುವಂತಿದೆ. ಜಾತಿ, ಧರ್ಮ ಮೀರಿದ ಪ್ರೀತಿ ಕಾರಣ್ಯ ಇವರ ಸಾಧನೆಯ ಶಿಖರವೇರಲು ಅಡ್ಡಿಯಾಗುತ್ತದೆ. ಆದರೆ, ಇವರ ಜೀವನ ನೋಡುಗ–'ರ ಹೃದಯ ಗೆಲ್ಲುತ್ತದೆ.

ಕನ್ನಡದವರೇ ಆದ ಇಬ್ಬರು ಮುಸ್ಲಿಂ ಸಹೋದರಿಯರ ಕಲೆ, ಬದುಕು ಕುರಿತ ಡಾ. ರಹಮತ್ ತರೀಕೆರೆ ಅವರ ಸಂಶೋಧನಾ ಕೃತಿ ಕನ್ನಡ ಸಾಹಿತ್ಯ ಸಾಲಿನಲ್ಲಿ ಮೇರು ಶಿಖರದಲ್ಲಿ ನಿಂತಿದೆ. ಈ ಕೃತಿ ಈಗ ನಾಟಕ ರೂಪದಲ್ಲಿ ಕನ್ನಡಿಗರ ಮುಂದೆ ಮತ್ತೊಮ್ಮೆ ಅನಾವರಣಗೊಳ್ಳುತ್ತಿದೆ. ಕನ್ನಡ ನಾಡಿನ ಗರ್ಭದಲ್ಲಿ ಅಡಗಿದ್ದ ಸಾಮರಸ್ಯದ ವಜ್ರಗಳೆರಡನ್ನು ರಮಹತ್ ಅವರು ಹೊರ ತಂದಿರುವುದನ್ನು ಇಲ್ಲಿ ನೋಡಬಹುದುದಾಗಿದೆ.

ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ವೃತ್ತಿ ರಂಗಭೂಮಿ ರಂಗಾಯಣದ ವತಿಯಿಂದ ಪ್ರದರ್ಶನಗೊಂಡ ಈ ನಾಟಕ ಜನಮನ ಸೆಳೆಯುವಲ್ಲಿ ಯಶಸ್ವಿಯಾಯಿತು. ಡಿಜಿಟಲ್ ಯುಗದಲ್ಲಿಯೂ ಸಾವಿರಕ್ಕೂ ಹೆಚ್ಚು ನೋಡುಗರು ಆಗಮಿಸಿ ರಾತ್ರಿ 10.30ರ ತನಕ ನಾಟಕ ವೀಕ್ಷಣೆ ಮಾಡಿದ್ದು ಒಂದು ವಿಸ್ಮಯವೇ ಸರಿ.

ಇಂಥ ಪ್ರಯತ್ನ ಮಾಡಿದ ರಂಗಾಯಣದ ನಿರ್ದೇಶಕ ಮಲ್ಲಿಕಾರ್ಜುನ್ ಕಡಕೋಳ ಹಾಗೂ ವಿಶೇಷ ಅಧಿಕಾರಿ ರವಿಚಂದ್ರ ಹಾಗೂ ಹಿರಿಯ ಕಲಾವಿದ ಸಿದ್ದರಾಜು ಅವರ ಪರಿಶ್ರಮವನ್ನು ಮೆಚ್ಚಲೇಬೇಕು. ಬೆಂಗಳೂರು, ಸಾಗರ, ಚಿಕ್ಕಮಗಳೂರು, ಹಂಪಿ, ಗುಲ್ಬರ್ಗ, ಧಾರವಾಡ, ಹುಬ್ಬಳ್ಳಿ, ಬಿಜಾಪುರ ಸೇರಿದಂತೆ ವಿವಿಧ ಜಿಲ್ಲೆಂಗಳಿಂದ ಈ ನಾಟಕ ನೋಡಲು ಪ್ರೇಕ್ಷಕರು ಬಂದಿದ್ದರು ಎಂಬುದು ವಿಸ್ಮಯವಲ್ಲದೆ ಮತ್ತೇನು?

ಬುದ್ಧಿ ಭ್ರಮಣೆ ಮಾಡಿ ಮೆದಳು ಮಂಕಾಗಿಸುವ ಡಿಜಿಟಲ್ ರಾಕ್ಷಸನ ಕೈಯಿಂದ ಜನರನ್ನು ಕಾಪಾಡಬೇಕಾದರೆ ಕನಿಷ್ಟ ನಗರ ಕೇಂದ್ರಗಳಲ್ಲಾದರೂ ವಾರಕ್ಕೊಮ್ಮೆ ಇಂಥ ಉತ್ತಮ ನಾಟಕ ಪ್ರದರ್ಶನಗೊಳ್ಳಬೇಕಿದೆ.





ಹೆಣ್ಣನ್ನು ತುಳಿಯುವವರು ಅವಳ ನೆರಳಲ್ಲಿ ನಿಂತಿರುವುದು ಮರೆಯ ಬಾರದು

ಸಾಧನೆ ಮಾಡುವ ಹೆಣ್ಣನ್ನೂ ತುಳಿಯುವ ಪುರಷ ಪ್ರಧಾನ ಸಮಾಜ ಹೆಣ್ಣಿನ ನೆರಳಲ್ಲಿಯೇ ಬದುಕುತ್ತಿದೆ ಎಂಬುದನ್ನು ಮರೆಯಬಾರದು ಎಂದು ರಂಗಭೂಮಿ ಹಿರಿಯ ಕಲಾವಿದೆ ಬಿ. ಜಯಶ್ರೀ ಮಾರ್ಮಿಕವಾಗಿ ನುಡಿದಿದ್ದಾರೆ.

ನಗರದ ದೃಶ್ಯಕಲಾ ಮಹಾವಿದ್ಯಾಲಯದ ಬಯಲು ರಂಗ ಮಂದಿರದಲ್ಲಿ ಶನಿವಾರ ನಡೆದ ಪ್ರತಿಗಂಧರ್ವ ನಾಟಕ ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು.

ಪ್ರತಿ ಹಂತದಲ್ಲಿಯೂ ಹೆಣ್ಣಿನ ಪ್ರತಿಭೆ ತುಳಿಯುವ ಜಾಯಮಾನ ಇನ್ನೂ ಉಳಿದುಕೊಂಡಿದೆ. ಸರ್ವಶಕ್ತಳಾದ ಹೆಣ್ಣಿನ ಅಭ್ಯುದಯ ತಡೆಯಲಾಗುದು. ಅವಳಿಲ್ಲದೆ ಸಮಾಜ, ಜೀವನ ನಡೆಯದು. ಸಮಾನ ಅವಕಾಶ ಕಲ್ಪಿಸಿದಾಗ ಮಾತ್ರ ಜೀವನ ಪರಿಪೂರ್ಣವಾಗಲು ಸಾಧ್ಯ ಎಂದು ಹೇಳಿದರು.

ಪ್ರತಿ ಗಂಧರ್ವ ನಾಟಕ ಕನ್ನಡ ಇಬ್ಬರು ಹೆಣ್ಣು ಮಕ್ಕಳ ಸಂಗೀತ, ಕಲಾ ಸಾಧನೆ ಕುರಿತ ಅಪರೂಪದ ಕತೆ. ಬಾಲ ಗಂಧರ್ವರಿಗೆ ಪ್ರತಿಯಾಗಿ ಬೆಳೆದ ಅಮೀರ್‌ಬಾಯಿ ಕರ್ನಾಟಕಿ ಹಾಗೂ ಗೋಹರ್ ಬಾಯಿ ಕರ್ನಾಟಕಿ ಅವರ ಸಾಧನೆಯನ್ನು ಪ್ರತಿ ಗಂಧರ್ವ ಎಂದು ಕರೆಯುವುದು ಸರಿಯಲ್ಲ. ಇಬ್ಬರದು ಗಂಧರ್ವರಿಗಿಂತ ವಿಭಿನ್ನವಾದ ಕಲಾ ಸಾಧನೆ ಎಂದ ಜಯಶ್ರೀ ಅವರು, ನಾಟಕದಲ್ಲಿ ಅವರು ಹಾಡಿದ ಹಾಡುಗಳನ್ನೇ ಸಂಗೀತಕ್ಕೆ ಬಳಸಬೇಕು ಎಂದು ಸಲಹೆ ಮಾಡಿದರು.

ಅಮೀರ್‌ಬಾಯಿ ಕರ್ನಾಟಕಿ ಕೃತಿಕಾರ ಹಾಗೂ ಸಂಸ್ಕೃತಿ ಚಿಂತಕ ಡಾ. ರಹಮತ್ ತರೀಕೆರೆ ಮಾತನಾಡಿ, ಅಮೀರ್‌ಬಾಯಿ, ಗೋಹರ್ ಸಹೋದರಿಯರು ಸಂಗೀತ, ಕಲೆ ಮೂಲಕ ಜಾತಿ, ಧರ್ಮದ ಸೀಮೋಲ್ಲಂಘನೆ ಮಾಡಿ ಸಮಾಜದಲ್ಲಿ ಅರಿವಿನ ಬೆಳಕು ನೀಡಿದ್ದಾರೆ. ಸತತ ಐದು ವರ್ಷ ಕಾಲ ಮಹಾರಾಷ್ಟ್ರ, ಬಿಜಾಪುರ ಸೇರಿದಂತೆ ಉತ್ತರ ಕರ್ನಾಟಕ ಸುತ್ತಾಡಿ ಮಾಹಿತಿ ಸಂಗ್ರಹಿಸಿ ಹದಿನೈದು ವರ್ಷದ ಹಿಂದೆ ಈ ಕೃತಿ ಬರೆಯಲಾಗಿತ್ತು ಎಂದರು.

ಈ ಪುಸ್ತಕ ಬಿಡುಗಡೆಯಾದಾಗ ಬೀಳಗಿಯ ಅಮೀರಬಾಯಿ ತಾಯಿ ಸಮಾಧಿಯಿಂದ ಕಂದಗಲ್ಲು ಹನುಮಂತರಾಯರ ರಂಗಮಂದಿರದ 3 ಕಿ.ಮೀ. ದೂರದ ವರೆಗೆ ಕೃತಿಯನ್ನು ಕುದುರೆ ಸಾರೋಟ್‌ನಲ್ಲಿ ಇಟ್ಟು ಮೆರವಣಿಗೆ ಮಾಡಲಾಗಿತ್ತು. ಈಗ ಕೃತಿಯನ್ನು ರಾಜಪ್ಪ ದಳವಾಯಿ ನಾಟಕವಾಗಿ ರೂಪಾಂತರಿಸಿರುವುದು ಕೃತಿಕಾರನಿಗೆ ದೊಡ್ಡ ಗೌರವ ಸಂದಂತಾಗಿದೆ ಎಂದು ಸ್ಮರಿಸಿದರು.

ಪ್ರತಿಗಂಧರ್ವ ನಾಟಕ ರಚಿಸಿದ ಡಾ. ರಾಜಪ್ಪ ದಳವಾಯಿ ಮಾತನಾಡಿ, ಡಾ. ರಹಮತ್ ತರೀ–ಕೆರೆ ಅವರ ಅಮೀರ್‌ಬಾಯಿ ಕರ್ನಾಟಕಿ ಸಂಶೋಧನ ಕೃತಿಯನ್ನು ನಾಟಕಕ್ಕೆ ರೂಪಾಂತರಿಸಲಾಗಿದೆ. ದಾವಣಗೆರೆಗೆ ರಂಗಭೂಮಿಯದೇ ಫ್ಲೇವರ್ ಇದೆ. ಡಾ. ರಾಜ್‌ಕುಮಾರ್ ರಂತಹ ಕಲಾವಿದರು ಮೆಚ್ಚುಗೆ ಪಟ್ಟ ನೆಲ ಇದಾಗಿದೆ. ಪ್ರತಿಗಂಧರ್ವದಲ್ಲಿ ದಾವಣಗೆರೆ ಮಂಡಕ್ಕಿ ಮಿರ್ಚಿ ಖದರ್ ಇದೆ ಎಂದರು.

ವೃತ್ತಿ ರಂಗಭೂಮಿ ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ್ ಕಡಕೋಳ, ವಿಶೇಷಾಧಿಕಾರಿ ರವಿಂಚಂದ್ರ, ರಂಗ ನಿರ್ದೇಶಕ ಮಾಲತೇಶ ಬಡಿಗೇರ, ಹಿರಿಯ ಕಲಾವಿದ ಸಿದ್ದರಾಜು ಇದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ನೀವು ಹಣದ ಲಾಭವನ್ನು ಪಡೆಯಬಹುದು. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮ್ಮ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಾರೆ. ನಿಮ್ಮ ಅಚ್ಚುಮೆಚ್ಚಿನವರಿಂದ / ಪತಿ/ ಪತ್ನಿಯಿಂದ ಪಡೆಯುವ ದೂರವಾಣಿ ಕರೆ ನಿಮ್ಮ ದಿನವನ್ನು ಬೆಳಗಲಿದೆ. ಇದು ಕೆಲಸದಲ್ಲಿ ಅದ್ಭುತ ದಿನದಂತೆ ತೋರುತ್ತಿದೆ.

### ವೃಷಭ ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಇಂದು ಹಣದ ನಷ್ಟವು ಸಂಭವಿಸಬಹುದು. ಆದ್ದರಿಂದ ವಹಿವಾಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ನೀವು ಎಷ್ಟು ಜಾಗರೂಕರಾಗಿರುತ್ತೀರೋ ಅಷ್ಟೇ ನಿಮಗೆ ಉತ್ತಮವಾಗಿರುತ್ತದೆ ನಿಮ್ಮ ಕುಟುಂಬದ ಬಗ್ಗೆ ನೀವು ಎಷ್ಟು ಕಾಳಜಿ ಹೊಂದಿದ್ದೀರೆಂದು ಅವರಿಗೆ ಅರ್ಥ ಮಾಡಿಸಲು ಮೌಖಿಕ ಮತ್ತು ಅಮೌಖಿಕ ಸಂದೇಶಗಳನ್ನು ನೀಡುತ್ತಿರಿ.

### ಮಿಥುನ ರಾಶಿ

ಇತರರನ್ನು ಟೀಕಿಸಲು ನಿಮ್ಮ ಸಮಯ ವ್ಯರ್ಥ ಮಾಡುವುದು ನಿಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರಬಹುದಾದ್ದರಿಂದ ಹಾಗೆ ಮಾಡಬೇಡಿ. ನೀವು ಇಂದು ಹಣ ಉಳಿಸುವುದು ಕಷ್ಟ ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ ನಿರ್ಲಕ್ಷ್ಯತನದಿಂದ ಕೆಲವು ಸಮಸ್ಯೆಗಳು ಖಂಡಿತ.

### ಕರ್ಕ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ಸಿಂಹ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ಗಡಿಬಿಡಿಯ ನಿರ್ಧಾರಗಳನ್ನು ಕೈಗೊಳ್ಳಬೇಡಿ – ವಿಶೇಷವಾಗಿ ಪ್ರಮುಖ ಹಣಕಾಸಿನ ವ್ಯವಹಾರಗಳ ಬಗ್ಗೆ ಮಾತನಾಡುವಾಗ. ಸ್ನೇಹಿತರೊಂದಿಗಿನ ಸಂಜೆ ಹೆಚ್ಚು ಮನರಂಜನೀಯವಾಗಿರುತ್ತದೆ ಮತ್ತು ಸಂತೋಷದಿಂದ ತುಂಬಿರುತ್ತದೆ.

### ಕನ್ಯಾ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ವೈಯಕ್ತಿಕ ವಿಷಯಗಳನ್ನು ಬಗೆಹರಿಸುವಲ್ಲಿ ಉದಾರತೆ ತೋರಿ, ಆದರೆ ನಿಮ್ಮನ್ನು ಪ್ರೀತಿಸುವ ಮತ್ತು ಕಾಳಜಿ ತೋರುವವರನ್ನು ನೋಯಿಸದಿರಲು ನಿಮ್ಮ ಭಾಷೆಯ ಬಗ್ಗೆ ಎಚ್ಚರ ವಹಿಸಿ. ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ.

### ತುಲಾ ರಾಶಿ

ಸರ್ವತೋಮುಖ ಅಭಿವೃದ್ಧಿ ಸಾಧ್ಯವಿದ್ದಾಗ ಮಾತ್ರ ಮಾನಸಿಕ ಮತ್ತು ನೈತಿಕ ಶಿಕ್ಷಣದ ಜೊತೆ ದೈಹಿಕ ಶಿಕ್ಷಣವನ್ನೂ ತೆಗೆದುಕೊಳ್ಳಿ. ಆರೋಗ್ಯಕರ ಮನಸ್ಸು ಯಾವಾಗಲೂ ಆರೋಗ್ಯಕರ ದೇಹದಲ್ಲಿ ಪರ್ಯವಸಾನವಾಗುತ್ತದೆಂದು ನೆನಪಿಡಿ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು ಮತ್ತು ನಿಮ್ಮ ಸ್ನೇಹಿತರಿಂದ ಸಾಲವನ್ನು ಕೇಳಬಹುದು.

### ವೃಶ್ಚಿಕ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು , ಅವರು ಬರುವುದರಿಂದಾಗಿ ನೀವು ಬರುವ ತಿಂಗಳಿಗೆ ಮುಂದೂಡಲಾಯಿಸಿರುವ ಮನೆಯ ಆ ವಸ್ತುಗಳ ಮೇಲು ಖರ್ಚು ಮಾಡಬಹುದು . ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ವೃಶ್ಚಿಕ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು , ಅವರು ಬರುವುದರಿಂದಾಗಿ ನೀವು ಬರುವ ತಿಂಗಳಿಗೆ ಮುಂದೂಡಲಾಯಿಸಿರುವ ಮನೆಯ ಆ ವಸ್ತುಗಳ ಮೇಲು ಖರ್ಚು ಮಾಡಬಹುದು .

### ಧನು ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ. ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧ ಯಾರಾದರೊಬ್ಬರ ಹಸ್ತಕ್ಷೇಪದಿಂದ ಹಾಳಾಗಬಹುದು.

### ಮಕರ ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ಹಣದ ನಷ್ಟವು ಸಂಭವಿಸಬಹುದು. ಆದ್ದರಿಂದ ವಹಿವಾಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ನೀವು ಎಷ್ಟು ಜಾಗರೂಕರಾಗಿರುತ್ತೀರೋ ಅಷ್ಟೇ ನಿಮಗೆ ಉತ್ತಮವಾಗಿರುತ್ತದೆ ನಿಮ್ಮ ಮಕ್ಕಳು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

### ಕುಂಭ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಇಂದು ಹಣದ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ ಆದರೆ ನಿಮ್ಮ ಕೋಪದ ಸ್ವಭಾವದಿಂದ ಇಂದು ಹಣವನ್ನು ಗಳಿಸುವಲ್ಲಿ ಸಾಧ್ಯವಾಗದಿರಬಹುದು. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ.

### ಮೀನ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ.

# ದಿವ್ಯಾಂಗರಿಗೆ ಸಿಆರ್‌ಸಿ ವರದಾನ ವಾಸುದೇವ ರಾಯ್ಕರ್ ಪ್ರಶಂಸೆ



**ದಾವಣಗೆರೆ:** ಎನ್ ಐಇಪಿಐಡಿ, ಡಿಇಪಿಡಬ್ಲ್ಯೂಡಿ ವತಿಯಿಂದ ಇತ್ತೀಚೆಗೆ ದಾವಣಗೆರೆಯ ಸಂಯೋಜಿತ ಪ್ರಾದೇಶಿಕ (ಸಿಆರ್‌ಸಿ) ಕೇಂದ್ರದಲ್ಲಿ ಅಂತರಾಷ್ಟ್ರೀಯ ಪ್ರಾಸ್ಥೆಟಿಕ್ಸ್ ಮತ್ತು ಆರ್ಥೋಟಿಕ್ಸ್ ದಿನದ ಅಂಗವಾಗಿ

ಸಹಾಯಕ ಉತ್ಪನ್ನಗಳು – ಪ್ರವೇಶ, ನಾವೀನ್ಯತೆ ಮತ್ತು ಗುಣಮಟ್ಟವನ್ನು ಮುಂದುವರಿಸುವುದು? ಎಂಬ ವಿಷಯ ಕುರಿತು ಜಾಗೃತಿ ಕಾರ್ಯಕ್ರಮ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಯಾಗಿ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ವಾಸುದೇವ ರಾಯ್ಕರ್ ಪಾಲ್ಗೊಂಡು ಮಾತನಾಡಿ, ಪ್ರಸ್ತುತ ಸಿಆರ್ ಸಿ ಕೇಂದ್ರದಲ್ಲಿ ಪುನರ್ವಸತಿ, ವಿಶೇಷ ಶಿಕ್ಷಣ ಮತ್ತು ಮಾನವ ಸಂಪನ್ಮೂಲಗಳ ಅಭಿವೃದ್ಧಿಗಾಗಿ ಡಿ.ಎಡ್ ವಿಶೇಷ ಶಿಕ್ಷಣ, ಸಂಕೇತ ಭಾಷೆಯಲ್ಲಿ ಡಿಪ್ಲೊಮಾ, ಆರೈಕೆ ನೀಡುವಿಕೆಯಲ್ಲಿ ಪ್ರಮಾಣಪತ್ರ ಕೋರ್ಸ್‌ಗಳು, ಸಮುದಾಯ ಆಧಾರಿತ ಅಂತರ್ಗತ ಅಭಿವೃದ್ಧಿ ಮೊದಲಾದ ಕೋರ್ಸ್ ಗಳನ್ನು ನಡೆಸಲಾಗುತ್ತಿದ್ದು, ಇದು ಇಡೀ ರಾಜ್ಯದಲ್ಲಿಯೇ ಅತ್ಯಾಧುನಿಕ ಮತ್ತು ಅಂಗವಿಕಲ ವ್ಯಕ್ತಿಗಳಿಗಾಗಿ ಸಮರ್ಪಿತವಾದ ವಿಶಾಲ ಸಂಯೋಜಿತ ಪ್ರಾದೇಶಿಕ ಕೇಂದ್ರ ಎಂದು ಶ್ಲಾಘಿಸಿದರು.

ಸಿಆರ್‌ಸಿ ಪ್ರಭಾರ ನಿರ್ದೇಶಕ ಕೆ. ಮಾರುತಿ ಕೃಷ್ಣಗೌಡ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮತ್ತಿತರರು ಪಾಲ್ಗೊಂಡಿದ್ದರು

# ಹರಿಹರ ಪರಾಜಿತ ಅಭ್ಯರ್ಥಿ ಆರೋಪಕ್ಕೆ ಪೋಸ್ಟ್ ಮುಖಾಂತರ ಉತ್ತರ ನೀಡುತ್ತೇವೆ

**ದಾವಣಗೆರೆ:** ಹರಿಹರ ಶಾಸಕರು ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ ಎಂದು ಆರೋಪ ಮಾಡಿರುವ ಪರಾಜಿತ ಅಭ್ಯರ್ಥಿ ನಂದಿಗಾವಿ ಶ್ರೀನಿವಾಸ್ ಅವರಿಗೆ ಹಾಲಿ ಶಾಸಕರು ಮಾಡಿರುವ ಕೆಲಸಗಳ ಬಗ್ಗೆ ಪೋಸ್ಟ್ ಕಳಿಸುವುದರ ಮೂಲಕ ಮಾಹಿತಿ ನೀಡುತ್ತಿದ್ದೇವೆ ಎಂದು ಹರಿಹರ ಬಿಜೆಪಿ ಯುವ ಮೋರ್ಚಾ ಉಪಾಧ್ಯಕ್ಷ ಆಕಾಶ ಬಣಕಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಾಜಿತ ಅಭ್ಯರ್ಥಿ ನಂದಿಗಾವಿ ಶ್ರೀನಿವಾಸ್ ಹರಿಹರ ಶಾಸಕರಿಗೆ ಅವರ ಕ್ಷೇತ್ರದ ಜನತೆಗೆ ಏನು ಬೇಕು ಎಂದು ಗೊತ್ತಾಗುತ್ತಿಲ್ಲ? ಹರಿಹರಕ್ಕೆ ಅವರ ಕೊಡುಗೆ ಏನು? ಎಂದು ಮಾತನಾಡುತ್ತ ಬೈರನಪಾದ ಯೋಜನೆ ಬಗ್ಗೆ, ಬಗರ್ ಹುಕುಂ ಸಮಿತಿ ಸಭೆ ಬಗ್ಗೆ, ಕೆಡಿಪಿ ಸಭೆ ಬಗ್ಗೆ, ಹರಿಹರದ ಅಭಿವೃದ್ಧಿಗೆ ಸಚಿವರುಗಳಿಗೆ ಮನವಿ ಪತ್ರಗಳನ್ನು ನೀಡಿಲ್ಲ ಎಂದು ಆರೋಪಗಳನ್ನು ಮಾಡಿದ್ದಾರೆ. ಆದಕ್ಕೆ ಉತ್ತರವಾಗಿ ನಾವು ಶ್ರೀನಿವಾಸ್, ಜಿಲ್ಲಾ ಸಚಿವರು ಹಾಗೂ ಸಂಸದರಿಗೆ ಶಾಸಕ ಹರೀಶ್ ಅವರ ಮಾಡಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ಪೋಸ್ಟ್ ಕಳಿಸುವುದರ ಮುಖಾಂತರ ಉತ್ತರ ನೀಡುತ್ತಿದ್ದೇವೆ ಎಂದರು. ಆದಕ್ಕೆ ಉತ್ತರವಾಗಿ ನಾವು ಶ್ರೀನಿವಾಸ್, ಜಿಲ್ಲಾ ಸಚಿವರು ಹಾಗೂ ಸಂಸದರಿಗೆ ಶಾಸಕ ಹರೀಶ್ ಅವರ ಮಾಡಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ಪೋಸ್ಟ್ ಕಳಿಸುವುದರ ಮುಖಾಂತರ ಉತ್ತರ ನೀಡುತ್ತಿದ್ದೇವೆ ಎಂದರು.

ಈ ಬಾರಿ ಹರೀಶ್ ಶಾಸಕರಾಗಿ ಆಯ್ಕೆಯಾದ ನಂತರ 7 ಬಾರಿ ನಡೆದ ಅಧಿವೇಶನದಲ್ಲಿ ಒಟ್ಟು 125 ಪ್ರಶ್ನೆಗಳನ್ನು ಕೇಳಿದ್ದಾರೆ. ಹರಿಹರ ತಾಲ್ಲೂಕಿನಲ್ಲಿ ಬಸ್ಸುಗಳ ಕೊರತೆ ಬಗ್ಗೆ, ತಾಲ್ಲೂಕು ಕಛೇರಿಯಲ್ಲಿ ಹೆಚ್ಚುವರಿ ಕೊಠಡಿಗಳ ಬಗ್ಗೆ, ದೇವಸ್ಥಾನಗಳ ಅಭಿವೃದ್ಧಿಯ ಬಗ್ಗೆ, ಹಿಂದುಳಿದ ವರ್ಗಗಳ ಹಾಗೂ ಸಮಾಜ ಕಲ್ಯಾಣ ಇಲಾಖೆ ಹಾಸ್ಟೇಲ್‌ಗಳ

ಅಭಿವೃದ್ಧಿಯ ಬಗ್ಗೆ, ತಾಲ್ಲೂಕು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದರ ಬಗ್ಗೆ, ಸರ್ಕಾರಿ ಶಾಲೆ, ಕಾಲೇಜು ಕಟ್ಟಡ ದುರಸ್ಥಿಯ ಬಗ್ಗೆ, ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸುವ ಬಗ್ಗೆ. ಹರಿಹರ

ತಾಲ್ಲೂಕಿನಲ್ಲಿ ವೈದ್ಯರ ಕೊರತೆ ಬಗ್ಗೆ, ಬಗರ್ ಹುಕುಂ ಅಡಿಯಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳ ಬಗ್ಗೆ ಹೀಗೆ ಒಟ್ಟು 125 ಪ್ರಶ್ನೆ ಕೇಳಿದ್ದು, ಅದಕ್ಕೆ ಸದನದಲ್ಲಿ ಅವರಿಗೆ ಬಂದ ಉತ್ತರವನ್ನು ನಂದಿಗಾವಿ ಶ್ರೀನಿವಾಸ್ ಅವರಿಗೆ ಪೋಸ್ಟ್ ಮಾಡಲಾಗಿದೆ ಎಂದು ವಿವರಿಸಿದರು.

ಹರಿಹರ ಅಭಿವೃದ್ಧಿಗಾಗಿ ಪಕ್ಷಾತೀತವಾಗಿ ನಾವು ಕೈಜೋಡಿಸಲು ತಯಾರಿದ್ದರು ಶಾಸಕ ಹರೀಶ್ ಬರುತ್ತಿಲ್ಲ ಎಂಬ ಶ್ರೀನಿವಾಸ್ ಆರೋಪ ಸುಳ್ಳು. ಶಾಸಕ ಹರೀಶ್ ಅವರು ಹರಹರದ ಅಭಿವೃದ್ಧಿಗಾಗಿ ಸದಾ ಸಿದ್ದರಿದ್ದು, ಕರೆದರೆ ಖಂಡಿತ ಬರುತ್ತಾರೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಹರಿಹರ ಬಿಜೆಪಿಯ ರವಿರಾಯ್ಕರ್, ರವಿ ತಾವರಗಿ, ಎಂ.ಅಂಜಿನಪ್ಪ, ಪುನೀತ್ ಬೆಳ್ಳೂಡಿ, ಅಣ್ಣಪ್ಪ ನಾಗೇನಹಳ್ಳಿ, ಕಿರಣ್ ಮೂಲಿಮನಿ ಇದ್ದರು.

# ಡಾ. ತಿಮ್ಮಕ್ಕ ಅವರ ನಿಧನ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ




**ಚನ್ನಪಟ್ಟಣ:** ಹಳ್ಳಿಯಲ್ಲಿ ಹುಟ್ಟಿ ವೃಕ್ಷಮಾತೆಯಾಗಿ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾಗಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ಸಾಧಕಿ ಶತಾಯಿಷಿಗಳಾದ ಸಾಲುಮರದ ಡಾ. ತಿಮ್ಮಕ್ಕ ಅವರ ನಿಧನ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಅಭಿಪ್ರಾಯಿಸಿದರು.

ಪಟ್ಟಣದ ಜ್ಞಾನ ಸರೋವರ ಕಾಲೇಜಿನಲ್ಲಿ ಕಾಲೇಜು ಮತ್ತು ಕಸ್ತೂರಿ ಕರ್ನಾಟಕ ಜನಪರ ವೇದಿಕೆಯಿಂದ ಶುಕ್ರವಾರ ನಿಧನರಾದ ಶತಾಯುಷಿ ಡಾ. ಸಾಲುಮರದ ತಿಮ್ಮಕ್ಕ ಅವರ ನಿಧನಕ್ಕೆ ಶ್ರದ್ಧಾಂಜಲಿ ಅರ್ಪಿಸಿ ಮಾತನಾಡಿದ ಅವರು, ಜಿಲ್ಲೆಯ ಮಾಗಡಿಯಲ್ಲಿನ ಗ್ರಾಮೀಣ ಪ್ರದೇಶದಲ್ಲಿ ಹುಟ್ಟಿ ಮಕ್ಕಳಿಲ್ಲದ ಬಂಜೆ ಎಂದು ಸಮಾಜದ ಜನರಿಂದ ಅವಮಾನ ಎದುರಿಸಿದ್ದ ಸಾಲುಮರದ ತಿಮ್ಮಕ್ಕ ದಂಪತಿಗಳು ರಸ್ತೆಗಳಲ್ಲಿ ಸಸಿಗಳನ್ನು ನೆಟ್ಟು ಮಕ್ಕಳಂತೆ ಪೋಷಣೆ ಮಾಡಿ ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿ ನೂರು ಸಾಧಕ ಮಹಿಳೆಯರಲ್ಲಿ ಒಬ್ಬರಾಗಿ ಗುರುತಿಸಿಕೊಂಡಿರುವ ಡಾ. ಸಾಲುಮರದ ತಿಮ್ಮಕ್ಕ ಅವರ ನಿಧನ ಸಮಾಜಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಸರ್ಕಾರ ಇವರ ಹೆಸರನ್ನು ಶಾಸ್ವತವಾಗಿ ಉಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದರು.

ಜ್ಞಾನ ಸರೋವರ ಕಾಲೇಜಿನ ಪ್ರಾಂಶುಪಾಲರಾದ ಹೇಮಲತಾ ಅವರು ಮಾತನಾಡಿ, ಇಂದು ಪರಿಸರ ಸಂರಕ್ಷಣೆಯ ಹೆಸರಲ್ಲಿ ಇಂದು ಸಸಿಗಳನ್ನು ನೆಟ್ಟು ಪ್ರಚಾರ ಪಡೆದು ಹೋಗುತ್ತಾರೆ ಆದರೆ ಆ ಸಸಿ ನೀರಿ ಪೋಷಣೆ ಇಲ್ಲದೆ ಕೆಲವೇ ದಿನದಲಿ ಒಣಗುತ್ತದೆ. ಆದರೆ ಸಾಲುಮರದ ತಿಮ್ಮಕ್ಕ ಅವರು ಹೆತ್ತ ಮಕ್ಕಳಿಗೆ ಸಮಯಕ್ಕೆ ಸರಿಯಾಗಿ ಊಟ ಉಪಚಾರ ಮಾಡುವಂತೆ ತಾವು ನೆಟ್ಟ ಸಸಿಗಳಿಗೆ ನೀರು, ಗೊಬ್ಬರ ಕೊಟ್ಟು ರಕ್ಷಣೆ ಮಾಡಿ ಪೋಷಣೆ ಮಾಡಿದ್ದಾರೆ. ಇಂದು ಶುದ್ಧಗಾಳಿಯನ್ನು ಹಣಕ್ಕೆ ಮಾರಿಕೊಳ್ಳುವ ಜನರಿದ್ದಾರೆ ಆದರೆ. ಸಾಲುಮರದ ತಿಮ್ಮಕ್ಕ ಅವರು ನೆಟ್ಟು ಪೋಷಣೆ ಮಾಡಿದ ಮರಗಳು ಹೆಮ್ಮರವಾಗಿಸಿ ಕೋಟ್ಯಾಂತರ ಜನರಿಗೆ ಶುದ್ಧ ಗಾಳಿಯನ್ನು ಕೊಡುತ್ತಿದೆ. ಅದು ಅವರ ನಿಸ್ವಾರ್ಥ ಸೇವೆಗೆ ಸಾಕಷಿಯಾಗಿದೆ. ಸ್ವಾರ್ಥ ಇಲ್ಲದೆ ಸಮಾಜಕ್ಕೆ ಯಾರು ಸೇವೆ ನೀಡುತ್ತಾರೋ ಅವರು ಸಾಧಕರಾಗಿ ಬೆಳೆಯುತ್ತಾರೆ

ಎಂಬುದಕ್ಕೆ ಇಂದು ನಾವು ಶ್ರದ್ಧಾಂಜಲಿ ಸಲ್ಲಿಸುತ್ತಿರುವ ಸಾಲುಮರದ ತಿಮ್ಮಕ್ಕ ಅವರು ಸಾಕ್ಷಿಯಾಗಿದ್ದಾರೆ. ಅವರ ಮಾರ್ಗದರ್ಶನಲ್ಲಿ ನಾವೂ ಸಹ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂಬುದು ನಮ್ಮ ಗುರಿಯಾದರೆ ಮಾತ್ರ ನಾವು ಸಹ ಏನಾದರೂ ಸಾಧನೆ ಮಾಡಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರಾದ ಹೊಳಸಾಲಯ್ಯ ಅವರು ಸಾಲು ಮರದ ತಿಮ್ಮಕ್ಕ ಅವರ ನಿಧನಕ್ಕೆ ಗೀತೆಯ ಮೂಲಕ ನುಡಿನಮನ ಸಲ್ಲಿಸಿದರು.

ಸಂದರ್ಭದಲ್ಲಿ ಉಪನ್ಯಾಸಕರುಗಳಾದ ಜಾಕೀರ್‌ಹುಸೇನ್ ಹೆಚ್.ಎಸ್., ಚನ್ನಂಕೇಗೌಡ, ಶಶಿಕುಮಾರ್, ನಿವೇದಿತಾ, ಸೌಮ್ಯ, ತನುಶ್ರೀ, ಶ್ರೇಯಸ್ವಿನಿ, ಭಾವನಾ, ಚಂದನ ಉಪಸ್ಥಿತರಿದ್ದರು.

# ಬಾಲಕಿಯರ ಅಸ್ಮಿತಾ ಅಥ್ಲೆಟಿಕ್ಸ್

**ಚಿಕ್ಕಮಗಳೂರು.** ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ನಿಂದ ನ.17 ರಂದು ಅಸ್ಮಿತಾ ಅಥ್ಲೆಟಿಕ್ಸ್ ಲೀಗ್ಸ್ ಟ್ಯಾಲೆಂಟ್ ಸರ್ಚ್ ಆಯೋಜಿಸಲಾಗಿದೆ.ಅಥ್ಲೆಟಿಕ್ಸ್ ಫೆಡರೇಶನ್ ಆಫ್ ಇಂಡಿಯಾ ಹಾಗೂ ಸ್ಪೋರ್ಟ್ಸ್ ಅಥಾರಿಟಿ ಅಫ್ ಇಂಡಿಯಾ ಮಾರ್ಗದರ್ಶನದಲ್ಲಿ ಬಾಲಕಿಯರ ಅಥ್ಲೇಟಿಕ್ಸ್ ಉತ್ತೇಜಿಸಲು ದೇಶಾದ್ಯಂತ 300 ಜಿಲ್ಲೆಗಳಲ್ಲೂ ಆಯ್ಕೆ ಮಾಡಲಾಗಿದೆ. ರಾಜ್ಯದ 18 ಜಿಲ್ಲೆಗಳಲ್ಲಿ ಈ ಕ್ರೀಡಾ ಕೂಟ ಆಯೋಜಿಸಲಾಗಿದೆ. ನಗರದ ಜಿಲ್ಲಾ ಆಟದ ಮೈದಾನ ದಲ್ಲಿ ಬೆಳಗ್ಗೆ 10 ಕ್ಕೆ ಅಥ್ಲೆಟಿಕ್ಸ್ ಕ್ರೀಡಾಕೂಟ ಆರಂಭವಾಗಲಿದ್ದು 14 ಮತ್ತು 16 ವಯಸ್ಸಿನ ಬಾಲಕಿಯರು ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಬಹುದು ಪ್ರವೇಶ ಉಚಿತ ವಾಗಿರುತ್ತದೆ ಎಂದು ಕಾರ್ಯದರ್ಶಿ ಮಂಜುನಾಥ್ ತಿಳಿಸಿದ್ದಾರೆ.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಹಾಸನ:** ಜನಕಲ್ಯಾಣ ರೀಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್(ರಿ) ಹಾಗೂ ಉದಯರವಿ ವಾಹಿನಿ ಇವರ ಸಂಯುಕ್ತಾಶ್ರಯದಲ್ಲಿ 2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಪದವಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಹಾಸನ ಜಿಲ್ಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಏರ್ಪಡಿಸಲಾಗಿದೆ, ಶೇ.95ಕ್ಕಿಂತ ಹೆಚ್ಚು ಅಂಕ ಪಡೆದ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ವಿದ್ಯಾರ್ಥಿಗಳು ತಮ್ಮ ಸ್ವ ವಿವರಗಳೊಂದಿಗೆ, ಭಾವಚಿತ್ರ, ಅಂಕಪಟ್ಟಿಯನ್ನು ಲಗತ್ತಿಸಿ ನ.30ರೊಳಗೆ ಪ್ರತಿನಿಧಿ ದಿನಪತ್ರಿಕೆ ಕಛೇರಿ, ಬಸಟ್ಟಿಕೊಪ್ಪಲು ಮುಖ್ಯ ರಸ್ತೆ, ಕೆ.ಆರ್.ಪುರಂ, ಹಾಸನ ಇಲ್ಲಿಗೆ ತಲುಪಿಸಬೇಕಾಗಿ ಕೋರಲಾಗಿದೆ. ಹೆಚ್ಚಿನ ವಿವರಗಳಿಗೆ 9964287633, 9148684266 ಸಂಪರ್ಕಿಸಬಹುದು.

# ವಿನಯ್ ಕುಮಾರ್‌ಗೆ ಸಮಾಜ ಸೇವಾರತ್ನ ಪ್ರಶಸ್ತಿ ವಿತರಣೆ

**ದಾವಣಗೆರೆ:** ನಗರದ ನಿಟ್ಟುವಳ್ಳಿಯ ಪಿ.ಎಂ.ಶ್ರೀ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಜರುಗಿದ ಪೋಷಕ–ಶಿಕ್ಷಕರ ಮಹಾಸಭೆ ಮತ್ತು ಮಕ್ಕಳ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಇನ್‌ಸೈಟ್ಸ್ ಐಎಎಸ್ ಸಂಸ್ಥಾಪಕ ನಿರ್ದೇಶಕರು ಮತ್ತು ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ.ಬಿ. ವಿನಯ್ ಕುಮಾರ್ ಅವರಿಗೆ 'ಸಮಾಜ ಸೇವಾರತ್ನ' ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಎಂ. ಸುರೇಶ್ ಅಧ್ಯಕ್ಷತೆ ವಹಿಸಿದ್ದರು, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ವೀರೇಶ ಒಡೇನಪುರ, ಶಿಕ್ಷಕ ಕೆ.ಟಿ ಜಯಪ್ಪ, ಎ.ಕೆ ಫೌಂಡೇಶನ್ ಸಂಸ್ಥಾಪಕ ಕೆ.ಬಿ. ಕೊಟ್ರೇಶ್, ಮುಖ್ಯ ಅತಿಥಿಗಳಾಗಿ



ರಾಜಶೇಖರ್ ಪುರಾಣಿಕ್, ಎಸ್‌ಡಿಎಂಸಿ ಅಧ್ಯಕ್ಷ ಜ್ಞಾನೇಶ್ವರ ಜಿ. ಮಿರಾಜ್ ಕರ್, ಸದಸ್ಯರಾದ ಪ್ರಸನ್ನ, ಹೊನ್ನಾಳಿಯ ಕರವೇ ಅಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ಡಿ.ಆರ್. ದೇವರಾಜ್ ಉಪಸ್ಥಿತರಿದ್ದರು.

# ದೆಹಲಿ ಸ್ಫೋಟ ಖಂಡಿಸಿ ವಿಶ್ವ ಹಿಂದೂ ಪರಿಷತ್ ಭಜರಂಗದಳದ ಕಾರ್ಯಕರ್ತರ ಪ್ರತಿಭಟನೆ



**ಚನ್ನಗಿರಿ ;** ದೆಹಲಿಯಲ್ಲಿ ನಡೆದ ವಿದ್ವಂಸಕ ಬಾಂಬ್ ಬ್ಲಾಸ್ಟ್ ಕೃತ್ಯವನ್ನು ಖಂಡಿಸಿ ಚನ್ನಗಿರಿ ವಿಶ್ವಹಿಂದೂ ಪರಿಷತ್ ಭಜರಂಗದಳದ ಕಾರ್ಯಕರ್ತರು ಶನಿವಾರ ಚನ್ನಗಿರಿ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ ತಾಲೂಕು ಕಚೇರಿಗೆ ತೆರಳಿ ಮನವಿ ಪತ್ರ ಸಲ್ಲಿಸಿದರು.

ವಿಶ್ವಹಿಂದೂ ಪರಿಷತ್‌ನ ಸಂಚಾಲಕ ಮಂಜುನಾಥ್ ಮಾತನಾಡಿ ವಿಶ್ವಕಲ್ಯಾಣದ ಗುರಿಯನ್ನು ಹೊಂದಿರುವ ಮತ್ತು ತನ್ನ ನಡವಳಿಕೆಯನ್ನು ರೂಡಿಸಿಕೊಂಡು ಸಾವಿರಾರು ವರ್ಷಗಳ ಉತ್ತಮ ಸಂಸ್ಕಾರ ಸಂಸ್ಕೃತಿಯನ್ನು ಹೊಂದಿರುವಂತಹ ಭಾರತ ದೇಶದಲ್ಲಿ ಮುಸ್ಲಿಂ ದೇಶ ದ್ರೋಹಿಗಳು, ವಿದ್ಯಾವಂತ ಭಯೋತ್ಪಾಧಕರು ನಡೆಸಿರುವ ಈ ವಿಧ್ವಂಸಕ ಕೃತ್ಯವನ್ನು ವಿಶ್ವಹಿಂದೂಪರಿಷತ್ ಖಂಡಿಸುತ್ತದೆ. ಇಂತಹ ಕೃತ್ಯಗಳಿಂದ ಹಿಂದೂ ಸಮಾಜವನ್ನು ಮಣಿಸಲು ಸಾಧ್ಯವಿಲ್ಲ. ಭಾರತೀಯರ ಸದ್ಭಾವನೆಯನ್ನು ಅಸಮರ್ಥತತೆ ಎಂದು ಭಯೊತ್ಪಾಧಕರು ತಿಳಿದಿದ್ದರೆ ಅದು ಅವರ ಮೂರ್ಖತನವನ್ನು ಪ್ರದರ್ಶಿಸುತ್ತದೆ. ಜಗತ್ತಿನ ಭೂಪಟದಲ್ಲಿ ಭಾರತ ದೇಶವು ವಿಶ್ವ ಗುರುವಾಗಿದ್ದು ಭಾರತ ಮಾತೆಯ ಗೌರವಕ್ಕೆ ಚ್ಯುತಿ ಬಾರದ ರೀತಿಒಯಲ್ಲಿ ಹಿಂದೂ ಸಮಾಜವು ಶಶಕ್ತವಾಗಿದೆ. ಈ ಕೃತ್ಯದ ಮೂಲವನ್ನು ಹುಡುಕಿಬಂದ ತಪ್ಪಿತಸ್ಥರಿಗೆ ಕೇಂದ್ರ ಸರಕಾರವು ತಕ್ಕ ಉತ್ತರವನ್ನು ನೀಡಬೇಕಿದೆ. ದೇಶದ ಜೊತೆ ನಮ್ಮ ಪರಿವಾರವೂ ತ್ಯಾಗ ಬಲಿದಾನಕ್ಕೆ ಸಿದ್ದವಾಗಿದೆ. ಈ ಹಿಂದೆ ದೇಶದ ಬೇರೆ ಬಾಗಗಳಲ್ಲಿ ನಡೆದ ದೇಶದ್ರೋಹಿ ಕೃತ್ಯಗಳನ್ನು ಸಮರ್ಥಿಸುತ್ತಿದ್ದ ಎಡಚರರು, ಕಾಂಗ್ರೇಸಿಗರು ಮತ್ತು ದೇಶದ್ರೋಹಿಗಳು ಈ ಘಟನೆಯ ಬಗ್ಗೆ ಮತ್ತು ಈ ವಿದ್ಯಾವಂತ ವೈದ್ಯ ಭಯೋತ್ಪಾದಕರ ಬಗ್ಗೆ ತಮ್ಮ ನುಲುವನ್ನು ಸ್ಪಷ್ಟಪಡಿಸಬೇಕಿದೆ. ಕೇಂದ್ರ ಸರಕಾರವೂ ಸಹ ಯಾವುದೇ ಮುಲಾಜಿಗೆ ಒಳಪಡದೇ ಕಠಿಣ ನಿರ್ಧಾರವನ್ನು ತೆಗೆದುಕೊಳ್ಳಬೇಕೆಂದು ವಿಶ್ವ ಹಿಂದೂ ಪರಿಷತ್ ಆಗ್ರಹಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಭಜರಂಗದಳದ ಸಂಚಾಲಕ ಮಾಚನಾಯ್ಕನಹಳ್ಳಿ ಜಯ್ಯಣ್ಣ, ಮಾಜಿಪುರಸಭಾ ಅಧ್ಯಕ್ಷ ಚಿಕ್ಕಣ್ಣ, ರವಿಚಂದ್ರ, ಹನುಮಂತು, ವೆಂಕಟೇಶ್, ಹೇಮಂತ ಇತರರು ಹಾಜರಿದ್ದರು. ಚನ್ನಗಿರಿ ಗಾಂದಿ ವೃತ್ತದಿಂದ ಹೊರಟು ತಾಲೂಕು ಕಚೇರಿಗೆ ತೆರಳಿ ತಹಶೀಲ್ದಾರ್ ರುಕ್ಮಿಣಿಬಾಯಿಯವರಿಗೆ ಮನವಿ ಪತ್ರ ಸಲ್ಲಿಸಿದರು.

## ಮಾನ್ಯ ಗೌರವಾನ್ವಿತ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಲಯ, ದಾವಣಗೆರೆ

**ಸಿ.ಆರ್.ಮಿಸ್.ನಂ: 2790/2025**

**ಅರ್ಜಿದಾರರು :** ಪಲ್ಲವಿ ಬಿ.ಕೆ ತಂದೆ ಲೇಟ್ ಕೃಷ್ಣನಾಯ್ಕ ವಯಸ್ಸು ಸುಮಾರು 24 ವರ್ಷ, ವಾಸ: ಬೊಮ್ಮೇನಹಳ್ಳಿ ಗ್ರಾಮ. ಕೊಡಗನೂರು ಅಂಚೆ. ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ವಿರುದ್ಧ**

**ಎದುರುದಾರರು:** 1) ತಹಶೀಲ್ದಾರ್‌ರವರು. ರೈತರ ಭವನ, ಪಿ.ಬಿ ರಸ್ತೆ, ದಾವಣಗೆರೆ.
2) ಸುಶೀಲಮ್ಮ ಕೋಂ. ಮೂರ್ತಿನಾಯ್ಕ ವಯಸ್ಸು 49 ವರ್ಷ,
3) ನಿರ್ಮಲಬಾಯಿ ಕೋಂ. ಶಾಂತನಾಯ್ಕ ವಯಸ್ಸು 43 ವರ್ಷ.
4) ಬಿ.ಕೆ ವಿಜಯ ತಂದೆ ಚಂದ್ರಶೇಖರ ವಯಸ್ಸು 38 ವರ್ಷ,
5) ರಾಜೇಶ್ವರಿ ರಾಜೇಶ್ ತೆಲಿ ಕೋಂ. ರಾಜೇಶ್ ಶ್ರೀಶ್ ತೆಲಿ ವಯಸ್ಸು 36 ವರ್ಷ.
6) ಮಾಲ ಬಾಯಿ ಕೋಂ. ರಮೇಶ ನಾಯ್ಕ ವಯಸ್ಸು 33 ವರ್ಷ.
7) ಕಾವೇರಿಬಾಯಿ ಬಿ.ಕೆ ಕೋಂ. ರವಿ ಟಿ. ವಯಸ್ಸು 32 ವರ್ಷ,
8) ವಿದ್ಯಾಶ್ರೀ ಬಿ.ಕೆ ಕೋಂ. ಕರಿಯ ನಾಯ್ಕ ವಯಸ್ಸು 29 ವರ್ಷ
9) ಮುಸ್ಕಾನ್ ಕೋಂ, ಇಮ್ರಾನ್ ಶೇಖ್ ವಯಸ್ಸು 28 ವರ್ಷ,
10) ನಾಗರಾಜ ಬಿ.ಕೆ ಬಿನ್ ಕೃಷ್ಣನಾಯ್ಕ ವಯಸ್ಸು 25 ವರ್ಷ,
2 ರಿಂದ 10ನೇ ಎದುರುದಾರರ ವಿಳಾಸ: ಬೊಮ್ಮೇನಹಳ್ಳಿ ಗ್ರಾಮ, ಕೊಡಗನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

### –: ಪ್ರಕಟಣೆಗಾಗಿ :–

ಅರ್ಜಿದಾರರು ಮೇಲ್ಕಂಡ ಪ್ರಕರಣವನ್ನು ಕೃಷ್ಣನಾಯ್ಕ ಬಿನ್ ರಾಮಚಂದ್ರನಾಯ್ಕ ರವರ ಮರಣ ಪ್ರಮಾಣಪತ್ರ ಕೋರಿ 1ನೇ ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ಹಾಗೂ 2 ರಿಂದ 10ನೇ ಎದುರುದಾರರ ತಂದೆಯಾದ ಕೃಷ್ಣನಾಯ್ಕ ಬಿನ್ ರಾಮಚಂದ್ರನಾಯ್ಕ ಇವರು ದಿನಾಂಕ: 25–05–2024 ರಂದು ದಾವಣಗೆರೆ ತಾಲ್ಲೂಕು, ಮಾಯಕೊಂಡ ಹೋಬಳಿ, ಬೊಮ್ಮೇನಹಳ್ಳಿ ಗ್ರಾಮದ ತಮ್ಮ ಸ್ವಗೃಹದಲ್ಲಿ ಮರಣ ಹೊಂದಿರುತ್ತಾರೆ. ಇವರ ಮರಣ ಪ್ರಮಾಣಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ಘನ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಯಾರದಾದರೂ ತಂಟೆ–ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ: 19/12/2025 ರಂದು ಖುದ್ದಾಗಿ ಅಥವಾ ತಮ್ಮ ವಕೀಲರ ಮೂಲಕ ನ್ಯಾಯಾಲಯಕ್ಕೆ ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು.

ತಪ್ಪಿದ್ದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು.

ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ : 31/10/2025ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಶಿರಸ್ತೇದಾರರು
ಮಾನ್ಯ 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ.

ಸಹಿ/–
ಅರ್ಜಿದಾರರ ಪರ ವಕೀಲರು
( ಶ್ರೀ ಸಾಯಿನಾಥ್ ಶಿಂಧೆ)

# ಬುಡಕಟ್ಟು ಜನಾಂಗದ ಅಸಾಮಾನ್ಯ ಮಹಾ ಪುರುಷ ಬಿರ್ಸಾಮುಂಡಾ: ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ಭಗವಾನ್ ಬಿರ್ಸಾಮುಂಡಾ ಅವರು ಸಾಮಾನ್ಯರಾಗಿ ಹುಟ್ಟಿದ ಅಸಾಮಾನ್ಯ ಮಹಾ ಪುರುಷ; ಬಾಲ್ಯದಿಂದಲೇ ಸಮಾಜದ ಕಟ್ಟ ಕಡೆಯ ಶೋಷಿತ ವರ್ಗದವರ ಧ್ವನಿಯಾಗಿ ಕಾರ್ಯ ನಿರ್ವಹಿಸಿದವರು ಎಂದು ಶಾಸಕ ಹೆಚ್,ಡಿ ತಮ್ಮಯ್ಯ ಹೇಳಿದರು.

ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ, ರಾಜ್ಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಂಯುಕ್ತ ಆಶ್ರಯದಲ್ಲಿ ನಗರದ ಕುವೆಂಪು ಕಲಾಮಂದಿರದಲ್ಲಿ ಇಂದು ನಡೆದ ಜನಜಾತೀಯ ಗೌರವ ದಿನದ ಪ್ರಯುಕ್ತ ಭಗವಾನ್ ಬಿರ್ಸಾಮುಂಡಾರವರ 150ನೇ ಜನ್ಮ ವಾರ್ಷಿಕೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಿರ್ಸಾಮುಂಡ ಅವರು ಸಾಮಾಜಿಕ ಹೋರಾಟಗಾರರು, ಚಿಂತಕರು ಮಾತ್ರವಲ್ಲ, ಸ್ವಾತಂತ್ರ್ಯ ಹೋರಾಟಗಾರರೂ ಆಗಿದ್ದರು, ಭಾರತಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ಹಲವಾರು ಹೆಸರುಗಳಲ್ಲಿ ಬಿರ್ಸಾಮುಂಡಾರವರ ಹೆಸರು ಕೂಡ ಸೇರ್ಪಡೆಯಾಗಿದೆ ಎಂದ ಅವರು, ಕೇವಲ 25 ವರ್ಷ ಬದುಕಿ ಬುಡಕಟ್ಟು ಜನಾಂಗದವರ ಧ್ವನಿಯಾಗಿ ಕೆಲಸ ಮಾಡಿದ್ದಾರೆ, ಹಾಗಾಗಿ ಅವರು ಎಷ್ಟು ವರ್ಷ ಬದುಕಿದ್ದರು ಎನ್ನುವುದಕ್ಕಿಂತ ಬದುಕಿದಷ್ಟು ದಿನವೂ ಸಮಾಜದ ಶೋಷಿತ ವರ್ಗದವರ ಪರ ಗಟ್ಟಿ ಧ್ವನಿಯಾಗಿ ಮಾಡಿದ್ದ ಸಾಧನೆ ಮುಖ್ಯವಾಗುತ್ತದೆ. ಇವರು 1875ರಲ್ಲಿ ಜಾರ್ಖಂಡ್ ರಾಜ್ಯದ ಕುಗ್ರಾಮದಲ್ಲಿ ಬುಡಕಟ್ಟು ಜನಾಂಗದಲ್ಲಿ ಜನಿಸಿ ಆ ಜನಾಂಗದ ಸಂಸ್ಕೃತಿಯನ್ನು ಉಳಿಸುವ ಸಲುವಾಗಿ ಹೋರಾಡಿದ್ದರು. ಅಂದಿನ ಬ್ರಿಟಿಷರ ಆಳ್ವಿಕೆಯಲ್ಲಿ ಜೈಲುವಾಸಕ್ಕೆ ಒಳಗಾದ ಅವರು 1900 ರಲ್ಲಿ ಜೈಲಿನಲ್ಲೇ ಸಾವಿಗೀಡಾದರು ಎಂದು ಹೇಳಿದರು. ಒಂದೆಡೆ ದೇಶ ಬ್ರಿಟಿಷರ ಆಳ್ವಿಕೆಯಲ್ಲಿದ್ದರೆ, ಇನ್ನೊಂದೆಡೆ ಜಮೀನ್ದಾರರ ದಬ್ಬಾಳಿಕೆ ಇತ್ತು. ಬ್ರಿಟಿಷರಿಂದ ಜೈಲುವಾಸಕ್ಕೆ ಒಳಗಾದ ಅವರು 1900 ರಲ್ಲಿ ಜೈಲಿನಲ್ಲೇ ಸಾವಿಗೀಡಾದರು ಎಂದರು.



ಬಿರ್ಸಾಮುಂಡಾ ಅವರು ಮದ್ಯಪಾನ, ಮೂಢನಂಬಿಕೆಯ ವಿರುದ್ಧ ಹೋರಾಡಿದ್ದರು. ಭೂಮಿಯನ್ನೇ ತಾಯಿ, ತಂದೆ ಎಂದು ಪೂಜಿಸುತ್ತಿದ್ದರು. ಅವರ ಹೋರಾಟದ ಫಲವಾಗಿ ಅನೇಕ ಬುಡಕಟ್ಟು ಸಮುದಾಯದವರು ಜಮೀನ್ದಾರರಿಂದ ಮರಳಿ ತಮ್ಮ ಜಮೀನನ್ನು ಪಡೆದುಕೊಳ್ಳಲು ಸಾಧ್ಯವಾಯಿತು ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಮಾತನಾಡಿ ಯುವ ವಯಸ್ಸಿನಲ್ಲೇ ಆದಿವಾಸಿ ಸಮುದಾಯವನ್ನು ಪ್ರತಿನಿಧಿಸಿದವರು ಬಿರ್ಸಾಮುಂಡರವರು, ಇವರು ಭಾರತೀಯರಲ್ಲಿ ಅಪ್ರತಿಮ ಆದಿವಾಸಿ ನಾಯಕ. ಸ್ವಾತಂತ್ರ್ಯ ಹೋರಾಟಗಾರರಾಗಿದ್ದಂತೆ ಸಾಮಾಜಿಕ ಸಾಧಕರೂ ಆಗಿದ್ದವರು. ಕಳೆದ ಕೆಲವು ವರ್ಷಗಳಿಂದ ಈ ಕಾರ್ಯಕ್ರಮ ಆಯೋಜನೆ ಮಾಡಿ ಅವರ ಬಗ್ಗೆ ಹೆಚ್ಚು ಮಾಹಿತಿಯನ್ನು ತಿಳಿದುಕೊಳ್ಳುತ್ತಿದ್ದೇವೆ ಇವರ ಛಲ, ಸಾಧನೆ, ಧೈರ್ಯವನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಇವರು ತಮಗೆದುರಾದ ಹಲವಾರು ಸಮಸ್ಯೆಗಳ ನಡುವೆ ಅವರು ನೀಡಿರುವ ಕೊಡುಗೆ ಶಾಶ್ವತವಾಗಿದೆ. ಅದಕ್ಕಾಗಿ ಅವರ ನಾಯಕತ್ವವನ್ನು ನಾವು ಸ್ಮರಿಸಿ ಅವರು ಮಾಡಿರುವ ಧೈರ್ಯ, ಸಾಹಸಗಳು ಅವರ ಜಾತಿಯನ್ನು ಮುನ್ನೆಲೆಗೆ ತಂದಿರುವುದೇ ಅವರ ಹೋರಾಟದಲ್ಲಿ ಎಂದು ಹೇಳಿದರು.

ಐ,ಡಿ.ಎಸ್.ಜಿ ಸರ್ಕಾರಿ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಕೆ.ಜೆ. ವಸಂತ್ ಕುಮಾರ್ ಉಪನ್ಯಾಸ ನೀಡಿ, ಬುಡಕಟ್ಟು ಸಮುದಾಯಗಳಿಂದ ಭಗವಾನ್ ಎಂದು ಪೂಜಿಸಲ್ಪಡುವ ಬಿರ್ಸಾಮುಂಡಾ, ಶೋ?ಣೆ, ವಸಾಹತುಶಾಹಿ ವ್ಯವಸ್ಥೆಯ ವಿರುದ್ಧ ತೀವ್ರ ಪ್ರತಿರೋಧವನ್ನು ಒಡ್ಡಿದವರು. ಅವರ ಅನುಯಾಯಿಗಳಾಗಿರುವ ಆದಿವಾಸಿ ಜನಾಂಗದಿಂದಲೇ ಇಂದು ಅರಣ್ಯ ಉಳಿದಿದೆ. ಅವರಲ್ಲಿ ಮೂಡುವ ಕರಕುಶಲತೆ ಅತ್ಯದ್ಬುತವಾದದ್ದು, ಅವರ ನಡುವೆ ಲಿಂಗ ತಾರತಮ್ಯವಿಲ್ಲ. ಸಮಾನ ಮನೋಭಾವದಿಂದ ಜೀವನ ಸಾಗಿಸುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್,ಎಸ್. ಕೀರ್ತನಾ, ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಕೇಂದ್ರ ಸಂವಹನ ಇಲಾಖೆಯ ಶಿವಮೊಗ್ಗದ ಕ್ಷೇತ್ರ ಪ್ರಚಾರ ಅಧಿಕಾರಿ ಅಕ್ಷತಾ ಸಿ.ಹೆಚ್, ಜಂಟಿ ಕೃಷಿ ನಿರ್ದೇಶಕರಾದ ಎಂ.ತಿರುಮಲೇಶ್, ಬುಡಕಟ್ಟು ಸಮಾಜದ ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು,

ಕಾರ್ಯಕ್ರಮಕ್ಕೆ ಮುನ್ನ ತಾಲ್ಲೂಕು ಕಚೇರಿಯಿಂದ ಕುವೆಂಪು ಕಲಾಮಂದಿರದವರೆಗೆ ಬಿರ್ಸಾಮುಂಡ ಅವರ ಭಾವಚಿತ್ರದೊಂದಿಗೆ ನಡೆದ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ಹುಲಿವೇಷ, ಚಿಟ್ಟಿಮೇಳ, ಚೋಮನ ಕುಣಿತ, ಬೊಂಬೆ ಕುಣಿತ ಗಮನ ಸೆಳೆದರೆ, ವಿದ್ಯಾರ್ಥಿಗಳು ವಾದ್ಯಗೋಷ್ಠಿಯ ಶಬ್ದಕ್ಕೆ ಹೆಜ್ಜೆ ಹಾಕಿ ಸಂಭ್ರಮಿಸಿದರು.

# ನವೆಂಬರ್ 24 ರಿಂದ ಡಿಸೆಂಬರ್ 9 ರವರೆಗೆ ಎಲ್.ಸಿ.ಡಿ.ಸಿ. ಸಮೀಕ್ಷಾ ಕಾರ್ಯಕ್ರಮ ಸಮೀಕ್ಷಾ ಕಾರ್ಯ ಯಶಸ್ವಿಗೊಳಿಸಿ : ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

**ಗದಗ :** ಜಿಲ್ಲೆಯಲ್ಲಿ ಎಲ್.ಸಿ.ಡಿ.ಸಿ. ( ಕುಷ್ಟರೋಗ ಪ್ರಕರಣ ಪತ್ತೆ ಹಚ್ಚುವ ) ಸಮೀಕ್ಷಾ ಕಾರ್ಯಕ್ರಮವನ್ನು ನವೆಂಬರ್ 24 ರಿಂದ ಡಿಸೆಂಬರ್ 9 ರವರೆಗೆ ನಡೆಸಲಾಗುತ್ತಿದ್ದು ಸಮೀಕ್ಷೆ ಕಾರ್ಯ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಲ್.ಸಿ.ಡಿ.ಸಿ. ಕಾರ್ಯಕ್ರಮದ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್.ಸಿ.ಡಿ.ಸಿ.ಸಮೀಕ್ಷಾ ಕಾರ್ಯಕ್ರಮ ಯಶಸ್ವಿಗಾಗಿ ವಿವಿಧ ಇಲಾಖೆಗಳು ಸಹಕಾರ ಅಗತ್ಯವಾಗಿದೆ. ಶಾಲೆಯಲ್ಲಿರುವ ಮಕ್ಕಳ ತಪಾಸಣೆಗೆ ಪರೀಕ್ಷೆ ಮಾಡಲು ಬಂದಾಗ ಆಯಾ ಶಾಲೆಯ ಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರು ತಂಡದವರೊಂದಿಗೆ ಸಹಕರಿಸುವಂತೆ ನೋಡಿಕೊಳ್ಳಬೇಕು. ಎಲ್.ಸಿ.ಡಿ.ಸಿ. ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಗ್ರಾಮ ಪಂಚಾಯತಿಯಿಂದ ಕಸದ ವಿಲೇವಾರಿ ವಾಹನದ ಮುಖಾಂತರ ಮೈಕಿಂಗ್ ಮಾಡುವುದು, ಗ್ರಾಮ ಮಟ್ಟದಲ್ಲಿ ಡಂಗುರ ಸಾರುವ ಮೂಲಕ ಪ್ರಚಾರ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.



ಜಿಲ್ಲಾ ಕುಷ್ಟರೋಗ ನಿರ್ಮೂಲನ ಅಧಿಕಾರಿ ಡಾ.ರಾಜೇಂದ್ರ ಬಸರಿಗಿಡದ ಅವರು ಮಾತನಾಡಿ ಜಿಲ್ಲೆಯ ಒಟ್ಟು 120 ಗ್ರಾಮಗಳಲ್ಲಿ ಎಲ್.ಸಿ.ಡಿ.ಸಿ. ಸಮೀಕ್ಷೆ ಕೈಗೊಳ್ಳಲಾಗುವುದು. ಎಲ್.ಸಿ.ಡಿ.ಸಿ. ಸಮೀಕ್ಷಾ ಕಾರ್ಯಕ್ರಮವನ್ನು ನವೆಂಬರ್ 24 ರಿಂದ ಡಿಸೆಂಬರ್ 9 ರವರೆಗೆ 14 ದಿನಗಳವರೆಗೆ ರಜಾ ದಿನಗಳನ್ನು ಹೊರತುಪಡಿಸಿ ನಡೆಸಲಾಗುತ್ತಿದೆ. ಒಂದು ಸಾವಿರ ಜನಸಂಖ್ಯೆಗೆ ಒಂದು ತಂಡವನ್ನು ರಚಿಸಲಾಗಿದೆ. ಈ ತಂಡದಲ್ಲಿ ಒಬ್ಬ ಆಶಾ ಕಾರ್ಯಕರ್ತೆ / ಅಂಗನವಾಡಿ ಕಾರ್ಯಕರ್ತೆ + ಒಬ್ಬ ಪುರುಷ ಸ್ವಯಂ ಸೇವಕ ಇರುತ್ತಾರೆ. ಸಮೀಕ್ಷಾ ಕಾರ್ಯದ ಮೇಲ್ವಿಚಾರಣೆಗಾಗಿ 10 ಸಮೀಕ್ಷಾ ತಂಡಗಳಿಗೆ ಒಬ್ಬ ( ಎಚ್.ಐ.ಓ / ಪಿ.ಎಚ್.ಸಿ.ಓ/ ಎಸ್.ಎಚ್.ಐ.ಓ/ ಎಸ್.ಪಿ.ಎಚ್.ಸಿ.ಓ/ ಬಿ.ಎಚ್.ಇ.ಓ) ಅವರನ್ನು ಮೇಲ್ವಿಚಾರಕರನ್ನಾಗಿ ಕ್ರಿಯಾ ಯೋಜನೆ ಮಾಡಲಾಗಿದೆ. ಜಿಲ್ಲೆಯಲ್ಲಿ 434 ಸಮೀಕ್ಷಾ ತಂಡಗಳ ಹಾಗೂ 57 ಅಧಿಕಾರಿಗಳನ್ನು ಮೇಲ್ವಿಚಾರಕರನ್ನಾಗಿ ಕ್ರಿಯಾ ಯೋಜನೆ ರಚಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಎಲ್.ಸಿ.ಡಿ.ಸಿ.ಸಮೀಕ್ಷಾ ಕಾರ್ಯಕ್ರಮ ಕುರಿತು ಭಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಎಸ್.ನೀಲಗುಂದ, ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ, ಕುಟುಂಬ ಕಲ್ಯಾಣಾಧಿಕಾರಿ ವೈ.ಕೆ.ಭಜಂತ್ರಿ, ಡಾ.ಅರುಂಧತಿ ಕುಲಕರ್ಣಿ, ತಾಲೂಕಾ ವೈದ್ಯಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಬೀದಿ ನಾಯಿಗಳು ವಾಸವಿದ್ದರೆ ಪರಿಶೀಲಿಸಿ ಮಾಹಿತಿ ನೀಡಲು ಸೂಚನೆ

**ಹಾಸನ :** ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ಈ ಮೂಲಕ ತಿಳಿಯ ಪಡಿಸುವುದೇನೆಂದರೆ ಮಾನ್ಯ ಘನ ಸರ್ವೋಚ್ಚನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ:5/2025ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಆಯುಕ್ತರು ಮಹಾನಗರ ಪಾಲಿಕೆ ಹಾಸನ ರವರಿಗೆ ಮಾಹಿತಿ ತಿಳಿಸುವುದು ಹಾಗೂ ಈ ಕೆಳಕಂಡಂತೆ ಕ್ರಮವಹಿಸಲು ಕೋರಿದೆ.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮವಹಿಸುವುದು.

ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರದೇಶ ನಿರ್ಭಂದಿಸುವುದನ್ನು ಮೇಲ್ವಿಚಾಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲು ಅಧಿಕಾರಿಯಾಗಿ ನೇಮಕ ಮಾಡುವುದು.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸಮಾಡಲು ಅವಕಾಶ ಕೊಟ್ಟಲ್ಲಿ ನಾಯಿಗಳನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹಾಸನ ಮಹಾನಗ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

# ತಾಳಗುಪ್ಪದಲ್ಲಿ ಜನಸ್ಪಂದನಾ ಕಾರ್ಯಕ್ರಮ

**ಶಿವಮೊಗ್ಗ:** ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪರವರು ನ. 18 ರಂದು ಮಧ್ಯಾಹ್ನ 1.30ಕ್ಕೆ ಸಾಗರ ತಾಲೂಕು ತಾಳಗುಪ್ಪ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಸಮಸ್ಯೆಗಳ ಕುರಿತು ಪರಿಹಾರ ನೀಡಲು "ಜನಸ್ಪಂದನಾ " ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಸಾಗರ ತಾಲೂಕು ಮಟ್ಟದ ಅಧಿಕಾರಿಗಳು ನಿಗದಿಪಡಿಸಿದ ಸಮಯಕ್ಕೆ ಸರಿಯಾಗಿ ಅಗತ್ಯ ಮಾಹಿತಿಯೊಂದಿಗೆ ತಮ್ಮ ಕಚೇರಿಯ ಯಾವುದೇ ಪ್ರತಿನಿಧಿಯನ್ನು ನಿಯೋಜಸದೆ ತಾವೇ ಖುದ್ದಾಗಿ ತಪ್ಪದೇ ಹಾಜರಿದ್ದು ತಮ್ಮ ಇಲಾಖೆಗೆ ಸಂಬಂಧಪಟ್ಟ ವಿಷಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿಯನ್ನು ನೀಡುವಂತೆ ಸಾಗರ ತಾಲೂಕು ತಹಶೀಲ್ದಾರ್‌ರವರು ಪ್ರಕಟಣೆಯಲ್ಲಿ ತಿಳಿಸಿದೆ.

# ಮುಳ್ಳಯ್ಯನಗಿರಿ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ನಿರ್ಬಂಧ ವಿಸ್ತರಣೆ

**ಚಿಕ್ಕಮಗಳೂರು:** ತಾಲ್ಲೂಕಿನ ಮುಳ್ಳಯ್ಯನಗಿರಿ ಪ್ರದೇಶದ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ವಸ್ತುಗಳನ್ನು ಬಳಸುವ ಮತ್ತು ಮಾರಾಟ ಮಾಡುವ ಕ್ರಮಕ್ಕೆ ನಿರ್ಬಂಧ ವಿಧಿಸಿದ್ದ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಈ ನಿರ್ಬಂಧವನ್ನು ಡಿಸೆಂಬರ್ 19 ರವರೆಗೆ ಅಥವಾ ಮುಂದಿನ ಆದೇಶದವರೆಗೆ ವಿಸ್ತರಿಸಿದ್ದಾರೆ.

ಮುಳ್ಳಯ್ಯನಗಿರಿ ಪ್ರದೇಶದಲ್ಲಿ ಪರಿಸರವನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಈ ಪ್ರದೇಶದಲ್ಲಿ ಪ್ಲಾಸ್ಟಿಕ್ ಬಳಕೆ ಮತ್ತು ಮಾರಾಟವನ್ನು ನಿರ್ಬಂಧಿಸಿ 2024 ರ ಏಪ್ರಿಲ್ 16 ರಂದು ಮೊದಲ್ಗೊಂಡು ಆದೇಶ ಹೊರಡಿಸಿದ್ದು, ಅನಂತರದಲ್ಲಿ ಈ ಆದೇಶವನ್ನು ಅಕ್ಟೋಬರ್ 21ರವರೆಗೆ ವಿಸ್ತರಿಸುತ್ತಾ ಬರಲಾಗಿತ್ತು.

ಈ ಆದೇಶದ ಪ್ರಕಾರ ಉಪಯೋಗಿಸಿ ಎಸೆಯುವ ಕುಡಿಯುವ ನೀರಿನ ಪ್ಲಾಸ್ಟಿಕ್ ಬಾಟಲಿಗಳು,

ಪ್ಲಾಸ್ಟಿಕ್ ಚಿಪ್ಸ್ ಪ್ಯಾಕೇಟ್‌ಗಳು, ಗುಟ್ಕಾ ಪ್ಯಾಕೇಟ್‌ಗಳು ಹಾಗೂ ಇದೇ ರೀತಿಯ ತಿನ್ನಲು ಯೋಗ್ಯವೆಂದು ಪ್ಯಾಕ್ ಮಾಡಿರುವ ಇತರೆ ಪ್ಲಾಸ್ಟಿಕ್ ಪ್ಯಾಕೇಟ್‌ಗಳ ಕೊಂಡೊಯ್ಯುವಿಕೆ, ಬಳಕೆ ಮತ್ತು ಮಾರಾಟ ಮಾಡುವುದನ್ನು ನಿರ್ಬಂಧಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ವಿರುದ್ಧ ಬಿಎನ್‌ಎಸ್ 221 ಮತ್ತು ಅನ್ವಯಿಸಬಹುದಾದ ಇತರೆ ಕಾನೂನಿನ ಅನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

# ಸಮತೋಲನ ಪೋಷಕಾಂಶ ಸಮೃದ್ಧ ಬೆಳೆಯ ಆಧಾರ

**ದಾವಣಗೆರೆ:** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇರುವಕ್ಕಿ ಹಾಗೂ ಶಿವಮೊಗ್ಗ ಕೃಷಿ ಮಹಾವಿದ್ಯಾಲಯ ನವಿಲೆ 2025–2026ನೇ ಸಾಲಿನ ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದ ಅಂಗವಾಗಿ ನವೆಂಬರ್ 12 ರಂದು ಹೊಸಜೋಗ ಗ್ರಾಮದ ಶ್ರೀಬಸವೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಗುಂಪು ಚರ್ಚೆಯನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮ ಆರಂಭಕ್ಕೂ ಮೊದಲು ವಿದ್ಯಾರ್ಥಿಗಳು ಮಣ್ಣಿನಲ್ಲಿರುವ ಪ್ರಮುಖ ಪೋಷಕಾಂಶಗಳು, ಉಪಪ್ರಮುಖ ಹಾಗೂ ಲಘುಪೋಷಕಾಂಶಗಳು ಸಸ್ಯಗಳ ಬೆಳವಣಿಗೆಯಲ್ಲಿ ವಹಿಸುವ ಪಾತ್ರ,

ಅವುಗಳ ಕೊರತೆಯಿಂದ ಉಂಟಾಗುವ ಲಕ್ಷಣಗಳ ಕುರಿತು ಮಾಹಿತಿ ನೀಡಿದರು.

ಕೃಷಿ ಮಹಾವಿದ್ಯಾಲಯ ಮಣ್ಣು ವಿಜ್ಞಾನ ವಿಭಾಗದ ಡಾ.ಜಯಪ್ರಕಾಶ್.ಎಸ್.ಎಂ. ಅವರು ಈ ಭಾಗದ ಪ್ರಮುಖ ಬೆಳೆಗಳಾದ ಅಡಿಕೆ ಹಾಗೂ ಭತ್ತಗಳಲ್ಲಿನ ಪೋಷಕಾಂಶಗಳ ನಿರ್ವಹಣೆ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡುವುದರ ಜೊತೆಗೆ ಸುಮಾರು 50ಕ್ಕೂ ಹೆಚ್ಚಿನ ರೈತಬಾಂಧವರು ತಮ್ಮ ಜಮೀನಿನಿಂದ ತಂದಿದ್ದ ಮಣ್ಣು ಮಾದರಿ ಪರೀಕ್ಷೆಯ ವರದಿ ಗಮನಿಸಿ ಸೂಕ್ತ ಸಲಹೆ ನೀಡಿದರು.

# ಕಾಂಗ್ರೆಸ್‌ನಿಂದ ಪಕ್ಷಾಂತರಿಗಳಿಗೆ ಮಣೆ; ಹೆಚ್. ದುಗ್ಗಪ್ಪ ಆಕ್ರೋಶ



**ದಾವಣಗೆರೆ:** ಕಳೆದ ನಾಲ್ಕು ದಶಕಕ್ಕಿಂತಲೂ ಹೆಚ್ಚು ಕಾಲ ಪಕ್ಷಕ್ಕೆ ನಿಷ್ಠಾವಂತರಾಗಿ ದುಡಿದಿರುವ ನಮಗೆ ಪಕ್ಷದಿಂದ ವಿಧಾನಸಭೆ ಕ್ಷೇತ್ರ ಚುನಾವಣೆಗೆ ಟಿಕೇಟ್ ಕೊಡುವುದಿರಲಿ, ನಿಗಮ ಮಂಡಳಿಗಳ ಅಧ್ಯಕ್ಷ ಸ್ಥಾನದಿಂದಲೂ ವಂಚಿಸಿ, ಪಕ್ಷಾಂತರಿಗಳಿಗೆ, ಉಳ್ಳವರಿಗೆ ಮಣೆ ಹಾಕಲಾಗುತ್ತಿದೆ ಎಂದು ಕೆಪಿಸಿಸಿ ಸದಸ್ಯ ಹೆಚ್. ದುಗ್ಗಪ್ಪ ಸ್ವಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಾನು ಪರಿಶಿಷ್ಟ ಜಾತಿಗೆ ಸೇರಿದವನಾಗಿ, ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪನವರಿಗೆ ರಾಜಕೀಯ ಕಾರ್ಯದರ್ಶಿಯಾಗಿ 25 ವರ್ಷಗಳ ಕಾಲ ಹಲವಾರು ಹೋರಾಟಗಳಲ್ಲಿ ಭಾಗಿಯಾಗಿದ್ದೇನೆ. ಹಾಗಿದ್ದರೂ ಮೀಸಲು ಕ್ಷೇತ್ರಗಳಿಗೆ ಟಿಕೇಟ್ ಕೊಡಲು ಮನವಿ ಮಾಡಿದರೂ ಸಹ ನೀಡದೆ ವಂಚಿಸಲಾಗಿದೆ. ಕಡೆಗೆ ಸಣ್ಣಪುಟ್ಟ ಹುದ್ದೆಗಳನ್ನು ನೀಡಲು ಪಕ್ಷ ನಿರಾಕರಿಸಿದೆ ಎಂದರೆ ಇದರ ಹಿಂದಿರುವ ಕಾಣದ ಕೈ ಯಾವುದು ಎಂದು ನನಗೆ ಅರ್ಥವಾಗುತ್ತಿಲ್ಲ ಎಂದು ಪತ್ರಿಕಾ ಹೇಳಿಕೆಯಲ್ಲಿ ಬೇಸರ ಹೊರಹಾಕಿದ್ದಾರೆ.

ಕಾಂಗ್ರೆಸ್ ಪಕ್ಷದ ಸಂಘಟನೆಯಲ್ಲಿ ಕಳೆದ ನಲವತ್ತು ವರ್ಷಗಳಿಂದ ದುಡಿದಿರುವ ನನಗೆ ನಿಗಮ ಮಂಡಳಿಗಳಿಗೆ ಅಧ್ಯಕ್ಷ ಸ್ಥಾನ ನೀಡಬೇಕೆಂದು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಖಾತೆ ಸಚಿವ ಕೆ.ಹೆಚ್. ಮುನಿಯಪ್ಪ ಸಿಎಂ ಸಿದ್ಧರಾಮಯ್ಯನವರಿಗೆ ನನ್ನ ಪರವಾಗಿ ಶಿಫಾರಸ್ಸು ಮಾಡಿದ್ದರು, ಹಾಗಿದ್ದರೂ ನನಗೆ ಸ್ಥಾನ ಸಿಗಲಿಲ್ಲ. ಪಕ್ಷದಲ್ಲಿ ನನಗೆ ಅನ್ಯಾಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಗಲು ರಾತ್ರಿ, ಮನೆ ತೊರೆದು ಪಕ್ಷಕ್ಕಾಗಿ ದುಡಿದ ನಮ್ಮಂತಹ ನಿಷ್ಠಾವಂತ ಕಾರ್ಯಕರ್ತರಿಗೆ ನಿಗಮ ಮಂಡಳಿಗಳಲ್ಲಿ ಸ್ಥಾನ ನೀಡದೆ ಅನ್ಯಾಯ ಮಾಡಿರುವ ಸಿಎಂ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದ್ದಾರೆ.

# 2025–2026 ನೇ ಸಾಲಿನ ಗ್ರಾಮ ಸಭೆಯಲ್ಲಿ ಕಾನೂನು ಅರಿವು ಕಾರ್ಯಕ್ರಮ

**ಶಿವಮೊಗ್ಗ:** ನ. 13 ರಂದು ಬಿ.ಬೀರನಹಳ್ಳಿ ಗ್ರಾಮ ಪಂಚಾಯತಿಯ 2025–2026 ನೇ ಸಾಲಿನ ಗ್ರಾಮ ಸಭೆಯಲ್ಲಿ ಕಾನೂನು ಅರಿವು ಕಾರ್ಯಕ್ರಮವನ್ನು ಗೌರವಾನ್ವಿತ ನ್ಯಾಯದೀಶರು ಹಾಗೂ ಸದಸ್ಯ ಕಾರ್ಯದರ್ಶಿ ಸಂತೋಷ್ .ಎಮ್.ಎಸ್. ಇವರ ಉಪಸ್ಥಿತಿಯಲ್ಲಿ ಹಾಗೂ ಮಂಜುನಾಥ.ಆರ್ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು. ತಾಜುದ್ದೀನ್ ಖಾನ್, ಮಕ್ಕಳ ಕಲ್ಯಾಣ ಸಮಿತಿ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಲಕ್ಷ್ಮೀಬಾಯಿ ಹಾಗೂ ಉಪಾಧ್ಯಕ್ಷರು ಹಾಗೂ ಸದಸ್ಯರುಗಳು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಈ ಕಾರ್ಯಕ್ರಮವನ್ನು ಪೋಕ್ಸೋ ಕಾಯಿದೆ ಮತ್ತು ಬಾಲ್ಯ ವಿವಾಹ ಕಾಯ್ದೆ ಬಗ್ಗೆ ಸವಿಸ್ತಾರವಾಗಿ ತಿಳಿಸುತ್ತಾ ಕಾನೂನಿನ ಅರಿವನ್ನು ಮೂಡಿಸಿದರು. ಬಿ.ಬೀರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸದಾಶಿವಪುರ (ಹಕ್ಕಿ ಪಿಕ್ಕಿ ಕ್ಯಾಂಪ್) ಗ್ರಾಮದಲ್ಲಿರುವ ವಾಲ್ಮೀಕಿ ಆಶ್ರಮ ಶಾಲೆಯ ವಿಧ್ಯಾರ್ಥಿಗಳೊಂದಿಗೆ ಬಾಲ್ಯ ವಿವಾಹ ಕಾಯ್ದೆಯ ಅರಿವನ್ನು ಮೂಡಿಸುವ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಮಾನವ ಸರಪಳಿ ಮುಖಾಂತರ ಬಾಲ್ಯ ವಿವಾಹ ಕಾಯ್ದೆ ಮತ್ತು ಬಾಲ್ಯವಿವಾಹ ನಿಯಂತ್ರಣದ ಕುರಿತಂತೆ ಗ್ರಾಮ ಪಂಚಾಯಿತಿ ಜನಪ್ರತಿನಿದಿಗಳು, ವಿವಿಧ ಇಲಾಖೆಯ ಅಧಿಕಾರಿಗಳು



ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ನ್ಯಾಯಾಧೀಶರಾದ ಸಂತೋಷ.ಎಮ್.ಎಸ್ ರವರು ಜೊತೆಗೂಡಿ ಪ್ರತಿಜ್ಞಾವಿಧಿ ಸ್ವೀಕಾರ ಮಾಡುವುದರ ಮೂಲಕ ಅರಿವನ್ನು ಮೂಡಿಸಲಾಯಿತು.

# ಹಸಿಕಸ ಒಣಕಸ, ನೈರ್ಮಲ್ಯ ಕಸಗಳೆಂದು ಪ್ರತ್ಯೇಕವಾಗಿ ವಿಂಗಡಿಸಿ ಮನೆ ಬಾಗಿಲಿಗೆ ಬರುವ ತ್ಯಾಜ್ಯ ಸಂಗ್ರಹಣಾ ವಾಹನಗಳಿಗೆ ನೀಡಬೇಕು

**ದಾವಣಗೆರೆ:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಮೂಲದಲ್ಲಿಯೇ ವಿಂಗಡಿಸಿದ ಜೈವಿಕವಾಗಿ ಕೊಳೆಯುವ ಹಸಿತ್ಯಾಜ್ಯ ಜೈವಿಕವಾಗಿ ಕೊಳೆಯದ ಮತ್ತು ಮರುಬಳಸಬಹುದಾದ ಒಣತ್ಯಾಜ್ಯ ಹಾಗೂ ಸ್ಯಾನಿಟರಿ ಪ್ಯಾಡ್ ನಂತಹ ನೈರ್ಮಲ್ಯ ತ್ಯಾಜ್ಯಗಳನ್ನು ಪ್ರತ್ಯೇಕವಾಗಿ ಪ್ರಾಥಮಿಕ ತ್ಯಾಜ್ಯ ಸಂಗ್ರಹಣಾ ವಾಹನಗಳಾದ ಆಟೋ ಟಿಪ್ಪಣಿಗಳ ಮೂಲಕ ಸಂಗ್ರಹಿಸಲಾಗುತ್ತಿದೆ.

ತ್ಯಾಜ್ಯ ಸಂಗ್ರಹಣೆಯಲ್ಲಿ ತೊಡಗಿರುವ ವಾಹನ ಚಾಲಕರು ಸಹಾಯಕರುಗಳಿಗೆ ಸರ್ಕಾರದ ಆದೇಶದಂತೆ ವಾರದ ರಜೆ ಒದಗಿಸಬೇಕಿರುತ್ತದೆ. ಹಾಗೂ ಕರ್ನಾಟಕ ಪೌರನಿಗಮಗಳ ಅಧಿನಿಯಮದಡಿ ಸೆಕ್ಷನ್ವಯ, ನಗರದ ಎಲ್ಲಾ ವಾರಗಳಲ್ಲಿ ಭಾನುವಾರ ಹೊರತುಪಡಿಸಿ ಸೋಮವಾರದಿಂದ ಶನಿವಾರದವರೆಗೆ ಮನೆ ಮನೆಗಳಿಂದ ವಿಂಗಡಿಸಿದ ತ್ಯಾಜ್ಯ ಸಂಗ್ರಹಣೆಯನ್ನು ನಿರ್ವಹಿಸಲಾಗುವುದು. ಆದ್ದರಿಂದ ಸಾರ್ವಜನಿಕರು ತಮ್ಮ ಮನೆಗಳಲ್ಲಿ ಉತ್ಪತ್ತಿಯಾದ ತ್ಯಾಜ್ಯವನ್ನು ರಸ್ತೆ ಚರಂಡಿ, ಖಾಲಿ ನಿವೇಶನಗಳಲ್ಲಿ ಎಸೆಯದೇ ಮೂಲದಲ್ಲಿಯೇ ಹಸಿಕಸ ಒಣಕಸ, ನೈರ್ಮಲ್ಯ ಕಸಗಳೆಂದು ಪ್ರತ್ಯೇಕವಾಗಿ ವಿಂಗಡಿಸಿ ಮನೆ ಬಾಗಿಲಿಗೆ ಬರುವ ತ್ಯಾಜ್ಯ ಸಂಗ್ರಹಣಾ ವಾಹನಗಳಿಗೆ ನೀಡಬೇಕು.

ಅಂತಹ ಪ್ರಕರಣಗಳು ಕಂಡುಬಂದಲ್ಲಿ ತ್ಯಾಜ್ಯ ವಿಂಗಡಿಸದ/ ಆಟೋ ಟಿಪ್ಪಣಿಗಳಿಗೆ ತ್ಯಾಜ್ಯ ನೀಡದ ಮನೆಗಳ ಮಾಲೀಕರುಗಳಿಗೆ ಕರ್ನಾಟಕ ಮಹಾನಗರ ಪಾಲಿಕೆಗಳ ಘನತ್ಯಾಜ್ಯ ನಿರ್ವಹಣೆ ಉಪ ವಿಧಿಗಳುರಲ್ಲಿ ನಿಗದಿಪಡಿಸಿದಂತೆ ರೂ. 100 ರಿಂದ ರೂ 1000 ಗಳವರೆಗೆ ದಂಡ ವಿಧಿಸಲಾಗುವುದು.

ಬೀದಿಬದಿ ವ್ಯಾಪಾರಿಗಳು ತಮ್ಮ ಉದ್ದಿಮೆಯ ಸುತ್ತಮುತ್ತ 100 ಅಡಿವರೆಗಿನ ಜಾಗದಲ್ಲಿ ಗುಟ್ಕಾ, ಟೀ ಕಪ್, ಸಿಗರೇಟ್ ಬೀಡಿ ತುಣುಕಗಳು ಬೀಳದಂತೆ 75 ಲೀ. ಸಾಮರ್ಥ್ಯದ ಕಸದ ಡಬ್ಬಿಗಳನ್ನು (ಲಿಟ್ಟರ್ ಬಿನ್) ಮತ್ತು ಸೂಚನಾ ಫಲಕಗಳನ್ನು ಅಳವಡಿಸಿ ಕ್ರಮವಹಿಸುವುದು, ತಪ್ಪಿದಲ್ಲಿ ಉದ್ದಿಮೆದಾರರುಗಳಿಗೆ ರೂ. 500 ರಿಂದ ರೂ. 1000 ಗಳವರೆಗೆ ದಂಡ ವಿಧಿಸಲಾಗುವುದು.

ಚಹಾ, ಕಾಫಿ ವ್ಯಾಪಾರಿಗಳು ಪೇಪರ್, ಪ್ಲಾಸ್ಟಿಕ್ ಕಪ್ ಬದಲಾಗಿ ಮರುಬಳಸುವ ಸ್ಟೀಲ್, ಗಾಜಿನ ಕಸಗಳನ್ನು ಉಪಯೋಗಿಸುವುದು. ನಗರದಲ್ಲಿ ಮನೆ ನಿರ್ಮಾಣ ಕೆಡಹುವಿಕೆಯಿಂದ ಉತ್ಪತ್ತಿಯಾಗುವ ಕಟ್ಟಡ ತ್ಯಾಜ್ಯಗಳನ್ನು ಸಂಗ್ರಹಿಸುವ ಸಲುವಾಗಿ ನಗರದ ವಾರ್ಡ್– 02 ರ ಶಿವನಗರದ ಎಸ್ ಟಿ ಪಿ ಪಕ್ಕದ ತಗ್ಗು ಪ್ರದೇಶ ಮತ್ತು ವಾರ್ಡ್–31 ರ ರಾಮನಗರದ ರುದ್ರಭೂಮಿ (ಗಾಂಧಿ ಭವನ ಹಿಂಭಾಗು ಪಕ್ಕದ ತಗ್ಗು ಪ್ರದೇಶಗಳನ್ನು ಗುರುತಿಸಲಾಗಿದ್ದು ಮನೆ ಕೆಡುಹುವಿಕೆ. ನಿರ್ಮಾಣ, ನವೀಕರಣದಿಂದ ಉತ್ಪತ್ತಿಯಾಗುವ ಸಿ & ಡಿ ತ್ಯಾಜ್ಯಗಳನ್ನು ನಿಗದಿಪಡಿಸಿದ ಸ್ಥಳದಲ್ಲಿ ಮಾತ್ರವೇ ವಿಲೇಪಡಿಸಬೇಕೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

# ಬಿಹಾರ ವಿಧಾನಸಭೆಯಲ್ಲಿ ಎನ್.ಡಿ.ಎ. ಭರ್ಜರಿ ಜಯ ಜಿಲ್ಲಾ ಕಛೇರಿಯಲ್ಲಿ ಸಂಭ್ರಮಾಚರಣೆ

**ದಾವಣಗೆರೆ :** ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್.ಡಿ.ಎ. ಸಂಯುಕ್ತ ಜನತಾದಳ ಮತ್ತು ಬಿ.ಜೆ.ಪಿ., ಇತರೆ ಪಕ್ಷಗಳು ದಾಖಲೆ ಜಯದೊಂದಿಗೆ ನಿಚ್ಚಳ ಬಹುಮತದೊಂದಿಗೆ ಬಿಹಾರದಲ್ಲಿ ಜಯಶೀಲವಾಗಿದ್ದರಿಂದ ಗೆಲುವಿನ ಸಂಭ್ರಮಾಚರಣೆಯನ್ನು ದಾವಣಗೆರೆ ಜಿಲ್ಲಾ ಕಛೇರಿಯಲ್ಲಿ ಆಚರಿಸಲಾಯಿತು.



ಈ ಸಂದರ್ಭದಲ್ಲಿ ಜೆ.ಡಿ.ಯು. ಜಿಲ್ಲಾಧ್ಯಕ್ಷ ಶ್ರೀ ಜಯಣ್ಣ ಹೆಚ್. ಜಿಲ್ಲಾ ಸಂಚಾಲಕರಾದ ಎಂ.ಡಿ. ನೀಲಗಿರಿಯಪ್ಪ, ಜಿಲ್ಲಾ ಯುವ ಘಟಕದ ಅಧ್ಯಕ್ಷರಾದ ಹೆಚ್.ಶ್ರೀನಿವಾಸ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಯೋಗಿ ಡಿ.ಆರ್., ಜಿಲ್ಲಾ ಸಂಘಟನಾ ಸಂಚಾಲಕರಾದ ಕುಮಾರಸ್ವಾಮಿ, ಜಿಲ್ಲಾ ಉಪಾಧ್ಯಕ್ಷರಾದ ಭೀಮಣ್ಣ ಕಾಡಜ್ಜಿ, ಪ್ರಧಾನ ಕಾರ್ಯದರ್ಶಿ ಕಾಯಿಪೇಟೆ ಹಾಲೇಶ್, ದೇವರಾಜ್ ಸೇರಿದಂತೆ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ನ.18 ರಂದು ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಭೆ

**ಹಾಸನ :** ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ನ.18 ರಂದು ಬೆಳಿಗ್ಗೆ 11 ಗಂಟೆಗೆ "ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಭೆ"ಯನ್ನು ಹಮ್ಮಿಕೊಂಡಿದ್ದು, ಸದರಿ ಸಭೆಗೆ ಎಲ್ಲಾ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಪದಾಧಿಕಾರಿಗಳು ಮತ್ತು ಮುಖಂಡರುಗಳು ಸಭೆಗೆ ಹಾಜರಾಗಿ ಸಭೆಯನ್ನು ಯಶ್ವಸಿಗೊಳಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

# ಬೀದಿ ನಾಯಿಗಳ ಉಪಟಳ ಕಡಿವಾಣಕ್ಕೆ ಕ್ರಮ

**ಬಳ್ಳಾರಿ:** ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳಲ್ಲಿನ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು ಎಂದು ಸಿರುಗುಪ್ಪ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.ಸರ್ವೋಚ್ಚ ನ್ಯಾಯಾಲಯ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳು ವಾಸವಿದ್ದಲ್ಲಿ, ಪರಿಶೀಲಿಸಿ ಬೀದಿ ನಾಯಿಗಳ ಸಂಖ್ಯೆಯ ಮಾಹಿತಿಯನ್ನು ಸಿರುಗುಪ್ಪ ನಗರಸಭೆ ಕಾರ್ಯಾಲಯ ಕಚೇರಿಗೆ ಸಲ್ಲಿಸಬೇಕು ಎಂದು ಅವರು ತಿಳಿಸಿದ್ದಾರೆ.ಸರ್ಕಾರಿ ಮತ್ತು ಖಾಸಗಿ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ನಗರ ಸ್ಥಳೀಯ ಸಂಸ್ಥೆಗಳಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಭಂಧಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು.ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅದನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು.ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಲಕರ ಪೋಷಕರ ಸಂರಕ್ಷಣಾ ಕಾಯ್ದೆಯ ಅರಿವು ಕಾರ್ಯಕ್ರಮ

**ದಾವಣಗೆರೆ :** ನವಂಬರ್ 17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿ ಸಭಾಂಗಣ, ಎಂ.ಸಿ.ಸಿ ಬಿ.ಬ್ಲಾಕ್ ದಾವಣಗೆರೆ ಇಲ್ಲಿ ಪಾಲಕರ ಪೋಷಕರ ಸಂರಕ್ಷಣಾ ಕಾಯ್ದೆ–2007ರ ಅರಿವು ಕಾರ್ಯಕ್ರಮದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣನವರ ಉದ್ಘಾಟಿಸಿ, ವಿಷಯ ಮಂಡನೆ ಮಾಡುವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ.ಕೆ.ಎಸ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಉಪವಿಭಾಗೀಯ ಪಾಲಕರ ಪೋಷಕರ ಸಂರಕ್ಷಣಾ ಕಾಯ್ದೆಯ ಅಧ್ಯಕ್ಷರು ಹಾಗೂ ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ಭಾಗವಹಿಸುವರು.

# ವಾರ್ಷಿಕ ಕ್ರೀಡಾಕೂಟ –2025

**ದಾವಣಗೆರೆ :** ಕರ್ನಾಟಕ ರಾಜ್ಯ ಪೊಲೀಸ್ ವತಿಯಿಂದ ನವಂಬರ್ 17 ರಿಂದ 19 ರವರೆಗೆ ಬೆಳಿಗ್ಗೆ 8 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ವಾರ್ಷಿಕ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಬೆಂಗಳೂರಿನ ಕೆ.ಎಸ್.ಆರ್.ಪಿ ಪೊಲೀಸ್ ಮಹಾನಿರೀಕ್ಷಕರಾದ ಸಂದೀಪ್ ಪಾಟೀಲ್ ಉದ್ಘಾಟಿಸುವರು.

ನವಂಬರ್ 19 ರಂದು ಸಂಜೆ 4 ಗಂಟೆಗೆ ಸಮಾರೋಪ ಸಮಾರಂಭವನ್ನು ಏರ್ಪಡಿಸಲಾಗಿದ್ದು, ಮುಖ್ಯ ಅತಿಥಿಗಳಾಗಿ ಪೂರ್ವ ವಲಯದ ಪೊಲೀಸ್ ಮಹಾ ನಿರೀಕ್ಷಕರಾದ ಡಾ.ಬಿ.ಆರ್ ರವಿಕಾಂತೇಗೌಡ ಭಾಗವಹಿಸುವರು. ಎಂದು ಪ್ರಕಟಣೆ ತಿಳಿಸಿದೆ.

## ಏಕಲವ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ :** 2024 ನೇ ಸಾಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಕ್ರೀಡಾಪಟುಗಳು ಅಧಿಕೃತ ಜಾಲತಾಣ http://sevasindhu.karnataka.gov.in ಆನ್‌ಲೈನ್ ಮೂಲಕ ಡಿಸೆಂಬರ್ 3 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192–237480 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ.

# ಕ್ರೀಡಾಪಟುಗಳ ಶೈಕ್ಷಣಿಕ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ ರಾಜ್ಯದ ಕ್ರೀಟಾಪಟುಗಳ ಶೈಕ್ಷಣಿಕ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಕ್ರೀಡಾಪಟುಗಳು ಅಧಿಕೃತ ಜಾಲತಾಣ http://sevasindhu.karnataka.gov.in ಆನ್‌ಲೈನ್ ಮೂಲಕ ಡಿಸೆಂಬರ್ 3 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192–237480 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ

# ಜಿಲ್ಲಾ ಬಿಕ್ಕಟ್ಟು ಪರಿಹಾರ ಸಮಿತಿ ರಚಿಸುವ ಸಭೆ

**ದಾವಣಗೆರೆ :** ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನವಂಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಆಸ್ತಿತ್ವದಲ್ಲಿರುವ ಅಪಾಯಕಾರಿ ಕಾರ್ಯಾಚರಣೆ ಹೊಂದಿರುವ ಎಂ.ಎ.ಹೆಚ್(ಮೇಜರ್ ಆಕ್ಸಿಡೆಂಟಿ ಹೆಜಾರ್ಡ) ಕಾರ್ಖಾನೆ ಮೇ.ಬನ್ಸಲ್ ಆರಾಧ್ಯ ಸ್ಟೀಲ್ ಪ್ರೈ ಲಿ.ಆನಗೋಡು ಕಾರ್ಖಾನೆಗೆ ಸಂಬಂಧಿಸಿದಂತೆ ಜಿಲ್ಲಾ ಬಿಕ್ಕಟ್ಟು ಪರಿಹಾರ ಸಮಿತಿ ರಚಿಸುವ ಸಲುವಾಗಿ ಸಭೆ ಆಯೋಜಿಸಲಾಗಿದೆ ಎಂದು ಕಾರ್ಖಾನೆಗಳ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಬಳ್ಳಾರಿ:** ಪಿಯುಸಿ ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಪೋಷಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ಅರ್ಜಿ ಸಲ್ಲಿಕೆಯ ಅವಧಿಯನ್ನು ನ.25 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.\

# ನಂದಿನಿ ತುಪ್ಪ ಕಲಬೆರಕೆ ದಂಧೆ




**ಬೆಂಗಳೂರು:** ಶುದ್ಧತೆ ಹಾಗೂ ಗುಣವಂಟ್ಟಕ್ಕೆಹೆಸರಾಗಿರುವ 'ನಂದಿನಿ' ಬ್ರಾಂಡ್ ತುಪ್ಪವನ್ನು ಕಲಬೆರಕೆ ಮಾಡಿ ಮಾರಾಟ ಮಾಡುತ್ತಿದ್ದ ಬೃಹತ್ ಜಾಲವನ್ನು ಸಿಸಿಬಿ ಪೊಲೀಸರು ಮತ್ತು ಕೆಎಂಎಫ್‌ನ ಜಾಗೃತ ದಳ ಬಯಲು ಮಾಡಿದೆ.

ಕೆಎಂಎಫ್ ವಿತರಕ ಸೇರಿ ನಾಲ್ಕು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಕೆಎಂಎಫ್‌ನಿಂದ ನಂದಿನಿ ತುಪ್ಪವನ್ನು ಖರೀದಿಸುತ್ತಿದ್ದ ಆರೋಪಿಗಳು, ಬಳಿಕ ತಮಿಳುನಾಡಿನ ತಿರುಪೂರ್ ಜಿಲ್ಲೆಗೆ ಕಳುಹಿಸಿ, ಅಲ್ಲಿನ ಗೋದಾಮೊಂದರಲ್ಲಿ ಕಲಬೆರಕೆ ತುಪ್ಪಕ್ಕೆ ಪಾಮ್ ಆಯಿಲ್, ತೆಂಗಿನಎಣ್ಣೆ ಕಲಬೆರಕೆ ಮಾಡಿ 4 ಲೀಟರ್‌ನಷ್ಟು ತಯಾರಿಸಿ ಪ್ಯಾಕ್ ಮಾಡುತ್ತಿದ್ದರು. ಎರಡು ವರ್ಷಗಳಿಂದ ಈ ದಂಧೆ ನಡೆಯುತ್ತಿತ್ತು. ಮಾಡುತ್ತಿದ್ದರು. ಒಂದು ಲೀಟರ್ ಅಸಲಿ ನಂದಿನಿಆಯಿಲ್ 1,26,95,200, ಆರೋಪಿಗಳಿಂದ 8,136 ಲೀಟರ್ ಕಲಬೆರಕೆ ತುಪ್ಪ 4 ವಾಹನಗಳು, ನಂದಿನಿ ಲಾಂಛನ, ಬಾಟಲಿಗಳು ಹಾಗೂ ತೆಂಗಿನ ಎಣ್ಣೆ, ಪಾಮ್ ಸೇರಿದಂತೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ

# ಮೆಣಸಗಿ ಗ್ರಾಮದ ಶಾಲೆಯಲ್ಲಿ ಮಕ್ಕಳ ದಿನಾಚರಣೆ



**ಗದಗ:** ರೋಣ ತಾಲೂಕಿನ ಮೆಣಸಗಿ ಗ್ರಾಮದ ಶ್ರೀ ಲಿಂಗಬಸವೇಶ್ವರ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಪ್ರಾಥಮಿಕ ಪ್ರೌಢಶಾಲೆಯಲ್ಲಿ ಸ್ವತಂತ್ರ ಭಾರತದ ಪ್ರಥಮ ಪ್ರಧಾನಿ ಪಂಡಿತ ಜವಾಹರ ಲಾಲ ನೆಹರೂ ಅವರ ಜನ್ಮ ದಿನಾಚರಣೆ ಅಂಗವಾಗಿ ಮಕ್ಕಳ ದಿನಾಚರಣೆ ಹಾಗೂ ಪೋಷಕರ , ಪಾಲಕರ ಮಹಾಸಭೆ ಶುಕ್ರವಾರ ಯಶಸ್ವಿಯಾಗಿ ಜರುಗಿತು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಅವರು ಪಂಡಿತ ಜವಾಹರಲಾಲ ನೆಹರೂ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಪೋಷಕರ ಪಾಲಕರ ಮಹಾಸಭೆ ಹಾಗೂ ಮಕ್ಕಳ ದಿನಾಚರಣೆಯನ್ನು ಆರಂಭಿಸಲಾಯಿತು.

ನಂತರ ಮಾತನಾಡಿದ ಅವರು ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಶಾಲೆ ಹಾಗೂ ಮನೆಯಲ್ಲಿ ಪಾತ್ರ ಪ್ರಮುಖವಾಗಿದೆ. ಶಾಲೆಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ, ಅಧ್ಯಯನದ ಗುಣಮಟ್ಟ, ಪರೀಕ್ಷಾ ಫಲಿತಾಂಶ, ಪೋಷಕಾಂಶಯುಕ್ತ ಆಹಾರ, ಸ್ವಚ್ಛತೆ, ಆರೋಗ್ಯ, ಬಾಲ್ಯವಿವಾಹ, ಮಕ್ಕಳ ಮೇಲಿನ ಹಿಂಸೆ, ಬಾಲಕಾರ್ಮಿಕ ಪದ್ಧತಿ, ಪೋಸ್ಕೋ ಕಾಯ್ದೆ ಕುರಿತಂತೆ ಅರಿವು ಹೊಂದುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು. ಶಾಲಾ ಅಭಿವೃದ್ಧಿಗೆ ಪಾಲಕರ ಸಕ್ರಿಯ ಸಹಕಾರ ಅತ್ಯಗತ್ಯ. ಮಕ್ಕಳು ಮಧ್ಯಾಹ್ನದ ಊಟ, ಕ್ರೀಡೆ, ಪುಸ್ತಕ ಓದು ಇತ್ಯಾದಿ ವಿಷಯಗಳಲ್ಲಿ ಸಂಪೂರ್ಣವಾಗಿ ಭಾಗವಹಿಸುವಂತೆ ಪೋಷಕರು ತಮ್ಮ ಮಕ್ಕಳಿಗೆ ಪ್ರೋತ್ಸಾಹಿಸಬೇಕು ಎಂದು ಹೇಳಿದರು. ಹಾಗೂ ತಮ್ಮ ಮಕ್ಕಳ ಆಸಕ್ತಿಗನುಗುಣವಾಗಿ ಪ್ರೋತ್ಸಾಹ ನೀಡುವ ಮೂಲಕ ಮಕ್ಕಳ ಸಾಧನೆಗೆ ಪಾಲಕರು ಹಾಗೂ ಶಿಕ್ಷಕರು ನಿರಂತರ ಶ್ರಮಿಸಬೇಕೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ರೋಣ ತಹಶೀಲ್ದಾರರು, ಶಾಲಾ ಮುಖ್ಯೋಪಾಧ್ಯಾಯರು, ಸಹ ಶಿಕ್ಷಕರು, ಪೋಷಕರು,ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 28 ಕೃಷ್ಣಮೃಗ ಸಾವು

## ಬೆಳಗಾವಿ ಮೃಗಾಲಯದಲ್ಲಿ 2 ದಿನಗಳ ಅಂತರದಲ್ಲಿ ಸಾಮೂಹಿಕ ಮರಣ । ವೈರಾಣು ಸೋಂಕು ಶಂಕೆ



**ಬೆಳಗಾವಿ:** ಅಂತರದಲ್ಲಿ 28 ಕೃಷ್ಣ ಮೃಗಗಳು ಮೃತಪಟ್ಟಿರುವ ಘಟನೆ ಬೆಳಕಿಗೆ ಬಂದಿದೆ. ಈ ಪ್ರಕರಣ ಮೃಗಾಲಯದೊಳಗಿನ ನಿರ್ವಹಣೆಯ ಅವ್ಯವಸ್ಥೆಯನ್ನು ಬಯಲು ಮಾಡಿದ್ದು, ಸಿಬ್ಬಂದಿ ಹಾಗೂ ವೈದ್ಯರ ನಿರ್ಲಕ್ಷ್ಯವೇ ಇದಕ್ಕೆ ಮುಖ್ಯ ಕಾರಣ ಎಂಬ ಆರೋಪಗಳು ಕೇಳಿಬರುತ್ತಿವೆ.

ಮೃಗಾಲಯದಲ್ಲಿ ಒಟ್ಟು 38 ಕೃಷ್ಣ ಮೃಗಗಳಿದ್ದು, ನ. 13ರಂದು ಮೃಗಾಲಯದಲ್ಲಿದ್ದ 8 ಕೃಷ್ಣಮೃಗಗಳು ಸಾವನ್ನಪ್ಪಿದ್ದವು. ಆದರೆ, ಈ ಘಟನೆಯನ್ನು ಅಲ್ಲಿನ ಸಿಬ್ಬಂದಿ ರಹಸ್ಯವಾಗಿಟ್ಟರು. ಆದರೆ ಶನಿವಾರ ಮತ್ತೆ 20 ಕೃಷ್ಣಮೃಗಗಳು ಮೃತಪಟ್ಟಿವೆ. ಪ್ರಾಥಮಿಕ ವರದಿಯ ಪ್ರಕಾರ ಸಾಂಕ್ರಾಮಿಕ (ಬ್ಯಾಕ್ಟಿರಿಯಲ್ – ಇನ್‌ಫೆಕ್ಷನ್) ಕೃಷ್ಣಮೃಗಗಳು ಬಲಿಯಾಗಿವೆ ಎನ್ನಲಾಗಿದೆ.

ಪ್ರಾಣಿಗಳ ಸಾವಿನ ವಿಷಯ ತಿಳಿಯುತ್ತಿದ್ದಂತಯೇ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ತನಿಖೆಗೆ ಆದೇಶಿಸಿದ್ದಾರೆ. ಮೃಗಾಲಯದಲ್ಲಿ ಪ್ರಾಣಿಗಳ ಸಾವು ಕಳವಳಕಾರಿ ವಿಷಯ. ಇಂಥ ಘಟನೆಗಳು ಮರುಕಳಿಸದಂತೆ ಕ್ರಮ ವಹಿಸಬೇಕು, ಸಿಬ್ಬಂದಿ ನಿರ್ಲಕ್ಷ್ಯಗಮನಕ್ಕೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು," ಆದೇಶಿಸಿದ್ದಾರೆ

## ಮೀನುಗಾರಿಕೆ ಇಲಾಖೆ: ಸಲಕರಣೆ ಕಿಟ್ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ:** ಮೀನುಗಾರಿಕೆ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಕಂಪ್ಲಿ ಮತ್ತು ಸಿರುಗುಪ್ಪ ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನುಗಾರರಿಗೆ ಉಚಿತ ಮೀನುಗಾರಿಕೆ ಸಲಕರಣೆಗಳ ಕಿಟ್ ವಿತರಿಸಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅಗತ್ಯ ದಾಖಲೆಗಳೊಂದಿಗೆ ಆನ್ ಲೈನ್ ವೆಬ್ ಸೈಟ್ ʔttps://ballari.nic.in ಅಥವಾ ಬಳ್ಳಾರಿ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಗೆ ಭೇಟಿ ನೀಡಬಹುದು. ಅರ್ಜಿ ಸಲ್ಲಿಸಲು ನ.22 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳಾ ಸ್ವ–ಸಹಾಯ ಸಂಘಗಳಿಗೆ ಆರ್ಥಿಕ ಸಬಲೀಕರಣಕ್ಕೆ ಬೆಂಬಲ




**ಹೊಳೆನರಸೀಪುರ:** ತಾಲ್ಲೂಕಿನ ಕಟ್ಟೆಬೆಳಗುಳ್ಳಿ ಗ್ರಾಮ ಪಂಚಾಯಿತಿಯ ಭೀಮನಹಳ್ಳಿ ಗ್ರಾಮದಲ್ಲಿ ಶನಿವಾರ "ಮತ್ಸ್ಯ ಸಂಜೀವಿನಿ" ಯೋಜನೆಯನ್ನು ಕರ್ನಾಟಕದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಅಡಿಯಲ್ಲಿ ಶ್ರೀ ಬಸವೇಶ್ವರ ಸ್ವ–ಸಹಾಯ ಸಂಘದ ಸಹಯೋಗದಲ್ಲಿ ಅನುಷ್ಠಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮುನಿರಾಜ್ ಜಿ ಮಾತನಾಡಿ ಈ ಯೋಜನೆಯು ಮಹಿಳಾ ಸ್ವ–ಸಹಾಯ ಸಂಘಗಳಿಗೆ ಆರ್ಥಿಕ ಸಬಲೀಕರಣಕ್ಕಾಗಿ ಮೀನು ಸಾಕಣೆಯಲ್ಲಿ ತೊಡಗಿಸಿಕೊಳ್ಳಲು ಬೆಂಬಲ ನೀಡುತ್ತದೆ. ಈ ಯೋಜನೆಯು ಉಚಿತ ಮೀನು ಸಾಕಣೆ ತರಬೇತಿ, ಮೀನು ಮರಿಗಳು, ಮತ್ತು ಮಾರಾಟ ವಾಹನಗಳ ಖರೀದಿಗೆ ಸಹಾಯಧನ ನೀಡುತ್ತದೆ, ಜೊತೆಗೆ ಮೀನುಗಾರಿಕೆ ಮೌಲ್ಯ ಸರಪಳಿಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ ಎಂದರು.

ಹೊಳೆನರಸೀಪುರ ತಾಲ್ಲೂಕಿನ ಮಹಿಳಾ ಸಬಲೀಕರಣಕ್ಕಾಗಿ ಕಟ್ಟೆಬೆಳ್ಳಗೂಲಿ ಗ್ರಾ.ಪಂ ಭೀಮನಹಳ್ಳಿ ಗ್ರಾಮ ಆಯ್ಕೆಮಾಡಿಕೊಂಡು ಗ್ರಾ.ಪಂ ವ್ಯಾಪ್ತಿಯ 10 ಎಕರೆ ವಿಸ್ತೀರ್ಣದ ಕೆರೆಯಲ್ಲಿ ಸ್ವ–ಸಹಾಯ ಸಂಘದ ಮಹಿಳೆಯರು ತಮ್ಮ ಗ್ರಾಮದಲ್ಲಿ ಮೀನು ಸಾಕಾಣಿಕೆಗಾಗಿ ಒಟ್ಟು 20,000 ಸಾವಿರ ಮೀನುಗಳನ್ನು ಸಾಕಾಣಿಕೆಗಾಗಿ ಹಾಗೂ ತಮ್ಮ ಸ್ವಯಂ ಉದ್ಯೋಗಕ್ಕಾಗಿ ಸರ್ಕಾರಿ ನೆರವಿನಿಂದ ಗೌರಿ ತಳಿ ಮೀನುಗಳು ತಳಿ ಮೀನು ಮರಿ ಬಿತ್ತನೆ ಮಾಡಿ,

ಭೀಮನಹಳ್ಳಿ ಗ್ರಾಮದ ಜನರಿಗೆ ಶ್ರೀ ಬಸವೇಶ್ವರಿ ಸ್ವ–ಸಹಾಯ ಸಂಘದ ಮಹಿಳೆಯರು ಮಾದರಿಯಾಗಿದ್ದಾರೆ. ಕೆರೆಗಳನ್ನು ಮಹಿಳಾ ಸ್ವ–ಸಹಾಯ ಸಂಘಗಳಿಗೆ ಮೀಸಲಿಡಲಾಗುತ್ತಿದೆ. ಮೀನುಗಾರಿಕೆ ಇಲಾಖೆಯಿಂದ ಶೇ.50 ರಷ್ಟು ಸಬ್ಸಿಡಿ ದರದಲ್ಲಿ ಮೀನು ಮರಿಗಳನ್ನು ಪೂರೈಸಲಾಗುತ್ತದೆ. ಉಚಿತ ತರಬೇತಿ ನೀಡಲಾಗುತ್ತಿದ್ದು, ಮಹಿಳೆಯರು ಮೀನು ಸಾಕಣೆ ಮತ್ತು ಮಾರಟದಲ್ಲಿ ತೊಡಗಿಸಿಕೊಳ್ಳವುದರಿಂದ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಇದು ಸಹಕಾರಿಯಾಗಿದೆ ಎಂದರು.

. ಹಾಸನ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಜಿಲ್ಲಾ ವ್ಯವಸ್ಥಾಪಕರಾದ ಕಿಶೋರ್ ಮಾತನಾಡಿ, ಯೋಜನೆಯ ಮುಖ್ಯ ಉದ್ದೇಶಗಳು ಮಹಿಳಾ ಸಬಲೀಕರಣ ಸ್ವಸಹಾಯ ಸಂಘದ ಮಹಿಳೆಯರ ಆದಾಯವನ್ನು ಹೆಚ್ಚಿಸಲು ಮತ್ತು ಆರ್ಥಿಕ ಸ್ವಾವಲಂಬನೆ ಸಾಧಿಸಲು ಸಹಾಯ ಮಾಡುವುದು ಎಂದು ತಿಳಸಿದರು.

ಈ ವೇಳೆ ಗ್ರಾ.ಪಂ ಅಧ್ಯಕ್ಷೆ ಪೂರ್ಣಿಮ , ತಾ.ಪಂ ಕಾರ್ಯಕ್ರಮ ವ್ಯವಸ್ಥಾಪಕರುಗಳಾದ (ಎನ್.ಆರ್.ಎಲ್.ಎಂ) ನವೀನ್ ಬಿ.ಪಿ, ತಾಲ್ಲೂಕು ಕೃಷಿ ವ್ಯವಸ್ಥಾಪಕಿ ನಿಸರ್ಗ ಹೆಚ್.ಎಂ. ಕೃಷಿಯೇತರ ವ್ಯವಸ್ಥಾಪಕಿ ರೋಹಿಣಿ ಐ.ಡಿ, ವಲಯ ಮೇಲ್ವಿಚಾರಕಿ ಲಲೀತಾಶ್ರೀ, ವಲಯ ಮೇಲ್ವಿಚಾರಕರು, ಯುವ ವೃತ್ತಿಪರರು, ಗ್ರಾ.ಪಂ ಸಿಬ್ಬಂದಿಗಳು ಸಂಜೀವಿನಿ ಒಕ್ಕೂಟದ ಸಿಬ್ಬಂದಿಗಳು, ಸ್ವ ಸಹಾಯ ಸಂಘದ ಮಹಿಳೆಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ನಾಡಿನ ಏಕೀಕರಣಕ್ಕಾಗಿ ದುಡಿದವರನ್ನು ನೆನಪಿಸಿಕೊಳ್ಳಬೇಕು

**ತುಮಕೂರು:** ಕನ್ನಡ ನಾಡಿಗಾಗಿ ಹಾಗೂ ಕನ್ನಡ ನಾಡಿನ ಏಕೀಕರಣಕ್ಕಾಗಿ ದುಡಿದಿರುವವರನ್ನು, ತನು ಮನ ಧನವನ್ನು ತ್ಯಾಗ ಮಾಡಿದವರನ್ನು ನಾವು ಈ ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ನೆನೆಯುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದು ವಿಶ್ರಾಂತ ಇತಿಹಾಸ ಪ್ರಾಧ್ಯಾಪಕರಾದ ಡಾ. ಸಿದ್ದಲಿಂಗಯ್ಯ ತಿಳಿಸಿದರು.

ನಗರದ ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಶನಿವಾರದಂದು ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟನೆಯನ್ನು ಮಾಡಿ ಮಾತನಾಡಿದ ಅವರು, ಕನ್ನಡ ನಾಡು ಸ್ವಾತಂತ್ರ ನಂತರ ಹರಿದು ಹಂಚಿಹೋಗಿದ್ದ ಸಂದರ್ಭದಲ್ಲಿ ಬೇರೆ ಬೇರೆ ರಾಜ್ಯಗಳ ಜೊತೆ ಕನ್ನಡ ನಾಡಿನ ಭೂಪ್ರದೇಶಗಳು ಸೇರಿ ಅನ್ಯ ಭಾಷೆಗಳ ಪ್ರಭಾವದಿಂದ ನಲುಗುತ್ತಿದ್ದಂತಹ ವೇಳೆ ಸಾವಿರಾರು ನಾಡ ಪ್ರೇಮಿಗಳು ಕನ್ನಡ ಭೂಪ್ರದೇಶಗಳ ಏಕೀಕರಣಕ್ಕೆ ದುಡಿದಿದ್ದಾರೆ. ಇಂತಹ ಹೋರಾಟಗಾರರನ್ನು ನಾವು ನೆನೆಪಿಸಿಕೊಳ್ಳಬೇಕು ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕನ್ನಡ ಭಾಷೆಯನ್ನು ಮಾತನಾಡಲು

ನಮ್ಮ ಕನ್ನಡಿಗರು ಕೀಳರಿಮೆಯನ್ನು ಹೊಂದಿದ್ದಾರೆ. ಇದನ್ನು ಮೊದಲು ಹೋಗಲಾಡಿಸಬೇಕು. ಕನ್ನಡ ಅನ್ನ ಕೊಡುವ ಭಾಷೆ. ಈ ಭಾಷೆಯನ್ನು ಪ್ರತಿಯೊಬ್ಬ ಕನ್ನಡಿಗನೂ ಗೌರವಿಸಬೇಕು. ಎಲ್ಲಾ ಭಾಷೆಯನ್ನು ಕಲಿಯಬೇಕು. ಆದರೆ ಮೊದಲ ಆದ್ಯತೆ ಮಾತ್ರ ಕನ್ನಡ ಭಾಷೆಗೆ ಇರಬೇಕ. ಆಗ ಮಾತ್ರ ಕನ್ನಡ ಭಾಷೆ ಉಳಿದು–ಬೆಳೆಯುತ್ತದೆ. ನಾಡು ನುಡಿ ನೆಲ ಜಲಗಳಿಗೆ ಗೌರವಿಸಬೇಕು. ಕನ್ನಡ ಪರಿಸರವನ್ನು ನಿರ್ಮಿಸಬೇಕು ಎಂದು ವಿದ್ಯಾರ್ಥಿಗಳಿಗೆ ಅವರು ಕಿವಿ ಮಾತು ಹೇಳಿದರು.

ಎಸ್‌ಎಸ್‌ಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ. ರವಿಪ್ರಕಾಶ್ ಮಾತನಾಡಿ ಕನ್ನಡವನ್ನು ಕಲಿಸೋಣ ಕನ್ನಡವನ್ನು ಬೆಳೆಸೋಣ. ಕನ್ನಡ ಸಾಹಿತ್ಯವನ್ನು ಓದೋಣ ಕನ್ನಡ ಪರಿಸರವನ್ನ ಬೆಳೆಸೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಕಾಡೆಮಿಕ್ ಡೀನ್ ರೇಣುಕಾಲತಾ, ರಾಜ್ಯೋತ್ಸವ ಆಚರಣಾ ಸಮಿತಿಯ ಸಂಯೋಜಕರಾದ ಡಾ.ಪ್ರದೀಪ್, ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರುಗಳು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿ ಸಂಘಟನೆಯ ಪಧಾದಿಕಾರಿಗಳು ಹಾಜರಿದ್ದರು.

# ಕ್ಷಯರೋಗ ಹರಡದಂತೆ ಅಗತ್ಯ ಮುಂಜಾಗ್ರತಾ ಕ್ರಮಕ್ಕೆ ಸೂಚನೆ




**ಹಾವೇರಿ:** ಜಿಲ್ಲೆಯಲ್ಲಿ ಕ್ಷಯರೋಗ ಹರಡದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಕ್ಷಯ ಪರೀಕ್ಷೆ ಹೆಚ್ಚಿನ ಪ್ರಮಾಣದಲ್ಲಿ ಮಾಡಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸಂಜೆ ಜರುಗಿದ ಜಿಲ್ಲಾ ಮಟ್ಟದ ಕ್ಷಯರೋಗ ವೇದಿಕೆ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರಂಭದ ಹಂತದಲ್ಲೇ ಕ್ಷಯರೋಗ ಗುರಿತಿಸಿ, ಚಿಕಿತ್ಸೆ ನೀಡಿದರೆ ಕ್ಷಯರೋಗ ಗುಣಪಡಿಸಿಬಹುದು. ಈ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಕ್ಷಯ ತಡೆಗೆ ಉತ್ತಮವಾಗಿ ಕಾರ್ಯನಿರ್ವಹಿಸಲಾಗುತ್ತಿದೆ, ಆದಾಗ್ಯೂ ಕ್ಷಯರೋಗಿಗಳು ಇರುವ ಸ್ಥಳಗಳಿಗೆ ಆರೋಗ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ, ಕ್ಷಯರೋಗಿಗಳ ಪರಿಶೀಲನೆ ಮಾಡಬೇಕು. ಧೂಮಪಾನ, ಮದ್ಯಪಾನ ಮಾಡದಂತೆ ತಿಳುವಳಿಕೆ ನೀಡಬೇಕು. ಧೂಮಪಾನ,

ಮದ್ಯಪಾನದಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಮನವರಿಕೆ ಮಾಡಬೇಕು. ಕ್ಷಯ ರೋಗಿಗಳ ಮರಣ ಪ್ರಮಾಣ ಕಡಿಮೆಯಾಗಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಜವಾಬ್ದಾರಿಯಿಂದ ಕೆಲಸಮಾಡಬೇಕು ಎಂದು ಸೂಚಿಸಿದರು.

ಕ್ಷಯರೋಗಿಗಳಿಗೆ ರೂ. ಒಂದು ಸಾವಿರ ಸಹಾಯಧನ ನೀಡುವ ಬದಲಾಗಿ ಪೌಷ್ಠಿಕ ಆಹಾರ ಕಿಟ್ ನೀಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ನಿಲೇಶ್ ಎಂ.ಎನ್. ಅವರು ಮಾತನಾಡಿ, ಮೊದಲಿಗಿಂತ ಈಗ ಕ್ಷಯರೋಗಿಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಕ್ಷಯ ಪರೀಕ್ಷೆ ಹೆಚ್ಚಿನ ಪ್ರಮಾಣದಲ್ಲಿ ಮಾಡಲಾಗುತ್ತಿದೆ. ಧೂಮಪಾನ ಹಾಗೂ ಮದ್ಯಪಾನ ಮತ್ತು ಪೌಷ್ಠಿಕ ಆಹಾರದ ಕೊರತೆಯಿಂದ ಕ್ಷಯರೋಗಿಗಳ ಮರಣ ಕಂಡುಬರುತ್ತಿದೆ.

ಕ್ಷಯರೋಗಿಗಳಿಗೆ ಧೂಮಪಾನ ಹಾಗೂ ಮದ್ಯಪಾನ ಮಾಡದಂತೆ ತಿಳುವಳಿಕೆ ನೀಡಿದರೂ ಸಹ ಮದ್ಯಪಾನ ಹಾಗೂ ಧೂಮಪಾನ ಬಿಡುತ್ತಿಲ್ಲ ಎಂದು ಸಭೆಗೆ ಮಾಹಿತಿ ನೀಡಿದರು.

ಪ್ರಸಕ್ತ 2025ರಲ್ಲಿ ಕ್ಷಯರೋಗ ತಡೆಗೆ ಜಿಲ್ಲೆಯಲ್ಲಿ ಎನ್.ಟಿ.ಇ.ಪಿ(National Tuberculosis elimination Programme) ಉತ್ತಮ ಕಾರ್ಯಚಟುವಟಿಕೆ ಹಿನ್ನಲೆಯಲ್ಲಿ ರಾಜ್ಯದ ರ್‍ಯಾಂಕಿಂಗ್ ಪಟ್ಟಿಯಲ್ಲಿ ಎರಡು ಸ್ಥಾನದಲ್ಲಿ ಬರುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ.ಪುನಿತ್, ಡಾ.ಜಗದೀಶ ಪಾಟೀಲ, ಆಯುಷ್ಯ ಅಧಿಕಾರಿ ಡಾ.ನಿಡಗುಂದಿ, ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಭಾಕರ ಕುಂದೂರ ಸೇರಿದಂತೆ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು ಹಾಗೂ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೌರ ವಿದ್ಯುತ್ ಘಟಕದಿಂದ ಹಣ ಉಳಿತಾಯ

**ಸಾಸ್ವೆಹಳ್ಳಿ:** ಪ್ರಧಾನಮಂತ್ರಿ ಸೂರ್ಯಘರ್ ಯೋಜನೆಯಡಿ ಮನೆಯ ಛಾವಣಿಯ ಮೇಲೆ ಸೌರ ವಿದ್ಯುತ್ ಘಟಕ ಅಳವಡಿಸಲು ಗ್ರಾಹಕರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹೊನ್ನಾಳಿ ಬೆಸ್ಕಾಂ ಎಇಇ ಜಯಪ್ಪ ಹೇಳಿದರು. ಹೋಬಳಿಯಲ್ಲಿ ಇತ್ತೀಚೆಗೆ ಬೆಸ್ಕಾಂ ವತಿಯಿಂದ ಸೂರ್ಯಘರ್ ಯೋಜನೆ ಕರಪತ್ರ ವಿತರಿಸಿ ಮಾತನಾಡಿ, ಮನೆ ಮಾಲೀಕರು ವಿದ್ಯುತ್ ಉತ್ಪಾದಿಸುವ ಮೂಲಕ ಹಣ ಉಳಿತಾಯ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಸೌರ ಘಟಕ ಸ್ಥಾಪನೆಗೆ ಸರ್ಕಾರದ ಸಬ್ಸಿಡಿ ಸಿಗಲಿದೆ ಎಂದರು. ಬೆಸ್ಕಾಂ ಶಾಖಾ ಕಚೇರಿ ಜೆಇಗಳಾದ ಎಲ್. ಕಾಂತರಾಜ್, ಶೇಖರಪ್ಪ, ಮೇಸ್ತ್ರಿಗಳಾದ ಮಲ್ಲೇಶ್, ಉಮೇಶ್, ಚನ್ನಪ್ಪ ಸ್ವಾಮಿ, ನಾಗೇಶ್, ಲೈನ್‌ಮನ್‌ಗಳಾದ ಅಮಿತ್, ಸಂಗಮ್, ನಾಗರಾಜ್ ಇತರರಿದ್ದರು.. ಹೊನ್ನಾಳಿ ಬೆಸ್ಕಾಂ ಎಇಇ ಜಯಪ್ಪ ಹೇಳಿಕೆ

# ಆಭರಣ ಕಳವು ಆರೋಪಿ ಬಂಧನ

**ದಾವಣಗೆರೆ:** ನಗರದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಬಸ್ ಹತ್ತುವಾಗನಡೆದಿದ್ದ ಕಳ್ಳತನ ಪ್ರಕರಣ ಸಂಬಂಧ ಮೂವರು ಆರೋಪಿಗಳನ್ನು ಬಂಧಿಸಿರುವ ಕೆಟಿಜೆ ನಗರ ಠಾಣೆಯ ಪೊಲೀಸರು, ಚಿನ್ನದ ಆಭರಣ ಸೇರಿದಂತೆ 12 ಲಕ್ಷ ರೂ. ಮೌಲ್ಯದ ಸ್ವತ್ತನ್ನು ವಶಪಡಿಸಿಕೊಂಡಿದ್ದಾರೆ. ಕೋಲಾರ ಜಿಲ್ಲೆ ಬಂಗಾರಪೇಟೆಯ ಸೆಲ್ವಿ, ಪ್ರೀತಿ ಮತ್ತು ತಮಿಳುನಾಡಿನ ಜೋಲಾರಪೇಟೆ ಜಿಲ್ಲೆಯ ಜಯ ಮಾಧನಗರದ ವಲ್ಲಿ ಬಂಧಿತರು. ಆ. 7 ರಂದು ಕೊಟ್ರಯ್ಯ ಕೆ.ಎಂ. ಹರಪನಹಳ್ಳಿ ಅವರು ಪತ್ನಿಯೊಂದಿಗೆ ಬೆಂಗಳೂರಿಗೆ ಹೋಗಲು ದಾವಣಗೆರೆ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಬಸ್ ಹತ್ತುತ್ತಿದ್ದಾಗ ಕಳ್ಳತನ ನಡೆದಿತ್ತು. ಆರೋಪಿಗಳು ಬ್ಯಾಗಿನ ಜಿಪ್ ತೆಗೆದು 102 ಗ್ರಾಂ ಬಂಗಾರದ ಆಭರಣಗಳನ್ನು ಮತ್ತು 75 ಸಾವಿರ ರೂ. ನಗದು ಹಣವಿದ್ದ ಚಿಕ್ಕ ಹ್ಯಾಂಡ್ ಬ್ಯಾಗನ್ನು ಕಳವು ಮಾಡಲಾಗಿತ್ತು. ಕೆ.ಟಿ.ಜೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕಾರ್ಯಾಚರಣೆ ನಡೆಸಿದ ತಂಡದಲ್ಲಿ ಪಿ.ಎಸ್.ಐ ಲತಾ.ಆರ್. ಹಾಗೂ ಸಿಬ್ಬಂದಿ ಸುರೇಶ್ ಬಾಬು, ಮಹಮದ್ ರಫಿ, ಸತೀಶ್, ಸಿದ್ದಪ್ಪ, ಮಂಜಪ್ಪ, ನಾಗರಾಜ, ಡಿ.ಬಿ. ಗಿರೀಶ್ ಗೌಡ ಇತರರು ಇದ್ದರು.

## ಹರಿಹರಕ್ಕೆ ಸಿಗದ ಅನುದಾನ'

**ದಾವಣಗೆರೆ:** 'ಪಂಚಗ್ಯಾರಂಟಿ ಹೊರತುಪಡಿಸಿ ಅಭಿವೃದ್ಧಿ ಕಾಮಗಾರಿಗಳಿಗೆ ರಾಜ್ಯ ಸರ್ಕಾರ ಅನುದಾನ ನೀಡುತ್ತಿಲ್ಲ. ಹರಿಹರ ಕ್ಷೇತ್ರಕ್ಕೆ ಎಷ್ಟು ಅನುದಾನ ಒದಗಿಸಿದೆ ಎಂಬುದನ್ನು ಕಾಂಗ್ರೆಸ್ ಬಹಿರಂಗಪಡಿಸಲಿ' ಎಂದು ಹರಿಹರ ತಾಲ್ಲೂಕು ಬಿಜೆಪಿ ಯುವಮೋರ್ಚಾಸವಾಲು ಹಾಕಿದೆ.

'ಹರಿಹರ ಕ್ಷೇತ್ರದ ಅಭಿವೃದ್ಧಿಗೆ ಶಾಸಕ ಬಿ.ಪಿ. ಹರೀಶ್ ಶ್ರಮಿಸುತ್ತಿದ್ದಾ–ರೆ. ಸದನದಲ್ಲಿ ಪ್ರಶ್ನೆಗಳನ್ನು ಕೇಳಿದ್ದರಿಂದ ಕಾಂಗ್ರೆಸ್ ಸೇಡಿನ ರಾಜಕಾರಣ ಮಾಡುತ್ತಿದೆ. ಹರಿಹರಕ್ಕೆ ಯಾವ ಕೊಡುಗೆ ನೀಡಿದೆ ಎಂಬುದನ್ನು ರಾಜ್ಯ ಸರ್ಕಾರ ಜನರ ಮುಂದಿಡಲಿ' ಎಂದು ಯುವಮೋರ್ಚಾ ಉಪಾಧ್ಯಕ್ಷ ಆಕಾಶ್ ಬಣಕಾರ್ ಆಗ್ರಹಿಸಿದರು.

ಅಧ್ಯಕ್ಷ ರವಿ ರಾಯ್ಕರ್, ಎಸ್‌ಟಿ ಮೋರ್ಚಾ ಅಧ್ಯಕ್ಷ ರವಿ ತಾವರಗಿ, ಮುಖಂಡರಾದ ಅಣ್ಣಪ್ಪ ನಾಗೇನಹಳ್ಳಿ, ಕೆ.ಎನ್. ಪುನೀತ್ ಬೆಳ್ಳೂಡಿ ಹಾಜರಿದ್ದರು.

# ಡಿ.12 ರಂದು ಜಿಲ್ಲಾ ಯೋಜನಾ ಸಮಿತಿಗೆ ಚುನಾವಣೆ

**ಚಿಕ್ಕಮಗಳೂರು:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1996 (ಜಿಲ್ಲಾ ಯೋಜನಾ ಸಮಿತಿಯ ಚುನಾವಣೆ) ನಿಯಮಗಳು 1996ರ ನಿಯಮ 8ರ ಪ್ರಕಾರ ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಮತ ಕ್ಷೇತ್ರದಿಂದ ಚಿಕ್ಕಮಗಳೂರು ಜಿಲ್ಲಾ ಯೋಜನಾ ಸಮಿತಿಗೆ ಡಿಸೆಂಬರ್ 12 ರಂದು ಚುನಾವಣೆಯನ್ನು ನಡೆಸಬೇಕಾಗಿದ್ದು, ಪದನಿಮಿತ್ತ ಚುನಾವಣಾಧಿಕಾರಿಗಳಾದ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್.ಎಸ್.ಕೀರ್ತನಾ ಅವರು ತಮಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದ್ದಾರೆ.

ನಗರ ಸ್ಥಳೀಯ ಸಂಸ್ಥೆಗಳಾದ ಚಿಕ್ಕಮಗಳೂರು ನಗರಸಭೆ, ತರೀಕೆರೆ ಪುರಸಭೆ ಮತ್ತು ಅಜ್ಜಂಪುರ ಪಟ್ಟಣ ಪಂಚಾಯಿತಿಗಳಿಂದ 6 ಮಂದಿ ಸದಸ್ಯರನ್ನು ಚುನಾಯಿಸಬೇಕಾಗಿದೆ. ನವೆಂಬರ್ 18 ರಿಂದ 27ರವರೆಗೆ ನಾಮ ನಿರ್ದೇಶನಗಳನ್ನು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ನವೆಂಬರ್ 28 ರಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಡಿಸೆಂಬರ್ 1 ರಂದು ಸಂಜೆ 5 ಗಂಟೆಯವರೆಗೆ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ. ಡಿಸೆಂಬರ್ 5 ರಂದು ಜಿ.ಪಂ. ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಚುನಾವಣೆ ನಡೆಯಲಿದ್ದು, ಅಂದೇ ಈ ಸಭಾಂಗಣದಲ್ಲಿ ಮತಗಳ ಎಣಿಕೆ ಕಾರ್ಯ ನಡೆಯಲಿದೆ. ನಗರ ಸ್ಥಳೀಯ ಕ್ಷೇತ್ರದ ಒಟ್ಟು 69 ಮತದಾರರಿಂದ ಮತದಾನ ನಡೆಯಲಿದೆ ಎಂದು ಜಿಲ್ಲಾ ಯೋಜನಾ ಸಮಿತಿ ಚುನಾವಣಾಧಿಕಾರಿಗಳೂ ಆದ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಜಿಂಕೆಗಳ ಸಾವು ತನಿಖೆಗೆ ಸಚಿವರ ಆದೇಶ

**ಬೆಂಗಳೂರು:** ಬೆಳಗಾವಿ ಭೂತರಾಮನಹಟ್ಟಿಯ



ಕಿತ್ತೂರುರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿ 19 ಜಿಂಕೆಗಳು ಅಸಹಜವಾಗಿ ಮೃತಪಟ್ಟಿರುವ ಬಗ್ಗೆ ತೀವ್ರ ವ್ಯಾಕುಲ ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತನಿಖೆಗೆ ಆದೇಶ ನೀಡಿದ್ದಾರೆ.

ಪ್ರಾಥಮಿಕ ವರದಿಗಳ ರೀತ್ಯ ಈ ಜಿಂಕೆಗಳು ಸಾಂಕ್ರಾಮಿಕ ಕಾಯಿಲೆಯಿಂದ ಮೃತಪಟ್ಟಿರುವುದಾಗಿ ವರದಿಯಾಗಿದ್ದು, ಮೃಗಾಲಯದ ಬೇರೆ ಯಾವುದೇ ಪ್ರಾಣಿಗೆ ಸೋಂಕು ತಗುಲದಂತೆ ಎಲ್ಲ ಮುಂಜಾಗರೂಕತಾ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಈ ಜಿಂಕೆಗಳು ಕಲುಷಿತ ನೀರು, ಆಹಾರ ಸೇವಿಸಿ ಕಾಯಿಲೆಗೆ ತುತ್ತಾಗಿ ಮೃತಪಟ್ಟಿವೆಯೇ ಅಥವಾ ಬೆಕ್ಕು ಇತ್ಯಾದಿ ಸಾಕು ಪ್ರಾಣಿಗಳಿಂದ ಈ ಕಾಯಿಲೆ ಹರಡಿದೆಯೇ ಎಂಬ ಬಗ್ಗೆ ಒಂದು ತಜ್ಞರ ಸಮಿತಿ ರಚಿಸಿ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದ್ದಾರೆ. ಮೃಗಾಲಯದಲ್ಲಿರುವ ಪ್ರಾಣಿಗಳು ಈ ರೀತಿ ಸಾವಿಗೀಡಾಗುವುದು ಆತಂಕದ ವಿಚಾರವಾಗಿದ್ದು, ಇನ್ನು ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಮತ್ತು ಸಿಬ್ಬಂದಿಯ ನಿರ್ಲಕ್ಷ್ಯವಿದ್ದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆಯೂ ಈಶ್ವರ ಖಂಡ್ರೆ ಆದೇಶ ನೀಡಿದ್ದಾರೆ.

## ಬಿಹಾರ ನೂತನ ಸರಕಾರ ರಚನೆಗೆ ಮಾತುಕತೆ

### ನಿತೀಶ್‌ಕುಮಾರ್‌ರವರೇ ಮುಂದಿನ ಮುಖ್ಯಮಂತ್ರಿಯಾಗುವ ಸಾಧ್ಯತೆ

**ಪಟನಾ:** ಭರ್ಜರಿ ಬಹುಮತದೊಂದಿಗೆ ಅಧಿಕಾರಕ್ಕೆ ಮರಳಿರುವ ಆಡಳಿತಾರೂಢ ಎನ್‌ಡಿಎ ಕೂಟ ಬಿಹಾರದಲ್ಲಿ ನೂತನ ಸರಕಾರ ರಚನೆಗೆ ಮಾತುಕತೆ ಆರಂಭಿಸಿದೆ. ಹೊಸ ಸರಕಾರ ರಚನೆಗೆ ಅನುವು ಮಾಡಿಕೊಡಲು ಮುಖ್ಯಮಂತ್ರಿ ನಿತೀಶ್ ಕುಮಾರ್ ಸೋಮವಾರ ರಾಜೀನಾಮೆ ನೀಡಲಿದ್ದಾರೆ ಎಂದು ಹಿರಿಯ ಜೆಡಿಯು ಮುಖಂಡರೊಬ್ಬರು ಹೇಳಿದ್ದಾರೆ. ಈ ಮಧ್ಯೆ ಇದೇ ನ.19 ಅಥವಾ 20 ರಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂಬ ಗುಸುಗುಸು ಎದ್ದಿದೆ.

ಪ್ರಧಾನಿ ನರೇಂದ್ರ ಮೋದಿಯವರ ಅಂತಿಮ ವೇಳಾಪಟ್ಟಿಯನ್ನು ಅವಲಂಬಿಸಿ



ನವೆಂಬರ್ 19 ಅಥವಾ 20 ರಂದು ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯುವ ನಿರೀಕ್ಷೆಯಿದೆ. ಪಾಟ್ನಾದ ಗಾಂಧಿ ಮೈದಾನದಲ್ಲಿ ಈಗಾಗಲೇ ಸಿದ್ಧತೆಗಳು ಭರದಿಂದ ಸಾಗಿದ್ದು, ಪ್ರಧಾನಿ ಮೋದಿ ಮತ್ತು ಬಿಜೆಪಿ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುವ ಸಾಧ್ಯತೆಯಿದೆ. ಹಾಲಿ ಸಿಎಂ ಆಗಿರುವ ನಿತೀಶ್ ಕುಮಾರ್ ಅವರೇ ಮುಂದಿನ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ. ಇದು ಸಾಧ್ಯವಾದರೆ 10ನೇ ಬಾರಿ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಇತಿಹಾಸವನ್ನು ನಿತೀಶ್ ಬರೆಯಲಿದ್ದಾರೆ. ಚುನಾವಣೆಗೂ ಮೊದಲು ತಮ್ಮ ಸಿಎಂ ಅಭ್ಯರ್ಥಿಯನ್ನು ಎನ್‌ಡಿಎ ಮೈತ್ರಿಕೂಟ ಘೋಷಿಸಿರಲಿಲ್ಲ. ಈಗ ಬಿಜೆಪಿ 89 ಮತ್ತು ಜೆಡಿಯು 85 ಸ್ಥಾನಗಳನ್ನು ಗೆದ್ದಿರುವುದರಿಂದ ಸಿಎಂ ಗಾದಿ ಯಾರ ಪಾಲಾಗಲಿದೆ ಎಂಬ ಕುತೂಹಲವೂ ಇದೆ. 89 ಸ್ಥಾನಗಳನ್ನು ಗೆಲ್ಲುವುದರೊಂದಿಗೆ ಬಿಜೆಪಿ ಬಿಹಾರದ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. 2020ರಲ್ಲಿ ಕೇವಲ 1 ಸ್ಥಾನದಿಂದ ಅತಿದೊಡ್ಡ ಪಕ್ಷ ಸ್ಥಾನವನ್ನು ಆರ್‌ಜೆಡಿ ಎದುರು ಕಳೆದುಕೊಂಡಿತ್ತು.

2020ರ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ 125 ಸ್ಥಾನ ಗೆದ್ದಿತ್ತು. ಆರ್‌ಜೆಡಿ–ಕಾಂಗ್ರೆಸ್ ಮಹಾಮೈತ್ರಿಕೂಟ 110 ಸ್ಥಾನದಲ್ಲಿ ಜಯಭೇರಿ ಸಾಧಿಸಿತ್ತು. ಆ ಚುನಾವಣೆಯಲ್ಲಿ ಎನ್‌ಡಿಎ ಮತಗಳಿಕೆ ಶೇ.37.26ರಷ್ಟಿದ್ದರೆ, ಮಹಾಮೈತ್ರಿಕೂಟ ಮತಗಳಿಕೆ ಶೇ.36.58ರಷ್ಟಿತ್ತು. ಅಂದರೆ ಎರಡೂ ಮೈತ್ರಿಕೂಟಗಳ ನಡುವಿನ ಮತಗಳಿಕೆ ಅಂತರ ಕೇವಲ ಶೇ.0.03 ಆಗಿತ್ತು.

## ಬಿಲ್ಲಿ ಮಾರ್ಕುಂಡಿ ಗಣಿಯಲ್ಲಿ ಕಲ್ಲು ಕ್ವಾರಿ ಕುಸಿತ;ಓರ್ವ ಸಾವು



**ಸೋನ್‌ಭದ್ರ:** ಸೋನ್‌ಭದ್ರದ ಓಬ್ರಾ ಪ್ರದೇಶದ ಬಿಲ್ಲಿ–ಮಾರ್ಕುಂಡಿ ಗಣಿಯಲ್ಲಿ ಗಣಿಗಾರಿಕೆಯ ಸಮಯದಲ್ಲಿ ಕಲ್ಲು ಕ್ವಾರಿಯ ಒಂದು ಭಾಗ ಕುಸಿತ ಕುಸಿದು ಭೀಕರ ಅವಘಡ ಸಂಭವಿಸಿದೆ. ಹಲವಾರು ಕಾರ್ಮಿಕರು ಸಿಲುಕಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಇಲ್ಲಿಯವರೆಗೆ ಒಬ್ಬರ ಮೃತದೇಹ ಪತ್ತೆಯಾಗಿದ್ದು, ಉಳಿದ ಕಾರ್ಮಿಕರನ್ನು ರಕ್ಷಿಸಲು ಎಲ್ಲಾ ಪ್ರಯತ್ನಗಳು ನಡೆಯುತ್ತಿವೆ. ರಕ್ಷಣಾ ಕಾರ್ಯಾಚರಣೆಗಳು ನಡೆಯುತ್ತಿವೆ.

ಗಾಯಾಳುಗಳನ್ನು ರಕ್ಷಿಸಲು ಮತ್ತು ರಕ್ಷಿಸಲು ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳು ಅವಿಶ್ರಾಂತವಾಗಿ ಕೆಲಸ ಮಾಡುತ್ತಿವೆ. 'ಕೃಷ್ಣ ಮೈನ್ಸ್' ಎಂದು ಕರೆಯಲ್ಪಡುವ ಕಲ್ಲು ಕ್ವಾರಿಯ ದೊಡ್ಡ ಭಾಗವು ಇದ್ದಕ್ಕಿದ್ದಂತೆ ಕುಸಿದು ಬಿದ್ದಾಗ ಈ ಅಪಘಾತ ಸಂಭವಿಸಿದೆ.

ಮುಖ್ಯಮಂತ್ರಿಗಳ ಕಾರ್ಯಕ್ರಮದ ಕಾರಣದಿಂದಾಗಿ ಜಿಲ್ಲೆಯಲ್ಲಿ ಗಣಿಗಾರಿಕೆ ಚಟುವಟಿಕೆಗಳನ್ನು ನಿಷೇಧಿಸಲಾಗಿತ್ತು, ಆದರೆ ಇದರ ಹೊರತಾಗಿಯೂ, ಕ್ವಾರಿಯಲ್ಲಿ ಅಕ್ರಮ ಕೆಲಸ ಮುಂದುವರೆದಿದೆ. ಒಂದು ದೊಡ್ಡ ಬಂಡೆ ಒಡೆದು ಕಾರ್ಮಿಕರ ಮೇಲೆ ಬಿದ್ದಿದೆ ಇದರಿಂದಾಗಿ ಇಡೀ ಪ್ರದೇಶದಲ್ಲಿ ಕುಸಿತ ಉಂಟಾಗಲು ಕಾರಣವಾಯಿತು, ಇದರಿಂದಾಗಿ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಯಿತು.ಪ್ರಾಥಮಿಕ ಮಾಹಿತಿಯ ಪ್ರಕಾರ, ಸುಮಾರು 15 ಕಾರ್ಮಿಕರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ರಕ್ಷಣಾ ತಂಡಗಳು ಇಲ್ಲಿಯವರೆಗೆ ಒಬ್ಬ ಕಾರ್ಮಿಕನ ಶವವನ್ನು ಹೊರತೆಗೆದಿದ್ದು, ಇತರರಿಗಾಗಿ ಹುಡುಕಾಟ ಮುಂದುವರೆದಿದೆ. ಗಾಯಗೊಂಡವರು ಮತ್ತು ಸಿಕ್ಕಿಬಿದ್ದ ಕಾರ್ಮಿಕರ ನಿಖರ ಸಂಖ್ಯೆ ಇನ್ನೂ ಸ್ಪಷ್ಟವಾಗಿಲ್ಲ, ಏಕೆಂದರೆ ಅನೇಕರು ಆಳವಾದ ಅವಶೇಷಗಳ ಅಡಿಯಲ್ಲಿ ಹೂತುಹೋಗಿರುವ ಸಾಧ್ಯತೆಯಿದೆ. ಘಟನೆಯ ನಂತರ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯ ಜನರು ಜಮಾಯಿಸಿದ್ದು, ರಕ್ಷಣಾ ತಂಡಗಳಿಗೆ ಆರಂಭಿಕ ತೊಂದರೆಗಳನ್ನುಂಟು ಮಾಡಿದೆ.ಸ್ಥಳೀಯ ಶಾಸಕರೂ ಆಗಿರುವ ಉತ್ತರ ಪ್ರದೇಶದ ಸಮಾಜ ಕಲ್ಯಾಣ ರಾಜ್ಯ ಸಚಿವ ಗೊಂಡ್, ಜಿಲ್ಲಾ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದರು.

## ನೌಗಾಂ ಪೊಲೀಸ್ ಠಾಣೆಯಲ್ಲಿ ಸ್ಫೋಟ: 9 ಬಲಿ

**ಶ್ರೀನಗರ:** ಶ್ರೀನಗರದ ನೌಗಾಂ ಪೊಲೀಸ್ ಠಾಣೆಯಲ್ಲಿ ತಡ ರಾತ್ರಿ ಸಂಭವಿಸಿದ ಭೀಕರ ಸ್ಫೋಟದಲ್ಲಿ 9 ಜನ ಸಾವನ್ನಪ್ಪಿದ್ದು 25 ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ.

ರಾತ್ರಿ ಸುಮಾರು 11:20 ರ ಸಮಯದಲ್ಲಿ, ಪೊಲೀಸ್ ಠಾಣೆಯಲ್ಲಿ ಜೆಎಂ ಉಗ್ರಗಾಮಿ ಗುಂಪಿನಿಂದ ಜಪ್ತಿ ಮಾಡಿದ್ದ ಸ್ಫೋಟಕ ವಸ್ತುಗಳ ಮಾದರಿ ಪರೀಕ್ಷೆ ನಡೆಯುತ್ತಿತ್ತು. ಫೋರೆನ್ಸಿಕ್ ಸೈನ್ಸ್ ಲ್ಯಾಬರೇಟರಿ (ಎಫ್‌ಎಸ್‌ಎಲ್), ಪೊಲೀಸ್ ಮತ್ತು ತಹಸೀಲ್ದಾರರ ತಂಡ ಸ್ಫೋಟಕಗಳ ಪರೀ–ಕ್ಷೆ ಮಾಡುತ್ತಿದ್ದ ಸಮಯದಲ್ಲಿ ಈ ಭಯಾನಕ ಸ್ಫೋಟ ಸಂಭವಿಸಿದೆ. ಪ್ರಬಲ ಸ್ಫೋಟಕ್ಕೆ ಪೊಲೀಸ್ ಠಾಣೆಯ ಕಟ್ಟಡಕ್ಕೆ ತೀವ್ರ ಹಾನಿಯಾಗಿದೆ.

ಈ ಸ್ಫೋಟಕ ವಸ್ತುಗಳನ್ನು (ಮುಖ್ಯವಾಗಿ ಅಮೋನಿಯಂ ನೈಟ್ರೇಟ್ ಆಧಾರಿತ) ಹರಿಯಾಣದ ಫರೀದಾಬಾದ್‌ನಲ್ಲಿ ಬಂಧಿಸಲಾದ ವೈದ್ಯರು ಮುಜಮ್ಮಿಲ್ ಗನ್ನೈಯೆ ಅವರ ಬಾಡಿಗೆ ಮನೆಯಿಂದ ಜಪ್ತಿ ಮಾಡಲಾಗಿತ್ತು.



ಅವರಿಂದ ಜಪ್ತಿ ಮಾಡಲಾದ 360 ಕೆಜಿ ಸ್ಫೋಟಕ ವಸ್ತುಗಳಲ್ಲಿ ಬಹುಭಾಗವನ್ನು ತನಿಖೆಯ ಭಾಗವಾಗಿ ನೌಗಾಂ ಪೊಲೀಸ್ ಠಾಣೆಯಲ್ಲಿ ಸಂಗ್ರಹಿಸಿಡಲಾಗಿತ್ತು.

ಗಾಯಗೊಂಡ ಪೊಲೀಸ್ ಸಿಬ್ಬಂದಿಗಳನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಫೋಟದ ನಂತರ ಸಣ್ಣ ಸ್ಫೋಟಗಳ ಸರಣಿಯೂ ನಡೆದಿದ್ದರಿಂದ ಬಾಂಬ್ ನಿವಾರಣಾ ತಂಡಗಳ ರಕ್ಷಣಾ ಕಾರ್ಯಾಚರಣೆ ತಡವಾಗಿದೆ.

ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಈ ಪ್ರಕರಣದ ತನಿಖೆ ಕೈಗೆತ್ತಿಕೊಂಡಿ–ದ್ದಾರೆ. ಗೃಹ ಮಂತ್ರಿ ಅಮಿತ್ ಶಾ ಅವರು ಎನ್‌ಐಎ, ಎನ್‌ಎಸ್ಜಿ ಮತ್ತು ಫೋರೆನ್ಸಿಕ್ ತಂಡಗಳನ್ನು ತಕ್ಷಣ ಸ್ಥಳಕ್ಕೆ ತೆರಳುವಂತೆ ನಿರ್ದೇಶನ ನೀಡಿದ್ದಾರೆ.

ಜಮ್ಮು–ಕಾಶ್ಮೀರ ಪೊಲೀಸ್ ಅಧಿಕಾರಿಗಳು ಇದೊಂದು ಅಕಸ್ಮಾತ್ ಸ್ಫೋಟವೇ ಹೊರತು ಉಗ್ರರ ದಾಳಿಯಲ್ಲವೆಂದು ಸ್ಪಷ್ಟಪಡಿಸಿದ್ದಾರೆ. ಉಗ್ರರ ವಿರುದ್ಧದ ಕಾರ್ಯಾಚರಣೆಯಲ್ಲಿ ಜಪ್ತಿ ಮಾಡಲಾದ ಸ್ಫೋಟಕಗಳನ್ನು ಪರೀಕ್ಷಿಸುವ ಸಮಯದಲ್ಲೇ ಈ ಅಪಘಾತ ಸಂಭವಿಸಿದೆ.

ಅಕ್ಟೋಬರ್ ಮಧ್ಯಭಾಗದಲ್ಲಿ ನೌಗಾಂನಲ್ಲಿ ಜೆಎಂ ಉಗ್ರರ ಪ್ರಚಾರ ಪೋಸ್ಟರ್‌ಗಳು ಕಂಡುಬಂದಿದ್ದವು. ಇದರ ತನಿಖೆ ನಡೆಸಿದ ಪೊಲೀಸ್ ಒಂದು ಉಗ್ರ ಮಾಡ್ಯೂಲ್ ಬಳಿ ಬಂದಿದ್ದರು. ಸಿಸಿಟಿವಿ ತನಿಖೆಯ ಮೂಲಕ ಮೂವರನ್ನು ಬಂಧಿಸಲಾಗಿತ್ತು. ಅವರ ವಿಚಾರಣೆಯಿಂದ ವೈದ್ಯರು ಮತ್ತು ಮೌಲ್ವಿಗಳನ್ನು ಒಳಗೊಂಡ ಒಂದು ಶಿಕ್ಷಿತ ಉಗ್ರ ಜಾಲ ಬಹಿರಂಗಗೊಂಡಿತು. ದೆಹಲಿಯ ಲಾಲ್ ಕಿಲ್ಲಾ ಸ್ಫೋಟದ ಸಂಬಂಧ ತನಿಖೆ ಮುಂದುವರೆದಿರುವುದಾಗಿ ತಿಳಿದುಬಂದಿದೆ.

ಉಗ್ರರ ವಿರುದ್ಧದ ಕಾರ್ಯಾಚರಣೆಯಲ್ಲಿ ಭಾಗವಹಿಸುವ ಸುರಕ್ಷತಾ ಕಾರ್ಯನಿರ್ವಾಹಕರು ಎದುರಿಸುವ ಅಪಾಯಗಳನ್ನು ಈ ದುರಂತ ಘಟನೆ ಮತ್ತೆ ನೆನಪಿಸಿದೆ.

## ಬಂಟ್ವಾಳದಲ್ಲಿ ಅಪಘಾತ, ಉಡುಪಿ ಶ್ರೀಕೃಷ್ಣ ಮಠಕ್ಕೆ ಹೊರಟಿದ್ದ ಮೂವರು ಸಾವು

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಬಿಸಿ ರೋಡಿನ ಸರ್ಕಲ್‌ನಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಮೂವರು ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಗಾಯಗೊಂಡ ನಾಲ್ವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಕುರಿತು ಬಂಟ್ವಾಳ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತರು, ಉಡುಪಿ ಶ್ರೀಕೃಷ್ಣ ಮಠಕ್ಕೆ ದೇವರ ದರ್ಶನಕ್ಕಾಗಿ ಆಗಮಿಸುತ್ತಿದ್ದರು ಎಂದು ತಿಳಿದುಬಂದಿದೆ.

ಬಿಸಿ ರೋಡಿನ ಸರ್ಕಲ್‌ನಲ್ಲಿ ಇನ್ನೋವಾ ಕಾರು ಬಂದು ಎನ್.ಜಿ ಸರ್ಕಲ್‌ಗೆ ಗುದ್ದಿದ ರಭಸಕ್ಕೆ ಕಾರು ಸಂಪೂರ್ಣವಾಗಿ ಜಖಂಗೊಂಡಿದೆ. ಕಾರಿನಲ್ಲಿದ್ದ ರಮ್ಯ (23), ರವಿ (64), ನಂಜಮ್ಮ (75) ಮೃತ ದುರ್ದೈವಿಗಳು. ಮೃತರು ಬೆಂಗಳೂರಿನ ಪೀಣ್ಯದವರಾಗಿದ್ದು, ಉಡುಪಿ ಶ್ರೀಕೃಷ್ಣ ಮಠಕ್ಕೆ ಕೃಷ್ಣನ ದರ್ಶನಕ್ಕೆಂದು ಹೊರಟಿದ್ದರು. ಕಾರಿನಲ್ಲಿ ಇದ್ದ ಪ್ರಯಾಣಿಕರಲ್ಲಿ ರವಿ ಸ್ಥಳದಲ್ಲೇ ಸಾವನ್ನಪ್ಪಿದ್ದರೆ, ಮತ್ತಿಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಘಟನೆಯಲ್ಲಿ ಕೀರ್ತಿ, ಸುಶೀಲಾ, ಬಿಂದು ಹಾಗೂ ಪ್ರಶಾಂತ್ ಎಂಬ ನಾಲ್ವರು ತೀವ್ರವಾಗಿ ಗಾಯಗೊಂಡಿದ್ದು, ಮಂಗಳೂರು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಿಸಿ ರೋಡು ಅಡ್ಡಹೊಳೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವೇಳೆ ನಿರ್ಮಾಣವಾದ ನೂತನ ಸರ್ಕಲ್ ಅವೈಜ್ಞಾನಿಕವಾಗಿರುವುದರಿಂದಲೇ ಈ ಅಪಘಾತ ಸಂಭವಿಸಿದೆ ಎಂಬ ಆರೋಪ ಕೇಳಿ ಬಂದಿದೆ. ಬಂಟ್ವಾಳ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಮೃತ್ ಯೋಜನೆ ಕಾಮಗಾರಿ ಶೀಘ್ರವೇ ಪೂರ್ಣ : ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ನಗರ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ 2012ರಲ್ಲಿ ಆರಂಭಗೊಂಡಿದ್ದು 13 ವರ್ಷವಾದರೂ ಪೂರ್ಣಗೊಂಡಿಲ್ಲ. ಹಾಗೆಯೇ ಅಮೃತ್ ಯೋಜನೆಯ ಕಾಮಗಾರಿಗಳು 2015ರಲ್ಲಿ ಆರಂಭಗೊಂಡಿದ್ದು 10 ವರ್ಷವಾದರೂ ಮುಕ್ತಾಯಗೊಂಡಿಲ್ಲ. ಶೀಘ್ರವೇ ಈ ಎರಡು ಕಾಮಗಾರಿಗಳನ್ನು ಪೂರ್ಣಗೊಳಿಸುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ಭರವಸೆ ನೀಡಿದರು.

ನಗರದ ಗಾಂಧಿನಗರ ಆಟೋ ನಿಲ್ದಾಣದ ಬಳಿ ನಗರದ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ನೆರವೇರಿಸಿ ಮಾತನಾಡಿದ ಅವರು, ಈ ಎರಡು ಕಾಮಗಾರಿಗಳನ್ನು ಆರಂಭಿಸಿದವರು ಯಾರು? ಯಾವ ಕಾರಣಕ್ಕೆ ಇದುವರೆಗೂ ಕಾಮಗಾರಿಗಳು ಮುಗಿದಿಲ್ಲ ಎಂಬ ಬಗ್ಗೆ ನಾನು ಮಾತನಾಡುವುದಿಲ್ಲ. ಬೇರೆಯವರನ್ನು ದೂರುವ ಬದಲು ಕಾಮಗಾರಿ ಮುಗಿಸಲು ಕ್ರಮ ಕೈಗೊಳ್ಳುತ್ತೇನೆ ಎಂದರು.

ಯುಜಿಡಿ ಕಾಮಗಾರಿ ಹಾಗೂ ಅಮೃತ್ ಯೋಜನೆಯ ಕಾಮಗಾರಿಗಳು




ನಡೆಯುತ್ತಿರುವ ಕಾರಣದಿಂದಾಗಿ ನಗರ ವ್ಯಾಪ್ತಿಯ ರಸ್ತೆಗಳು ಹಾಳಾಗಿದ್ದವು. ವಿವಿಧ ಈ ಎರಡು ಯೋಜನೆಗಳ ಕಾಮಗಾರಿಗಳು ಮುಕ್ತಾಯಗೊಳ್ಳುವ ಹಂತಕ್ಕೆ ಬಂದಿವೆ. ಹೀಗಾಗಿ ಶೀಘ್ರವೇ ರಸ್ತೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ನಗರದ ಪ್ರತಿಯೊಂದು ರಸ್ತೆಯನ್ನು ಅಭಿವೃದ್ಧಿಗೊಳಿಸುವ ಸಂಬಂಧ ಕ್ರಮ ಕೈಗೊಳ್ಳಲಾಗಿದೆ. ನಗರದ ರಸ್ತೆಗಳ ಅಭಿವೃದ್ಧಿಗಾಗಿ ಸಿಎಂ 10 ಕೋಟಿ ರೂ. ವಿಶೇಷ ಅನುದಾನ ನೀಡಿದ್ದಾರೆ. ಇದಲ್ಲದೆ ವಿಧಾನಸಭಾ ಕ್ಷೇತ್ರಕ್ಕೆ ನೀಡ ಸರ್ಕಾರದ ವಿಶೇಷ ಅನುದಾನದಡಿಯಲ್ಲಿ ನೀಡಲಾಗಿದ್ದ 50 ಕೋಟಿ ರೂ. ಅನುದಾನದಲ್ಲಿ 10 ಕೋಟಿ ರೂ. ನಗರದ ರಸ್ತೆಗಳ ಅಭಿವೃದ್ಧಿಗೆ ಬಳಸಿಕೊಳ್ಳಲಾಗುತ್ತದೆ. ಜೊತೆಗೆ ಲೋಕೋಪಯೋಗಿ ಇಲಾಖೆಯಿಂದ 2.50 ಕೋಟಿ ರೂ. ಬಿಡುಗಡೆಯಾಗಿದ್ದು, ಈ ಅನುದಾನಗಳಲ್ಲಿ ರಸ್ತೆಗಳ ಅಭಿವೃದ್ಧಿ ಕಾರ್ಯ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

ನವೆಂಬರ್ ತಿಂಗಳ ಅಂತ್ಯದೊಳಗಾಗಿ ನಗರದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸುತ್ತೇವೆ. ಡಿ. 1ರಿಂದಲೇ ಕಾಮಗಾರಿ ಆರಂಭಿಸುತ್ತೇವೆ. ಮುಂದಿನ ಮಾರ್ಚ್ ತಿಂಗಳು ಮುಗಿಯುವುದರ ಒಳಗಾಗಿ ಎಲ್ಲಾ ರಸ್ತೆಗಳ ಅಭಿವೃದ್ಧಿ ಕಾಮಗಾರಿ ಪೂರ್ಣಗೊಳಿಸಿ ಪ್ರತಿಯೊಂದು ರಸ್ತೆ ಉದ್ಘಾಟನೆ ಕಾರ್ಯ ನೆರವೇರಿಸುತ್ತೇವೆ ಎಂದರು.

ನಗರ ಸಭೆ ವ್ಯಾಪ್ತಿಯ ಟಿಪ್ಪು ನಗರ ಬಡಾವಣೆ ವ್ಯಾಪ್ತಿಯಲ್ಲಿ ಸುಮಾರು 70 ಲಕ್ಷ ರೂ. ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ. ಇದಲ್ಲದೆ ನಗರದ ಪ್ರತಿಯೊಂದು ಬಡಾವಣೆಯಲ್ಲಿಯೂ ಅಭಿವೃದ್ಧಿ ಕಾರ್ಯ ಕೈಗೊಳ್ಳುತ್ತೇವೆ ಎಂದರು.

ಹಿಂದೆ ಕ್ಷೇತ್ರದ ಶಾಸಕರಾದವರು ಸ್ಲಂ ಬೋರ್ಡ್ ನಿಂದ 800 ಮನೆಗಳ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ಕೊಡಿಸಿದ್ದರು. ಆದರೆ ಸೂಕ್ತ ಅನುದಾನ ಬಿಡುಗಡೆಯಾಗಿರಲಿಲ್ಲ. ಹೀಗಾಗಿ ಕಾಮಗಾರಿ ಅರ್ಧಕ್ಕೆ ನಿಂತಿತ್ತು. ಇದರಿಂದ ಅನಿವಾರ್ಯವಾಗಿ ಸ್ಲಂ ನಿವಾಸಿಗಳು ಬಾಡಿಗೆ ಮನೆಯಲ್ಲಿ ವಾಸಿಸುವಂತಾಗಿತ್ತು. ಈ ಬಗ್ಗೆ ಜನಪ್ರತಿನಿಧಿಗಳು ಹಾಗೂ ಸ್ಥಳೀಯ ನಿವಾಸಿಗಳು ದೂರು ನೀಡಿದ ಹಿನ್ನೆಲೆಯಲ್ಲಿ ಸರ್ಕಾರದ ಮಟ್ಟದಲ್ಲಿ ಈ ಬಗ್ಗೆ ಚರ್ಚೆ ನಡೆಸಿದ್ದೇನೆ. ಶೀಘ್ರವೇ ಜಿಲ್ಲಾಧಿಕಾರಿ ನೇತೃತ್ವದಲ್ಲಿ ವಸತಿ ಇಲಾಖೆ ಹಿರಿಯ ಅಧಿಕಾರಿಗಳ ಸಭೆಯನ್ನು ಚಿಕ್ಕಮಗಳೂರಿನಲ್ಲಿಯೇ ನಡೆಸಿ ಶೀಘ್ರವೇ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ರಸ್ತೆ ಅಭಿವೃದ್ಧಿ ಕಾಮಗಾರಿಗಳ ಟೆಂಡರ್ ಪಡೆದಿರುವ ಗುತ್ತಿಗೆದಾರರು ನಿಗದಿತ ಅವಧಿಯ ಒಳಗಾಗಿ ಗುಣಮಟ್ಟದ ರಸ್ತೆ ಕಾಮಗಾರಿ ನಡೆಸಿ ಜನರಿಗೆ ಅನುಕೂಲ ಒದಗಿಸಬೇಕು ಎಂದು ಹೇಳಿದರು.

### 600 ವಿದ್ಯಾರ್ಥಿಗಳಿಗೆ 'ಪರಿಣಿತ್–2025' ಪದವಿ ಪ್ರದಾನ

## ಪ್ರಮಾಣಿಕತೆ, ನ್ಯಾಯ, ನೀತಿ ಪಾಲಿಸುವಂತೆ ವಿದ್ಯಾರ್ಥಿಗಳಿಗೆ ಡಾ. ಬಿ.ಕೆ. ರವಿ ಕರೆ

**ಚಿತ್ರದುರ್ಗ :** ಕಠಿಣ ಪರಿಶ್ರಮದ ಜೊತೆಗೆ ಪದವಿಯನ್ನು ಪಡೆದು ಇದರೊಂದಿಗೆ ಕೌಶಲ್ಯವನ್ನು ಹೊಂದುವುದರ ಮೂಲಕ ತಮ್ಮ ಜೀವನದಲ್ಲಿ ಪ್ರಗತಿಯನ್ನು ಕಾಣಬಹುದಾಗಿದೆ ಇದರೊಂದಿಗೆ ಪ್ರಮಾಣಿಕತೆ, ನ್ಯಾಯ, ನೀತಿಯನ್ನು ಪಾಲಿಸುವಂತೆ ವಿದ್ಯಾರ್ಥಿಗಳಿಗೆ ಕೊಪ್ಪಳ ವಿಶ್ವವಿದ್ಯಾನಿಲಯದ ಕುಪತಿಗಳಾದ ಬಿ.ಕೆ.ರವಿ ಕರೆ ನೀಡಿದರು.

2024–25ನೇ ಸಾಲಿನಲ್ಲಿ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ವಿವಿಧ ಅಂಗಸಂಸ್ಥೆಗಳಲ್ಲಿ ಪದವಿ ಶಿಕ್ಷಣ ಪೂರೈಸಿರುವ 'ಸುಮಾರು 600 ವಿದ್ಯಾರ್ಥಿಗಳಿಗೆ ಶುಕ್ರವಾರ ಹಮ್ಮಿಕೊಂಡಿದ್ದ 'ಪರಿಣಿತ್–2025' ಪದವಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ದೇವರಾಜು ಅರಸು ಹೆಸರಿನಲ್ಲಿ ನಡೆಯುತ್ತಿರುವ ಈ ವಿದ್ಯಾ ಸಂಸ್ಥೆಯಲ್ಲಿ ಬಡವರಿಗೆ ಉಚಿತವಾಗಿ ಶಿಕ್ಷಣವನ್ನು ನೀಡುವುದರ ಮೂಲಕ ಚಂದ್ರಪ್ಪರವರು ವಿದ್ಯಾದಾನಿಗಳಾಗಿದ್ದಾರೆ, ಅರಸುರವರ ಚಿಂತನೆಗಳನ್ನು ತಮ್ಮಲ್ಲಿ ಅಳವಡಿಕೆ ಮಾಡಿಕೊಳ್ಳುವುದರ ಮೂಲಕ ಇಲ್ಲಿನ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡುತ್ತಿದ್ದಾರೆ.



ಅರಸು ರವರ ಚಿಂತನೆಗಳನ್ನು ತಮ್ಮಲ್ಲಿ ಮೈಗೂಡಿಸಿಕೊಳ್ಳುವುದರ ಮೂಲಕ ಅವರ ಆದರ್ಶಗಳನ್ನು ಪಾಲಿಸುತ್ತಿದ್ದಾರೆ ಶೋಷಣೆಗೆ ಒಳಗಾದ ಸಮುದಾಯಗಳಿಗೆ ತಮ್ಮ ಸಹಾಯವನ್ನು ಮಾಡುತ್ತಿದ್ದಾರೆ ಎಂದರು.

ಚಿತ್ರದುರ್ಗ ಬರ ಪೀಡಿತ ಪ್ರದೇಶವಾಗಿದೆ ಇಲ್ಲಿ ಶಿಕ್ಷಣವೊಂದೇ ದಾರಿಯಾಗಿದೆ ಶಿಕ್ಷಣ ಇದದಲ್ಲಿ ನಮ್ಮ ಜೀವನವನ್ನು ಸಾಗಿಸಬಹುದಾಗಿದೆ, ಇಲ್ಲಿ ಕಲಿಯುವ ವಿದ್ಯಾರ್ಥಿಗಳು ತಾವುಗಳಿಸುವ ಪದವಿಯ ಜೊತೆಗೆ ಕೌಶಲ್ಯವನ್ನು ಸಹಾ ಗಳಿಸುವಂತೆ ಆಗಬೇಕಿದೆ ಆಗ ಮಾತ್ರ ನೀವುಗಳಿಸಿದ ಅಂಕಗಳಿಗೆ ಬೆಲೆ ಸಿಗುತ್ತದೆ. ಬಿಎಡ್ ಎಂದರೆ ಶಿಕ್ಷಕರುಗಳನ್ನು ತಯಾರು ಮಾಡುವ ಕಾರ್ಯವಾಗಿದೆ, ಇಲ್ಲಿ ಉತ್ತಮವಾಗಿ ಕೆಲಸವನ್ನು ಮಾಡಿದರೆ ಮುಂದೆ ಉತ್ತಮವಾದ ಪ್ರಜೆಗಳು ನಿಮ್ಮಿಂದ ನಿರ್ಮಾಣವಾಗಲು ಸಾಧ್ಯವಿದೆ. ಬಲಿಷ್ಠವಾದ ಭಾರತವನ್ನು ನಿರ್ಮಾಣ ಮಾಡುವುದು ಶಿಕ್ಷಕರಿಂದ ಮಾತ್ರ ಸಾಧ್ಯವಿದೆ. ಯುವ ಪೀಳಿಗೆಯನ್ನು ತಯಾರು ಮಾಡುವ ಹೊಣೆಗಾರಿಕೆ ನಿಮ್ಮ ಮೇಲೆ ಇದೆ, ಸಾಮಾಜಿಕ ಪರಿವರ್ತನೆಯಲ್ಲಿ ಶಿಕ್ಷಕರ ಪಾತ್ರ ಹೆಚ್ಚಾಗಿದೆ ಎಂದು ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯದ ಉಪಕುಲಪತಿಗಳಾದ ಡಾ.ಬಿ.ಡಿ.ಕುಂಬಾರ್ ಮಾತನಾಡಿ, ಬೇರೆ ಕಾಲೇಜುಗಳಿಗೆ ಹೋಲಿಸಿದರೆ ದೇವರಾಜು ಅರಸು ವಿದ್ಯಾಸಂಸ್ಥೆ ಉತ್ತಮವಾದ ಪ್ರಗತಿಯನ್ನು ಸಾಧಿಸಿದೆ, ಇಂದಿನ ದಿನಮಾನದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತಂತ್ರಜ್ಞಾನವನ್ನು ಅವಲಂಬಿಸಿದೆ ನಮ್ಮ ಜ್ಞಾನದ ಬಳಕೆಯನ್ನು ಮಾಡಬೇಕಿದೆ, ಇದರಿಂದ ನಮ್ಮ ಜ್ಞಾನವೂ ಸಹಾ ಬಳಕೆಯಾಗುತ್ತದೆ, ತಾವುಗಳಿಸುವ ಪದವಿಯೊಂದಿಗೆ ಕೌಶಲ್ಯವನ್ನು ಹೊಂದಿದಾಗ ಮಾತ್ರ ನಿಮ್ಮ ಪದವಿಗೆ ಮಾನ್ಯತೆ ಸಿಗುತ್ತದೆ,

## ಜಾತಿ, ಧರ್ಮವಿಲ್ಲ: ಎಚ್.ಡಿ.ತಮ್ಮಯ್ಯ




**ಚಿಕ್ಕಮಗಳೂರು:** ಶ್ರೀ ಅಯ್ಯಪ್ಪಸ್ವಾಮಿ ಸರ್ವಧರ್ಮಿಯರ ಪ್ರತೀಕ. ಸ್ವಾಮಿಯ ಆರಾಧನೆಗೆ ಜಾತಿ, ಧರ್ಮ ಅಡ್ಡಬರುವುದಿಲ್ಲ. ಮಾಲೆ ಹಾಕಿದವರೆಲ್ಲಾ ಅಯ್ಯಪ್ಪನ ಭಕ್ತರೇ ಎಂದು ಶಾಸಕ ಎಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಶ್ರೀ ಬೋಳರಾಮೇಶ್ವರ ದೇವಾಲಯದ ಆವರಣದಲ್ಲಿ ಪ್ರತಿಷ್ಠಾಪಿಸುವ 52 ನೇ ವರ್ಷದ ಶ್ರೀ ಅಯ್ಯಪ್ಪಸ್ವಾಮಿ ಪ್ರತಿಷ್ಠಾಪನಾ ಕಾರ್ಯಕ್ರಮಕ್ಕೆ ಭಾನುವಾರ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ದೇಶದಲ್ಲಿ ಶಬರಿಮಲೆಗೆ ಮಾಲೆ ಹಾಕಿಕೊಂಡು ಹೋಗಿ ಸ್ವಾಮಿ ದರ್ಶನ ಪಡೆಯವುದು ವಿಶೇಷ. 48 ದಿನ ಕಠಿಣ ವ್ರತ ಮಾಡುವವರಿಗೆ ಮೊದಲ ಪಾದ ಎಂದೂ, ಹೊಸದಾಗಿ ಮಾಲೆ ಹಾಕಿದವರನ್ನು ಕನ್ನಿ ಸ್ವಾಮಿಗಳು ಎಂದು ಕರೆಯುವ ಪದ್ಧತಿ ಇದೆ. ನಾನೂ ಕೂಡ 1982 ನೇ ಸಾಲಿನಿಂದಲೂ ಅಯ್ಯಪ್ಪಸ್ವಾಮಿ ಭಕ್ತನಾಗಿದ್ದೇನೆ. ಪೂಜಾಕಾರ್ಯಗಳಲ್ಲಿ ಭಾಗಿಯಾಗುತ್ತಿದ್ದೇನೆ ಎಂದರು. ಸಾಂಸ್ಕೃತಿಕ ನೆಲೆಗಟ್ಟಿನಲ್ಲಿ ಗಟ್ಟಿಯಾಗಿರುವ ದೇಶ ನಮ್ಮದು. ಧರ್ಮದ ನೆಲೆಗಟ್ಟಿನಲ್ಲೂ ನಿಂತಿದೆ. ದೇವನೊಬ್ಬ ನಾಮ ಹಲವು ಎನ್ನುವಂತೆ ಒಬ್ಬೊಬ್ಬರು ಒಂದೊಂದು ದೇವರನ್ನು ಆರಾಧಿಸುತ್ತಾರೆ. ದೇಶದ ರೈತರಿಗೆ ಉತ್ತಮ ಬೆಳೆ, ಬೆಲೆ ನೀಡಲಿ ಎಂದು ಅಯ್ಯಪ್ಪನಲ್ಲಿ ನಾನು ಪ್ರಾರ್ಥಿಸುತ್ತೇನೆ ಎಂದು ಹೇಳಿದರು.

ನಗರಸಭೆ ಅಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ಪ್ರತಿವರ್ಷ ಶ್ರೀ ಬೋಳರಾಮೇಶ್ವರ ದೇವಾಲಯದ ಆವರಣದಲ್ಲಿ ಅತ್ಯಂತ ಶ್ರದ್ಧಾ ಭಕ್ತಿಯಿಂದ ಶ್ರೀ ಅಯ್ಯಪ್ಪಸ್ವಾಮಿಯನ್ನು ಆರಾಧಿಸಿ ಕೊಂಡು ಬಂದಿರುವುದನ್ನು ನೋಡಿ ದ್ದೇವೆ. ಇಂದು ಮಾಲೆ ಹಾಕಿದವರೆಲ್ಲಾ ಜನವರಿ 14 ಕ್ಕೆ ಶಬರಿಮಲೆಯಲ್ಲಿ ಮೂಡಿಬರುವ ಜ್ಯೋತಿ ನೋಡಿ ತಮ್ಮ ವ್ರತಾ ಕೊನೆಗೊಳಿಸುತ್ತರೆ ಎಂದರು.

ನಗರಸಭೆ ಉಪಾಧ್ಯಕ್ಷೆ ಲಲಿತಾಬಾಯಿ, ಸದಸ್ಯರಾದ ಎ.ಸಿ. ಕುಮಾರಗೌಡ, ರೂಪನಾಯಕ್, ಶ್ರೀ ಅಯ್ಯಪ್ಪಸ್ವಾಮಿ ಸೇವಾ ಸಮಿತಿಯ ಅಧ್ಯಕ್ಷ ಅಶೋಕ್ ಸಚ್ಚಿದೇವ್, ಮಾಜಿ ಅಧ್ಯಕ್ಷ ನಾರಾಯಣಗೌಡ, ಸಮಿತಿಯ ಸದಸ್ಯರುಗಳು ಮತ್ತು ಅಯ್ಯಪ್ಪಸ್ವಾಮಿ ಭಕ್ತರು ಮತ್ತಿತರರಿದ್ದರು.

## ಜವಾಹರ್‌ಲಾಲ್ ನೆಹರು ಆದರ್ಶ ಮೌಲ್ಯ ಮೈಗೂಡಿಸಿಕೊಳ್ಳಿ : ಎಂ.ಎಲ್ ಮೂರ್ತಿ




**ಚಿಕ್ಕಮಗಳೂರು:** ಆಧುನಿಕ ಶಿಲ್ಪಿ ಸ್ವತಂತ್ರ ಭಾರತದ ಮೊದಲ ಪ್ರಧಾನಮಂತ್ರಿ ಪಂಡಿತ್ ಜವಾಹರ್‌ಲಾಲ್ ನೆಹರುರವರ ಆದರ್ಶ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಕೊಳ್ಳುವಂತೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಎಲ್.ಮೂರ್ತಿ ಸಲಹೆ ನೀಡಿದರು.

ಅವರು ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಚಿಕ್ಕಮಗಳೂರು ಜಿಲ್ಲಾ, ಬ್ಲಾಕ್ ಕಾಂಗ್ರೆಸ್ ಸಮಿತಿ ಹಾಗೂ ಜವಾಹರ್ ಬಾಲ್ ಮಂಚ್ ವತಿಯಿಂದ ಆಯೋಜಿಸಿದ್ದ ಮಾಜಿ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ 135 ನೆಯ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ನೆಹರುರವರು ನವಭಾರತದ ಸಂಕಲ್ಪವನ್ನು ಹೊತ್ತು ಪ್ರಧಾನಮಂತ್ರಿಯಾಗಿ ಭಾರತವನ್ನು ಸದೃಢವಾಗಿ ಮುನ್ನಡೆಸಿದ್ದಾರೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಿ, 9 ವರ್ಷಗಳ ಕಾಲ ಜೈಲುವಾಸವನ್ನು ಅನುಭವಿಸಿ, ಭಾರತದ ವಿದೇಶಾಂಗ ನೀತಿಯನ್ನು ಉತ್ತಮವಾಗಿ ನಿಭಾಯಿಸಿದ್ದಾರೆ ಎಂದು ಹ 'ೇಳಿದರು.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಸಿದ್ಧಾಂತವೇ ಸಂವಿಧಾನವಾಗಿದೆ. ಜಾತ್ಯಾತೀತ ನೆಲೆಗಟ್ಟಿನಲ್ಲಿ ಸಂವಿಧಾನಕ್ಕೆ ಗೌರವವನ್ನು ಕೊಡಲಾಗುತ್ತಿದೆ. ದೇಶವು ಪ್ರಗತಿ ಕಾಣಲು ನೆಹರು ಕಾರಣವಾಗಿದ್ದಾರೆ. ದೇಶ ಮತ್ತು ಹೊರದೇಶಗಳ ಸಂಬಂಧಗಳನ್ನು ಸುಧಾರಿಸುವಲ್ಲಿ ಯಶಸ್ಸು ಕಂಡ ಧೀಮಂತ ನಾಯಕ ನೆಹರು ಎಂದು ಬಣ್ಣಿಸಿದರು.

ರಾಜ್ಯ ಕಾಂಗ್ರೆಸ್ ಹಿಂದುಳಿದ ವರ್ಗಗಳ ಮುಖಂಡ ಸಿ.ಟಿ.ಶಿವರಾಂ ಮಾತನಾಡಿ, ನೆಹರುರವರಿಗೆ ಮಕ್ಕಳೆಂದರೆ ತುಂಬಾ ಪ್ರೀತಿ. ಅಧಿಕಾರವಧಿಯಲ್ಲೂ ಮಕ್ಕಳ ಜೊತೆ ಬೆರೆತು ಅವರೊಂದಿಗೆ ಅನ್ಯೋನತೆಯಿಂದ ಕಾಲ ಕಳೆಯುತ್ತಿದ್ದರು. ಅವರ ಆದರ್ಶ ಮೌಲ್ಯಗಳನ್ನು ನಾವುಗಳು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ನಗರ ಕಾಂಗ್ರೆಸ್ ಅಧ್ಯಕ್ಷ ಪಿ.ತನೋಜ್ ಕುಮಾರ್ ನಾಯ್ಡು ಮಾತನಾಡಿ, ನೆಹರುರವರು ಹಾಕಿಕೊಟ್ಟಿರುವ ಹಾದಿಯಲ್ಲಿ ಯುವ ಜನಾಂಗ ಸಾಗಬೇಕು. ಅವರ ಅಧಿಕಾರವಧಿಯಲ್ಲಿ ರೈತರಿಗೆ, ಯುವಜನಾಂಗಕ್ಕೆ ಉತ್ತಮವಾದ ಕಾರ್ಯಗಳನ್ನು ರೂಪಿಸಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಜವಾಹರ್ ಬಾಲ್ ಮಂಚ್ ಅಧ್ಯಕ್ಷ ಹಾಗೂ ನಗರಸಭೆ ಸದಸ್ಯ ಪರಮೇಶ್ ರಾಜ್ ಅರಸ್ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇಶದ ಪ್ರಧಾನಮಂತ್ರಿಯಾಗಿ ಆಡಳಿತ ನಡೆಸಿದ ನೆಹರುರವರು ಉತ್ತಮವಾದ ಕೊಡುಗೆಗಳನ್ನು ನೀಡಿದ್ದಾರೆ. ಅವರ ಜನ್ಮ ದಿನಾಚರಣೆಯನ್ನು ಪ್ರತಿದಿನ ನೆನೆಸುವಂತಾಗಬೇಕು ಎಂದು ತಿಳಿಸಿದರು.

ಜವಾಹರಲಾಲ್ ನೆಹರುರವರ ಭಾವಚಿತ್ರಕ್ಕೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸಾಮೂಹಿಕವಾಗಿ ಪುಷ್ಪಾರ್ಚನೆ ಮಾಡಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**